|| ಜೈ ಭೀಮ್ ||

|| ನಮೋ ಬುದ್ಧಯಾ ||

ಅರುಣ್ ಕುಮಾರ್ .ಕೆ ಅವರ ಸಾರಥ್ಯದಲ್ಲಿ

# ವಾಯ್ಸ್ ಆಫ್ ಅರುಣ್

ಕನ್ನಡ ದಿನಪತ್ರಿಕೆ

ಇದು ಭ್ರಷ್ಟರ ವಿರುದ್ಧ

VOICE OF ARUN KANNADA DAILY

PRGI : KARKAN/2022/82620

ಸಂಪುಟ : 1 | ಶುಕ್ರವಾರ, ಮಾರ್ಚ್ 6, 2026 | ಪುಟ: 4 | ಬೆಲೆ 1.00 | ಸಂಚಿಕೆ : 178

Volume : 1 | Friday, March 6, 2026 | Pages : 4 | Rs. 1.00 | Issue : 178





## ಯುರೋಪ್–ಭಾರತದ ಸಂಬಂಧಗಳು 'ಸುವರ್ಣ ಯುಗ' ಪ್ರವೇಶಿಸುತ್ತಿವೆ : ಪ್ರಧಾನಿ ಮೋದಿ ಬಣ್ಣನೆ

ನವದೆಹಲಿ: ನಾಲ್ಕು ದಿನಗಳ ಭಾರತ ಭೇಟಿಯಲ್ಲಿರುವ ಫಿನ್‌ಲ್ಯಾಂಡ್ ಅಧ್ಯಕ್ಷ ಅಲೆಕ್ಸಾಂಡರ್ ಸ್ಟಬ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಇಲ್ಲಿನ ಹೈದರಾಬಾದ್ ಹೌಸ್‌ನಲ್ಲಿ ಇಂದು ದ್ವಿಪಕ್ಷೀಯ ಸಭೆ ನಡೆಸಿದರು. ಎರಡೂ ಕಡೆಯವರು ಉಭಯ ರಾಷ್ಟ್ರಗಳ ನಡುವಿನ ಸಂಬಂಧ ಮತ್ತು ಹಲವು ಒಪ್ಪಂದಗಳ ಕುರಿತು ಚರ್ಚಿಸಿದರು. ಇದೇ ವೇಳೆ ಮಾತನಾಡಿದ ಪ್ರಧಾನಿ ಮೋದಿ ಅವರು, ವಿಶ್ವದ ಎರಡು ಪ್ರಮುಖ ರಾಜತಾಂತ್ರಿಕ ಶಕ್ತಿಗಳಾದ ಭಾರತ ಮತ್ತು ಯುರೋಪ್ ತಮ್ಮ ಸಂಬಂಧದಲ್ಲಿ ಸುವರ್ಣ ಹಂತವನ್ನು ಪ್ರವೇಶಿಸುತ್ತಿವೆ ಎಂದು ಬಣ್ಣಿಸಿದರು.

ಫಿನ್‌ಲ್ಯಾಂಡ್ ಅಧ್ಯಕ್ಷರಂತಹ ಅನುಭವಿ ಮತ್ತು ಕ್ರಿಯಾತ್ಮಕ ನಾಯಕ ಈ ವರ್ಷದ ರೈಸಿನಾ ಸಂವಾದದಲ್ಲಿ ಮುಖ್ಯ ಅತಿಥಿಯಾಗಿರುವುದು ಭಾರತಕ್ಕೆ ಅತ್ಯಂತ ಗೌರವ ಮತ್ತು ಸಂತೋಷದ ವಿಷಯ ಎಂದರು. ಜಗತ್ತು ಅಸ್ಥಿರತೆ ಮತ್ತು ಅನಿಶ್ಚಿತತೆಯನ್ನು ಎದುರಿಸುತ್ತಿದೆ. ಉಕ್ರೇನ್‌ನಿಂದ ಪಶ್ಚಿಮ ಏಷ್ಯಾದವರೆಗೆ ಸಂಘರ್ಷಗಳು ನಡೆಯುತ್ತಿದೆ. ಇಂತಹ ವಾತಾವರಣದಲ್ಲಿ ವಿಶ್ವದ ಎರಡು ಪ್ರಮುಖ ಶಕ್ತಿಗಳಾದ ಭಾರತ ಮತ್ತು ಯುರೋಪ್ ತಮ್ಮ ಸಂಬಂಧದಲ್ಲಿ ಮಹತ್ತರ ಬೆಳವಣಿಗೆ ಸಾಧಿಸಿವೆ. ನಮ್ಮ ನಡುವಿನ ಸಹಕಾರವು ಜಾಗತಿಕ ಸ್ಥಿರತೆ, ಅಭಿವೃದ್ಧಿ ಮತ್ತು ಸಮೃದ್ಧಿಗೆ ಹೊಸ ಶಕ್ತಿ ತುಂಬಲಿದೆ" ಎಂದು ಪ್ರಧಾನಿ ಮೋದಿ ಅಭಿಪ್ರಾಯಪಟ್ಟರು. ಇತ್ತೀಚೆಗೆ ನಡೆದ ಐತಿಹಾಸಿಕ ಭಾರತ–ಯುರೋಪಿಯನ್ ಯೂನಿಯನ್ ಮುಕ್ತ ವ್ಯಾಪಾರ ಒಪ್ಪಂದವನ್ನು ಉಲ್ಲೇಖಿಸಿದ ಪ್ರಧಾನಿ, ಒಪ್ಪಂದವು ಭಾರತ ಮತ್ತು ಫಿನ್ಲ್ಯಾಂಡ್ ನಡುವಿನ ವ್ಯಾಪಾರ, ಹೂಡಿಕೆ ಮತ್ತು ತಂತ್ರಜ್ಞಾನ ಸಹಕಾರವನ್ನು ಮತ್ತಷ್ಟು ಬಲಪಡಿಸುತ್ತದೆ. ಡಿಜಿಟಲ್ ತಂತ್ರಜ್ಞಾನ, ಮೂಲಸೌಕರ್ಯ ಮತ್ತು ಸುಸ್ಥಿರ ಕ್ಷೇತ್ರಗಳಲ್ಲಿ ಎರಡೂ ರಾಷ್ಟ್ರಗಳು ಪ್ರಮುಖ ಪಾಲುದಾರರಾಗಿವೆ ಎಂದು ಹೇಳಿದರು.

ಫಿನ್‌ಲ್ಯಾಂಡಿನ ನೋಕಿಯಾದ ಮೊಬೈಲ್ ಫೋನ್‌ಗಳು ಮತ್ತು ಟೆಲಿಕಾಂ ನೆಟ್‌ವರ್ಕ್‌ಗಳು ಲಕ್ಷಾಂತರ ಭಾರತೀಯರ ಅಗತ್ಯವಾಗಿವೆ. ಫಿನ್ನಿಷ್ ಎಂಜಿನಿಯರ್‌ಗಳ ನೆರವಿನೊಂದಿಗೆ ಚೆನಾಬ್ ನದಿಯ ಮೇಲೆ ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆ



ನಿರ್ಮಿಸಿದ್ದೇವೆ. ಫಿನ್ಲೆಂಡ್‌ನ ಪಾಲುದಾರಿಕೆಯೊಂದಿಗೆ, ನುಮಾಲಿಗಢ ಸಂಸ್ಕರಣಾಗಾರದಂತಹ ಯೋಜನೆಗಳು ಮುಂದುವರಿಯುತ್ತಿವೆ" ಎಂದು ಅವರು ವಿವರಿಸಿದರು. "6G ಟೆಲಿಕಾಂನಿಂದ ಶುದ್ಧ ಇಂಧನದವರೆಗೆ ಮತ್ತು ಕ್ವಾಂಟಮ್ ಕಂಪ್ಯೂಟಿಂಗ್‌ನಿಂದ ಇತರ ಹೈಟೆಕ್ ವಲಯಗಳವರೆಗೆ ನಮ್ಮ ಸಹಕಾರವು ಹೊಸ ಆವೇಗ ಮತ್ತು ಶಕ್ತಿಯನ್ನು ಪಡೆಯುತ್ತಿದೆ. ನಮ್ಮ ಸಹಯೋಗವು ರಕ್ಷಣೆ, ಬಾಹ್ಯಾಕಾಶ, ಸೆಮಿಕಂಡಕ್ಟರ್‌ಗಳು ಮತ್ತು ಇತರ ನಿರ್ಣಾಯಕ ತಂತ್ರಜ್ಞಾನಗಳಂತಹ ಕಾರ್ಯತಂತ್ರದ ಕ್ಷೇತ್ರಗಳಿಗೂ ವಿಸ್ತರಿಸುತ್ತದೆ" ಎಂದು ಅವರು ಹೇಳಿದರು.

"ರಕ್ಷಣಾ, ಬಾಹ್ಯಾಕಾಶ, ಅರೆವಾಹಕಗಳು ಮತ್ತು ನಿರ್ಣಾಯಕ ಖನಿಜಗಳಂತಹ ಪ್ರಮುಖ ವಲಯಗಳಲ್ಲಿನ ಪಾಲುದಾರಿಕೆಯು ದೊಡ್ಡದಾಗಿದೆ. ಭಾರತ ಮತ್ತು ಫಿನ್‌ಲ್ಯಾಂಡ್ ನಂತಹ ಪ್ರಜಾಪ್ರಭುತ್ವ ಮತ್ತು ಜವಾಬ್ದಾರಿಯುತ ದೇಶಗಳ ನಡುವಿನ ಈ ಕಾರ್ಯತಂತ್ರದ ಪಾಲುದಾರಿಕೆಯು ಇಡೀ ಜಗತ್ತಿಗೆ ತಂತ್ರಜ್ಞಾನ ಮತ್ತು ಪೂರೈಕೆ ಸರಪಳಿಗಳನ್ನು ಒದಗಿಸಲಿದೆ" ಎಂದು ಪ್ರಧಾನಿ ಮೋದಿ ಹೇಳಿದರು. ಜಾಗತಿಕ ಸಂಘರ್ಷಗಳ ಕುರಿತ ಮಾತು: ಇರಾನ್ ಯುದ್ಧವನ್ನು ಉಲ್ಲೇಖಿಸದೇ ಪ್ರಧಾನಿ ಮೋದಿ ಅವರು, ಭಾರತ ಮತ್ತು ಫಿನ್‌ಲ್ಯಾಂಡ್ ಎರಡೂ ಕಾನೂನಿನ ನಿಯಮ, ಸಂವಾದ ಮತ್ತು ರಾಜತಾಂತ್ರಿಕತೆಯನ್ನು ನಂಬುತ್ತವೆ. ಮಿಲಿಟರಿ ಸಂಘರ್ಷ ಮಾತ್ರ ಎಲ್ಲ ಸಮಸ್ಯೆಗಳಿಗೂ ಪರಿಹಾರವಲ್ಲ ಎಂದು ನಾವು ಸರ್ವಾನು ಮತದಿಂದ ಒಪ್ಪುತ್ತೇವೆ ಎಂದರು. ಉಕ್ರೇನ್ ಆಗಿರಲಿ ಅಥವಾ ಪಶ್ಚಿಮ ಏಷ್ಯಾವಾಗಲಿ, ಸಂಘರ್ಷ ಮತ್ತು ಶಾಂತಿಗೆ ಆರಂಭಿಕ ಅಂತ್ಯಕ್ಕಾಗಿ ನಾವು ಎಲ್ಲ ಪ್ರಯತ್ನಗಳನ್ನು ಬೆಂಬಲಿಸುವುದನ್ನು ಮುಂದುವರಿಸುತ್ತೇವೆ. ಬೆಳೆಯುತ್ತಿರುವ ಜಾಗತಿಕ ಸವಾಲುಗಳನ್ನು ಎದುರಿಸಲು ಜಾಗತಿಕ ಸಂಸ್ಥೆಗಳ ಸುಧಾರಣೆ ಅಗತ್ಯ ಮಾತ್ರವಲ್ಲದೆ ತುರ್ತು ಅವಶ್ಯಕ ಎಂದು ಹೇಳಿದರು.

## ಸಂಚಾರಿ ಕಾವೇರಿ ನೀರು ಯೋಜನೆಗೆ ಮತ್ತೆ 60 ಟ್ಯಾಂಕರ್‌ಗಳು ಸೇರ್ಪಡೆ



ಬೆಂಗಳೂರು: ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಬಿಸಿಲ ಬೇಗೆ ಹೆಚ್ಚುತ್ತಿದ್ದು, ನಗರದ ಜನರಿಗೆ ಸಮಂಜಸ ಬೆಲೆಯಲ್ಲಿ ಮತ್ತು ಸುರಕ್ಷಿತ ಮೂಲಗಳಿಂದ ಟ್ಯಾಂಕರ್ ನೀರನ್ನು ಪಡೆಯಲು ಸಹಾಯ ಮಾಡಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯೂಎಸ್‌ಎಸ್ಬಿ) ಆಗಸ್ಟ್ 2025 ರಲ್ಲಿ ಸಂಚಾರಿ ಕಾವೇರಿ ನೀರು ಕಾರ್ಯಕ್ರಮವನ್ನು ಪ್ರಾರಂಭಿಸಿತು. ಇದಕ್ಕೆ ಈಗ ಇನ್ನೂ 60 ಟ್ಯಾಂಕರ್‌ಗಳನ್ನು ಸೇರಿಸ 'ಲಾಗುತ್ತಿದೆ. ಜನರು ಆನ್‌ಲೈನ್‌ನಲ್ಲೂ ಟ್ಯಾಂಕರ್ ನೀರಿಗಾಗಿ ನೋಂದಾಯಿಸಿ ಕೊಳ್ಳಬಹುದು ಮತ್ತು ಈ ಸೇವೆಗಳನ್ನು ಪಡೆಯಬಹುದು.

"ಹೊಸದಾಗಿ ಸೇರ್ಪಡೆಯಾದ 110 ಹಳ್ಳಿಗಳಲ್ಲಿ ವಾಸಿಸುವ ಜನರ ನೀರಿನ ಕೊರತೆಯನ್ನು ನಿಭಾಯಿಸಲು ಇದನ್ನು ಪ್ರಾರಂಭಿಸಲಾಗಿದೆ. ನಮ್ಮಲ್ಲಿ ಈಗ 60 ಟ್ಯಾಂಕರ್‌ಗಳಿವೆ ಮತ್ತು ನಾವು ಇನ್ನೂ 60 ಟ್ಯಾಂಕ್‌ಗಳನ್ನು ಸೇರಿಸುತ್ತಿದ್ದೇವೆ" ಎಂದು ಬಿಡಬ್ಲ್ಯೂಎಸ್‌ಎಸ್ಬಿ ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ವಿ ಅವರು ತಿಳಿಸಿದ್ದಾರೆ.

ಬೆಂಗಳೂರಿನ ಉತ್ತರ ಮತ್ತು ಪೂರ್ವ ಪ್ರದೇಶಗಳಲ್ಲಿ ನೀರಿನ ಕೊರತೆ ಇದೆ ಎಂದು ಒಪ್ಪಿಕೊಂಡ ಅವರು, ಬೇಸಿಗೆಯಲ್ಲಿ ಬೋರ್‌ವೆಲ್‌ಗಳು ಒಣಗುತ್ತವೆ ಎಂದು ಹೇಳಿದರು. "ದಕ್ಷಿಣ ಮತ್ತು ಪಶ್ಚಿಮ ವಲಯಗಳಲ್ಲಿ ಕಾವೇರಿ ನೀರಿನ ಉತ್ತಮ ಸರಬರಾಜು ಇದೆ. ನಾವು ಈ ಪ್ರದೇಶಗಳ ಮೇಲೆ ಹೆಚ್ಚು ಗಮನಹರಿಸುವ ಅಗತ್ಯವಿಲ್ಲ. ಆದರೆ ಉತ್ತರ ಮತ್ತು ಪೂರ್ವದಲ್ಲಿ, ಪ್ರತಿ ವರ್ಷ ನೀರಿನ ಸಮಸ್ಯೆ ಆಗುತ್ತದೆ. ಹೀಗಾಗಿ ನಾವು ಸಂಚಾರಿ ಕಾವೇರಿ ನೀರಿನ ಸೇವೆಗಳನ್ನು ಒದಗಿಸುತ್ತಿದ್ದೇವೆ. 5,000 ಲೀಟರ್ ನೀರಿನ ಸಾಮರ್ಥ್ಯದ ಖಾಸಗಿ ನೀರಿನ ಟ್ಯಾಂಕರ್‌ಗಳನ್ನು ಮತ್ತು ಅಗತ್ಯವಿದ್ದರೆ ಮಿನಿ ವಾಟರ್ ಟ್ಯಾಂಕರ್‌ಗಳನ್ನು ನಿಯೋಜಿಸುತ್ತೇವೆ" ಎಂದರು.

## "ತೆರಿಗೆ ಹೇರುವ ರಾಮಯ್ಯನಿಂದ ರಾಜ್ಯದಲ್ಲಿ 1.15 ಲಕ್ಷ ಕೋಟಿ ಸಾಲದ ಬಜೆಟ್ ಮಂಡನೆ"

ಬೆಂಗಳೂರು: ಕರ್ನಾಟಕ ಸರ್ಕಾರದ ಸಾಲದ ಬಗ್ಗೆ ಸ್ಪಷ್ಟನೆ ನೀಡಿದ್ದ ಸಿದ್ದರಾಮಯ್ಯ ಅವರು ವಿತ್ತೀಯ ಕೊರತೆ, ಕೇಂದ್ರದ ಅನುದಾನ ಅಸಹಕಾರ ಸೇರಿದಂತೆ ಹಲವು ಅಂಶಗಳನ್ನು ಬುಧವಾರ ವಿವರಿಸಿದ್ದರು. ಇದರ ಬೆನ್ನಲ್ಲೆ ಮುಖ್ಯಮಂತ್ರಿಗಳು 1.15 ಲಕ್ಷ ಕೋಟಿ ರೂ. ಸಾಲ ಮಾಡಿ ಕರ್ನಾಟಕ ಬಜೆಟ್ ಮಂಡಿಸಲಿದ್ದಾರೆ. ಜನರಿಗೆ ಮತ್ತಷ್ಟು ತೆರಿಗೆ ಹೊರೆ ಹಾಕಲಾಗುತ್ತದೆ ಎಂದು ವಿಪಕ್ಷ ನಾಯಕ ಆರ್.ಅಶೋಕ ಹೇಳಿದರು. ನಗರದಲ್ಲಿ



ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಎಂದರೆ ತೆರಿಗೆ ಹೇರುವ ರಾಮಯ್ಯ ಎಂದು ಲೇವಡಿ ಮಾಡಿದರು. 2026ರ ಕೇಂದ್ರ ಬಜೆಟ್‌ನಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್ ತೆರಿಗೆಗಳ ಹೊರೆಯನ್ನು ಕಡಿಮೆ ಮಾಡಿದ್ದಾರೆ. ಆದರೆ ಸಿಎಂ ಸಿದ್ದರಾಮಯ್ಯ ತಿಂಗಳಿಗೆ ನಾಲ್ಕರಂತೆ ತೆರಿಗೆ ಹಾಕುತ್ತಾರೆ. ಈಗಾಗಲೇ 36 ತೆರಿಗೆಗಳನ್ನು ಜನರ ಮೇಲೆ ಹೇರಿದ್ದಾರೆ.

ಚುನಾವಣೆಗೆ ಮುನ್ನ ಜನರ ಮೇಲೆ ಹೊರೆ ಹಾಕದೆ ಗ್ಯಾರಂಟಿ ತರುತ್ತೇವೆ ಎಂದು ಭರವಸೆ ನೀಡಿ, ಈಗ ತೆರಿಗೆಗಳ ಹೊರೆ ಹೇರಿದ್ದಾರೆ. ಸಿದ್ದರಾಮಯ್ಯನವರ ಅವಧಿ ಮುಗಿಯುವ ವೇಳೆಗೆ ಒಟ್ಟು ಸಾಲ 8 ಲಕ್ಷ ಕೋಟಿ ರೂ. ಮೀರಲಿದೆ. ಇದರಿಂದಾಗಿ ಆರ್ಥಿಕ ಶಿಸ್ತು ಮೀರಿ ಹೋಗುತ್ತದೆ. ಇದು ಅವರ ಕಣ್ಕಟ್ಟು ವಿದ್ಯೆ ಎಂದು ಟೀಕಿಸಿದರು. ಇಲ್ಲದ ಆದಾಯವನ್ನು ಸೃಷ್ಟಿಸಿ ಜಿಎಸ್‌ಡಿಪಿಗೆ ಹೋಲಿಕೆ ಮಾಡುವ ಶೇಕಡ ಪ್ರಮಾಣವನ್ನು ಕಡಿಮೆ ಇರುವಂತೆ ಸಿದ್ದರಾಮಯ್ಯ ತೋರಿಸುತ್ತಾರೆ. ಈ ಮೂಲಕ ಆರ್ಥಿಕ ಶಿಸ್ತು ಪಾಲಿಸಿದ್ದೇವೆ ಎಂದು ಸುಳ್ಳಾಗಿ ತೋರಿಸುತ್ತಾರೆ. ಬಜೆಟ್ ಎಂದರೆ ಆದಾಯ ಹೆಚ್ಚಿಸಿ, ಜನರಿಗೆ ಹೊರೆಯಾಗದಂತೆ ಮಾಡಬೇಕು. ಇದನ್ನೇ ಆರ್ಥಿಕ ಪರಿಣಿತಿ ಎಂದು ಹೇಳುತ್ತಾರೆ. ಸಾಲ ಮಾಡಿ ಸರ್ಕಾರ ನಡೆಸಲು ಇವರೇ ಬೇಕಿಲ್ಲ. ರಾಜ್ಯದ ಆರ್ಥಿಕ ಪರಿಸ್ಥಿತಿ ಸುಧಾರಣೆಯಾಗಲಿದೆ ಎಂದು ಜನರು ಅಂದುಕೊಂಡಿದ್ದು ಸಂಪೂರ್ಣ ಸುಳ್ಳಾಗಿದೆ.

**ಜನರ ಮೇಲೆ ಮತ್ತಷ್ಟು ತೆರಿಗೆ ಹೊರೆ**

ಬಿಜೆಪಿ ಅಧಿಕಾರದಲ್ಲಿದ್ದಾಗ ಸಿಎಂ ಬಸವರಾಜ ಬೊಮ್ಮಾಯಿ ಸಾಲ ಇಲ್ಲದ ಬಜೆಟ್ ಮಂಡಿಸಿದ್ದರು. ಇನ್ನೂ 24,400 ಕೋಟಿ ರೂ. ಸಾಲ ಪಡೆಯಬಹುದಿತ್ತು. ಅಂತಹ ಅವಕಾಶವಿದ್ದರೂ ಅವರು ಆಗ ಸಾಲ ಪಡೆದಿರಲಿಲ್ಲ. ಕಾಂಗ್ರೆಸ್ ಮಾತ್ರ ಪ್ರತಿ ವರ್ಷ ಸಾಲ ಪಡೆಯುತ್ತಲೇ ಇದೆ. ಈ ಬಾರಿ 1.15 ಲಕ್ಷ ಕೋಟಿ ರೂ. ಸಾಲ ಪಡೆಯಲಿದ್ದಾರೆ. ಸಾಲವನ್ನು ಜನರ ತಲೆ ಮೇಲೆ ಹೇರುವ ಬಜೆಟ್‌ನ್ನು ಈ ಬಾರಿ ಮಂಡಿಸುತ್ತಾರೆ. ನಂಜುಂಡಪ್ಪ ವರದಿಯಲ್ಲಿದ್ದ ಹಿಂದುಳಿದ ತಾಲೂಕುಗಳ ಸಂಖ್ಯೆ, ಗೋವಿಂದರಾವ್ ವರದಿಯಲ್ಲಿ ಇನ್ನಷ್ಟು ಅಧಿಕವಾಗಿದೆ. ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಪ್ರತಿ ವರ್ಷ 15,000 ಕೋಟಿ ರೂ. ಮೀಸಲಿಡಬೇಕೆಂದು ಸರ್ಕಾರಕ್ಕೆ ಪತ್ರ ಬರೆದಿದ್ದೇನೆ. ಈ ಬಜೆಟ್‌ನಲ್ಲಿ ಸರ್ಕಾರ ಇಷ್ಟೂ ಅನುದಾನವನ್ನು ಮೀಸಲಿಡಬೇಕು ಎಂದು ಅವರು ಒತ್ತಾಯಿಸಿದರು. ಮುಖ್ಯಮಂತ್ರಿ ಹುದ್ದೆಗಾಗಿ ಕಚ್ಚಾಟ ನಡೆಯುತ್ತಿದೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗದಿದ್ದರೆ ರಾಜೀನಾಮೆ ನೀಡುತ್ತೇನೆ ಎಂದು ಶಾಸಕ ಇಕ್ಬಾಲ್ ಹುಸೇನ್ ಹೇಳಿದ್ದಾರೆ. ಇಂತಹ ಸ್ಥಿತಿಯಲ್ಲಿ ಮಂಡಿಸುವ ಬಜೆಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿಯವರನ್ನು ಟೀಕಿಸುವ ಅಂಶಗಳಿರುತ್ತದೆ. ಆದೇಶ ಹೊರಡಿಸಲಾಗಿದೆ, ಅಭಿಪ್ರಾಯ ಸಂಗ್ರಹಣೆ ಎಂಬುದನ್ನೇ ಸಾಧನೆಯಾಗಿ ಈ ಬಜೆಟ್‌ನಲ್ಲಿ ತೋರಿಸುತ್ತಾರೆ. ಪೂರ್ಣವಾಗಿರುವ ಯೋಜನೆಗಳ ಬಗ್ಗೆ ಹೆಚ್ಚಿನ ಮಾಹಿತಿ ಇರುವುದಿಲ್ಲ. ತೆರಿಗೆಗಳನ್ನು ಸಂಗ್ರಹಿಸುವುದರಲ್ಲೂ ಸರ್ಕಾರ ವಿಫಲವಾಗಿದ್ದು, ಕೇವಲ ಶೇಕಡಾ 48 ಸಾಧನೆ ಆಗಿದೆ. ನಿಗದಿ ಮಾಡಿದ ಅನುದಾನದಲ್ಲಿ ಕೆಲವು ಇಲಾಖೆಗಳಿಗೆ ಶೇಕಡಾ 40 ಹಣವನ್ನೂ ಬಿಡುಗಡೆ ಮಾಡಿಲ್ಲ. ಹೀಗಾಗಿ ಇಲಾಖೆಗಳಿಗೆ ಖರ್ಚು ಮಾಡಲು ಹಣವೇ ಇರುವುದಿಲ್ಲ ಎಂದರು.

## ಕಬ್ಬಿಗೆ ಬೆಂಬಲ ಬೆಲೆ ಬಿಕ್ಕಟ್ಟು : ರಾಜ್ಯ ಬಜೆಟ್‌ನಲ್ಲಿ ಪರಿಹಾರದ ನಿರೀಕ್ಷೆಯಲ್ಲಿ ಬೆಳೆಗಾರರು!

ಬೆಳಗಾವಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2026–27ನೇ ಸಾಲಿನ ರಾಜ್ಯ ಬಜೆಟ್ ಮಂಡಿಸಲು ಸಜ್ಜಾಗುತ್ತಿರುವಂತೆಯೇ ರಾಜ್ಯದ ಕೃಷಿ ವಲಯದಾದ್ಯಂತ ನಿರೀಕ್ಷೆಗಳು ಗರಿಗೆದರಿವೆ. ರಾಜಕೀಯವಾಗಿ ಮಹತ್ವವಾಗಿ ರುವ ಉತ್ತರ ಕರ್ನಾಟಕದ ಕಬ್ಬು ಪ್ರದೇಶದಿಂದ, ಬರಪೀಡಿತ ಪ್ರದೇಶಗಳವರೆಗೆ ನೀರಾವರಿ ಪರಿಹಾರಕ್ಕಾಗಿ ಕಾಯುತ್ತಿವೆ.

ಕಬ್ಬಿನ ಸಮಸ್ಯೆಗೆ ಹಲವು ದಿನಗಳಿಂದ ಪರಿಹಾರ ಸಿಕ್ಕಿಲ್ಲ. ಕಡಿಮೆ ಬೆಲೆ ಮತ್ತು ಬಾಕಿ ಪಾವತಿಯಲ್ಲಿ ವಿಳಂಬದ ಬಗ್ಗೆ ಕಬ್ಬು ಬೆಳೆಗಾರರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೇಂದ್ರದ ಎಫ್ ಆರ್ ಪಿ ದರದಂತೆ ರಾಜ್ಯ ಸರ್ಕಾರ ಮಧ್ಯಂತರ ಪರಿಹಾರವನ್ನು ಹೆಚ್ಚಿಸಬೇಕು ಎಂಬುದು ರೈತರ ಬೇಡಿಕೆಯಾಗಿದೆ. ರಸಗೊಬ್ಬರ, ಕಾರ್ಮಿಕರು ಮತ್ತು ಸಾಗಣಿಕೆ ಸೇರಿದಂತೆ ಸಾಕಷ್ಟು ಖರ್ಚಿನಿಂದ ರೈತರು ಬಳಲುತ್ತಿದ್ದಾರೆ.

ಕಬ್ಬಿನ ಕಾರ್ಖಾನೆಗಳು ಮತ್ತು ಬೆಳೆಗಾರರ ನಡುವೆ ಹಣ ಪಾವತಿ ಬಿಕ್ಕಟ್ಟು ಪರಿಹರಿಸಲು ಕಟ್ಟುನಿಟ್ಟಾದ ಪಾವತಿ ಗಡುವನ್ನು ಕಡ್ಡಾಯ ಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

## KEA: ಅರ್ಜಿ ಸಲ್ಲಿಕೆ ದಿನಾಂಕ ವಿಸ್ತರಣೆ

ಬೆಂಗಳೂರು: ಕರ್ನಾಟಕ ಪದವಿ ಪೂರ್ವ ಸಾಮಾನ್ಯ ಪ್ರವೇಶ ಪರೀಕ್ಷೆ (UGCET-2026) ಹಾಗೂ ರಾಷ್ಟ್ರೀಯ ಸಾಮಾನ್ಯ ಮತ್ತು ಪ್ರವೇಶ ಪರೀಕ್ಷೆ–ಸ್ನಾತಕೋತ್ತರ (PGNEET 2026) ಅಭ್ಯರ್ಥಿಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) https://cetonline. karnataka.gov.in/kea/ ಮಹತ್ವದ ಮಾಹಿತಿ ನೀಡಿದೆ. ವೃತ್ತಿಪರ ಕೋರ್ಸ್‌ಗಳ ಪ್ರವೇಶದ ಅರ್ಜಿ ಸಲ್ಲಿಕೆ ಹಾಗೂ ನೋಂದಣಿ ದಿನಾಂಕವನ್ನು ವಿಸ್ತರಣೆ ಮಾಡಿದೆ. ಯುಜಿಸಿಇಟಿ ಎಂಜಿನಿಯರಿಂಗ್ ಸೇರಿದಂತೆ ಇತರ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಸಲ್ಲಿಸಿರುವ ಹಾಗೂ ನೋಂದಣಿ ಮಾಡಿರುವ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಗೆ ಮಾರ್ಚ್ 7 ರವರೆಗೆ ಅವಕಾಶ ನೀಡಿ ಸಮಯ ವಿಸ್ತರಿಸಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಆಡಳಿತಾಧಿಕಾರಿ ಇಸ್ಲಾವುದ್ದೀನ್ ಗದ್ಯಾಳ ಅವರು ಮಾಹಿತಿ ನೀಡಿದರು.

ವೃತ್ತಿಪರ ಕೋರ್ಸ್‌ಗಳ ಪ್ರವೇಶ ಬಯಸಿ ಒಟ್ಟು 3.47 ಲಕ್ಷ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಒಟ್ಟು 3.36 ಲಕ್ಷ ಮಂದಿ ನಿಗದಿತ ಶುಲ್ಕ ಪಾವತಿಸಿದ್ದಾರೆ. ಇನ್ನೂ 9 ಸಾವಿರ ಮಂದಿ ಶುಲ್ಕ ಪಾವತಿಸುವುದು ಬಾಕಿ ಇದೆ. ಅವರಿಗೆ ಅನುಕೂಲ ಆಗಲಿ ಎಂದು ದಿನಾಂಕ ವಿಸ್ತರಣೆ ಮಾಡಲಾಗಿದೆ. ಇನ್ನು ಪಿಜಿನೀಟ್ ಸ್ನಾತಕೋತ್ತರ ವೈದ್ಯಕೀಯ ಕೋರ್ಸ್ ಪ್ರವೇಶಕ್ಕೆ 3ನೇ ಸುತ್ತಿನಲ್ಲಿ ಸೀಟು ಹಂಚಿಕೆಯಾದ ವರಿಗೆ ಶುಲ್ಕ ಪಾವತಿಸಿ ಕಾಲೇಜಿಗೆ ವರದಿ ಮಾಡಿಕೊಳ್ಳಲು ಮಾರ್ಚ್ 5ರವರೆಗೆ ದಿನಾಂಕವನ್ನು ವಿಸ್ತರಿಸಲಾಗಿತ್ತು. ಕೆಲವು ಅಭ್ಯರ್ಥಿಗಳಿಗೆ ಶುಲ್ಕ ಪಾವತಿಗೆ ಸಮಯ ವಿನಂತಿಸಿಕೊಂಡಿದ್ದರು.

## ಪ್ರೈವೇಟ್ ಸ್ಕೂಲ್ ಫೀ ಮತ್ತೆ ದುಬಾರಿ: ಶುಲ್ಕ ಹೆಚ್ಚಿಸಲು ಸಜ್ಜಾದ ಖಾಸಗಿ ಶಾಲೆಗಳು

ಬರುವ ಶೈಕ್ಷಣಿಕ ವರ್ಷದಲ್ಲಿ (2026–27) ತಮ್ಮ ಮಕ್ಕಳನ್ನು ಖಾಸಗಿ ಶಾಲೆಗೆ ಸೇರಿಸಲು ಯೋಜಿಸುತ್ತಿರುವ ಪೋಷಕರಿಗೆ ಆರ್ಥಿಕ ಹೊರೆ ಹೆಚ್ಚಾಗುವ ಸಾಧ್ಯತೆ ಇದೆ. ಶಿಕ್ಷಕರ ವೇತನ



ಪರಿಷ್ಕರಣೆ ಮತ್ತು ಶಾಲಾ ನಿರ್ವಹಣಾ ವೆಚ್ಚಗಳ ಏರಿಕೆಯ ಹಿನ್ನೆಲೆಯಲ್ಲಿ ಖಾಸಗಿ ಶಾಲೆಗಳ ಶುಲ್ಕದಲ್ಲಿ ಶೇಕಡ 8 ರಿಂದ 15ರಷ್ಟು ಹೆಚ್ಚಳವಾಗಲಿದೆ ಎಂದು ಖಾಸಗಿ ಶಾಲೆಗಳ ಸಂಘಗಳು ತಿಳಿಸಿವೆ.

**ಶುಲ್ಕ ಹೆಚ್ಚಳಕ್ಕೆ ಪ್ರಮುಖ ಕಾರಣಗಳೇನು**

* **ಶಿಕ್ಷಕರ ವೇತನ ಪರಿಷ್ಕರಣೆ:** ಶಾಲಾ ಶಿಕ್ಷಕರು ತಮ್ಮ ವೇತನವನ್ನು ಶೇಕಡ 20ರಷ್ಟು ಹೆಚ್ಚಿಸುವಂತೆ ಬೇಡಿಕೆ ಇಟ್ಟಿದ್ದಾರೆ. ಸಂಪೂರ್ಣವಾಗಿ ಅಷ್ಟು ಹೆಚ್ಚಳ ಸಾಧ್ಯವಾಗದಿದ್ದರೂ, 2026–27ನೇ ಸಾಲಿನಲ್ಲಿ ಅಧ್ಯಾಪಕರ ಸಂಬಳವನ್ನು ಗಣನೀಯವಾಗಿ ಪರಿಷ್ಕರಿಸಲು ಶಾಲೆಗಳು ನಿರ್ಧರಿಸಿವೆ.
* **ನಿರ್ವಹಣಾ ವೆಚ್ಚ:** ಶಾಲೆಗಳ ಮಾನ್ಯತಾ ಶುಲ್ಕ ಪಾವತಿ, ಮೂಲಸೌಕರ್ಯಗಳ ನಿರ್ವಹಣೆ ಮತ್ತು ದಿನನಿತ್ಯದ ಆಡಳಿತಾತ್ಮಕ ವೆಚ್ಚಗಳು ಹೆಚ್ಚುತ್ತಿವೆ.

ಕ್ಯಾಮ್ಸ್ ಪ್ರಧಾನ ಕಾರ್ಯದರ್ಶಿ ಡಿ. ಶಶಿಕುಮಾರ್ ಮಾತನಾಡಿ, "ಸಾಮಾನ್ಯವಾಗಿ ಪ್ರತಿ ವರ್ಷ ಶೇಕಡ 8 ರಿಂದ 10 ರಷ್ಟು ಶುಲ್ಕ ಏರಿಕೆಯಾಗುತ್ತಿತ್ತು. ಆದರೆ 2026–27ನೇ ಸಾಲಿನಲ್ಲಿ ಆಯಾ ಶಾಲೆಗಳ ಸೌಲಭ್ಯ ಮತ್ತು ಅಗತ್ಯಕ್ಕೆ ಅನುಗುಣವಾಗಿ ಕನಿಷ್ಠ ಶೇಕಡ 8 ರಿಂದ ಗರಿಷ್ಠ ಶೇಕಡ 15 ರವರೆಗೆ ಶುಲ್ಕ ಹೆಚ್ಚಳವಾಗುವ ನಿರೀಕ್ಷೆಯಿದೆ," ಎಂದು ತಿಳಿಸಿದ್ದಾರೆ.

ರುಪ್ಸಾ ಅಧ್ಯಕ್ಷ ಲೋಕೇಶ್ ತಾಳಿಕಟ್ಟೆ ಅವರು ಈ ಬಗ್ಗೆ ಪ್ರಕಟಣೆ ಹೊರಡಿಸಿದ್ದು, "ಶಿಕ್ಷಕರ ವೇತನ ಹೆಚ್ಚಳದ ಬೇಡಿಕೆ ಹಾಗೂ ಶಾಲಾ ನಿರ್ವಹಣೆಯ ಹಿತದೃಷ್ಟಿಯಿಂದ ಶುಲ್ಕ ಹೆಚ್ಚಳ ಅನಿವಾರ್ಯವಾಗಿದೆ. ಮುಂಬರುವ ವರ್ಷದಲ್ಲಿ ಶೇಕಡ 15ರಷ್ಟು ಶುಲ್ಕ ಏರಿಕೆ ಮಾಡುವ ಸಾಧ್ಯತೆಯಿದೆ," ಎಂದು ಹೇಳಿದ್ದಾರೆ.

ಈಗಾಗಲೇ ಬೆಲೆ ಏರಿಕೆಯಿಂದ ತತ್ತರಿಸಿರುವ ಪೋಷಕರಿಗೆ ಈ ಶುಲ್ಕ ಹೆಚ್ಚಳದ ಸುದ್ದಿ ಗಾಯದ ಮೇಲೆ ಬರೆ ಎಳೆದಂತಾಗಿದೆ. ಮಧ್ಯಮ ವರ್ಗದ ಕುಟುಂಬಗಳ ಮೇಲೆ ಈ ನಿರ್ಧಾರವು ದೊಡ್ಡ ಪ್ರಭಾವ ಬೀರಲಿದ್ದು, ಸರ್ಕಾರ ಈ ಬಗ್ಗೆ ಮಧ್ಯಪ್ರವೇಶಿಸಿ ಸಮತೋಲನ ಕಾಯ್ದುಕೊಳ್ಳುತ್ತದೆಯೇ ಎಂದು ಕಾದುನೋಡಬೇಕಿದೆ.



ಭಾರತೀಯ ಜನತಾ ಪಾರ್ಟಿ ಬೆಂಗಳೂರು ಕೇಂದ್ರ ಜಿಲ್ಲೆ ಮಹಿಳಾ ಮೋರ್ಚಾ ನೂತನ ಅಧ್ಯಕ್ಷರಾಗಿ ನೇಮಕರಾದ ಶ್ರೀಮತಿ ನೀತಾ ಎಂ ಎನ್ ರೆಡ್ಡಿ ಅವರಿಗೆ ಕಮ್ಮನಹಳ್ಳಿ ವಾರ್ಡ್ ಮಹಿಳಾ ಮೋರ್ಚಾ ವತಿಯಿಂದ ಅಭಿನಂದಿಸಲಾಹಿತು. ಈ ಸಂದರ್ಭದಲ್ಲಿ ಸರ್ವಜ್ಞನಗರ ಮಂಡಲ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷರು ವಿಜಯ್ ಪಿಸ್ಸೇ ಅವರು ಉಪಸ್ಥಿತರಿದ್ದು ಅಭಿನಂದನೆ ಸಲ್ಲಿಸಿದರು.

## ಬೆಂಗಳೂರಿನ ವಿವಿಧ ಪ್ರಮುಖ ಕಾಮಗಾರಿಗಳಿಗೆ ಡೆಡ್‌ಲೈನ್ ನಿಗದಿ: ಮಹೇಶ್ವರ್‌ರಾವ್

ಬೆಂಗಳೂರು: ಬೆಂಗಳೂರಿನ ವಿವಿಧ ಪ್ರಮುಖ ಕಾಮಗಾರಿಗಳಿಗೆ ಬೆಂಗಳೂರು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಡೆಡ್‌ಲೈನ್ ನಿಗದಿ ಮಾಡಿದ್ದಾರೆ. ಅಲ್ಲದೆ ಮುಂದಿನ ಹಣಕಾಸು ವರ್ಷದಿಂದ ರಿಜಿಸ್ಟರ್‌ಗಳನ್ನು ಹಸ್ತಚಾಲಿತ ಪದ್ಧತಿಯ ಬದಲು ಆನ್‌ಲೈನ್ ವ್ಯವಸ್ಥೆಗೆ ಬದಲಾಯಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನ ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮುಂದಿನ ಹಣಕಾಸು ವರ್ಷದಿಂದ ರಿಜಿಸ್ಟರ್‌ಗಳನ್ನು ಹಸ್ತಚಾಲಿತ ಪದ್ಧತಿಯ ಬದಲು ಆನ್‌ಲೈನ್ ವ್ಯವಸ್ಥೆಗೆ ಬದಲಾಯಿಸುವಂತೆ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಗುರುವಾರ ರಾಜರಾಜೇಶ್ವರಿ ನಗರ ವಲಯ ಕಚೇರಿಗೆ ಭೇಟಿ ನೀಡಿದ ಅವರು, ಜಾಬ್ ಕೋಡ್ ಹಾಗೂ ತಾಂತ್ರಿಕ ಅನುಮೋದನೆಗೆ ಸಂಬಂಧಿಸಿದ ರಿಜಿಸ್ಟರ್ ಪುಸ್ತಕಗಳನ್ನು ಪರಿಶೀಲಿಸಿದ್ದಾರೆ. ಈ ಸಂದರ್ಭದಲ್ಲಿ ರಿಜಿಸ್ಟರ್‌ಗಳನ್ನು ಇನ್ನೂ ಹಸ್ತಚಾಲಿತವಾಗಿ ನಿರ್ವಹಿಸುತ್ತಿರುವುದನ್ನು ಗಮನಿಸಿ, ಮುಂದಿನ ಹಣಕಾಸು ವರ್ಷದಿಂದ ಅವುಗಳನ್ನು ಆನ್‌ಲೈನ್ ವ್ಯವಸ್ಥೆಗೆ ಬದಲಾಯಿಸುವಂತೆ ಸೂಚಿಸಿದ್ದಾರೆ.' ಆರ್.ಆರ್. ನಗರ ವಲಯ ಕಚೇರಿಯ ಮೂರನೇ ಮಹಡಿಯಲ್ಲಿ ಹೆಚ್ಚುವರಿ ಕಚೇರಿಗಳನ್ನು ನಿರ್ಮಿಸಲಾಗುತ್ತಿದ್ದು, ಆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ತಿಳಿಸಿದರು. ಜೊತೆಗೆ ಕಚೇರಿ ಆವರಣದಲ್ಲಿ ಸಂಪೂರ್ಣ ಸ್ವಚ್ಛತೆಯನ್ನು ಕಾಪಾಡಿಕೊಂಡು, ಕಚೇರಿ ಸೌಂದರ್ಯವಾಗಿ ಕಾಣುವಂತೆ ನಿರ್ವಹಣೆ ಮಾಡಲು ಸೂಚನೆ ನೀಡಿದರು. ವಲಯ ಕಚೇರಿಯಲ್ಲಿರುವ ಸಭಾಂಗಣವನ್ನು ಪರಿಶೀಲಿಸಿದ ಅವರು, ಸಭಾಂಗಣದ ನವೀಕರಣ ಕಾರ್ಯ ಕೈಗೊಂಡು ಅದನ್ನು ಮೇಲ್ದರ್ಜೆಗೆ ತರುವಂತೆ ಸೂಚಿಸಿದರು. ಕಾರಿಡಾರ್‌ಗಳಲ್ಲಿ ಇಡಲಾಗಿರುವ ಪೆಟ್ಟಿಗೆ(ಬೀರುಗಳನ್ನು)ಗಳನ್ನು ತೆರವುಗೊಳಿಸಲು ಸಹ ಸೂಚನೆ ನೀಡಿದ್ದಾರೆ.

**ಶಂಕರ ಮಠ ವೃತ್ತ ಅಭಿವೃದ್ಧಿಗೆ ನಿರ್ದೇಶನ**

ಮಹಾಲಕ್ಷ್ಮಿ ಬಡಾವಣೆಯ ಶಂಕರ ಮಠ ರಸ್ತೆಯಲ್ಲಿ ನಡೆದಿರುವ ಡಾಂಬರೀಕರಣ ಕಾಮಗಾರಿಯನ್ನು ಪರಿಶೀಲಿಸಿದರು. ಇದೇ ವೇಳೆ ಶಂಕರ ಮಠ ವೃತ್ತವನ್ನು ವೀಕ್ಷಿಸಿ, ಮೋದಿ ಆಸ್ಪತ್ರೆ ರಸ್ತೆಯಿಂದ ಬಸವೇಶ್ವರ ಮುಖ್ಯ ರಸ್ತೆಯ ಕಡೆಗೆ ಹಾಗೂ ಕುರುಬರಹಳ್ಳಿ ರಸ್ತೆಯಿಂದ ಶಂಕರ ಮಠ ರಸ್ತೆಗೆ ಫ್ರೀ ಲೆಫ್ಟ್ ವ್ಯವಸ್ಥೆ ಕಲ್ಪಿಸಲು ಕ್ರಮವಹಿಸುವಂತೆ ಸೂಚಿಸಿದರು. ಈ ಸಂಬಂಧ ಅರ್ಬನ್ ಪ್ಲಾನರ್‌ಗಳ ಮೂಲಕ ವಿನ್ಯಾಸ ರೂಪಿಸಿ, ವೃತ್ತದ ಸಮಗ್ರ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರಿನ ಡಾ. ರಾಜ್ ಕುಮಾರ್ ರಸ್ತೆಯಲ್ಲಿ ಕೈಗೆತ್ತಿಕೊಂಡಿರುವ ವೈಟ್ ಟಾಪಿಂಗ್ ಕಾಮಗಾರಿ ಪರಿಶೀಲನೆ ನಡೆಸಿದರು. ನವರಂಗ್ ಚಿತ್ರಮಂದಿರದಿಂದ ರಾಜಾಜಿನಗರ 10ನೇ ಕ್ರಾಸ್ ವರೆಗಿನ 700 ಉದ್ದದ ರಸ್ತೆಯ ಪೈಕಿ ಒಂದು ಭಾಗದ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಿ, ವಾಹನಗಳ ಸಂಚಾರಕ್ಕೆ ಅನುವು ಮಾಡಲಾಗಿದೆ.



ಮತ್ತೊಂದು ಭಾಗದ ರಸ್ತೆಯನ್ನು ಮಾರ್ಚ್ 31ರ ಒಳಗೆ ಪೂರ್ಣಗೊಳಿಸಲಾಗುವುದು ಎಂದು ಮುಖ್ಯ ಎಂಜಿನಿಯರು ಮಾಹಿತಿ ನೀಡಿದ್ದಾರೆ. ನವರಂಗ್ ನಿಂದ ಸ್ಟಾರ್ ಬಜಾರ್ ಸಿಗ್ನಲ್ ವರೆಗೆ 1.8 ಕಿ.ಮೀ ವೈಟ್ ಟಾಪಿಂಗ್ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುತ್ತಿದ್ದು, ಒಂದು ಭಾಗದಲ್ಲಿ ಈಗಾಗಲೇ ಯುಟಿಲಿಟಿ ಕೆಲಸ ಪೂರ್ಣಗೊಂಡಿದ್ದು, ವೈಟ್ ಟಾಪಿಂಗ್ ಕಾಮಗಾರಿ ಇಂದಿನಿಂದ ಪ್ರಾರಂಭವಾಗಲಿದೆ. ಪ್ರಗತಿಯಲ್ಲಿರುವ ಒಂದು ಭಾಗದ ಕಾಮಗಾರಿಯನ್ನು ಜುಲೈ ಅಂತ್ಯದೊಳಗಾಗಿ ಪೂರ್ಣಗೊಳಿಸಲು ಸೂಚನೆ ನೀಡಿದ್ದಾರೆ.

**ಪರಿಶೀಲನೆ ವೇಳೆಯ ಇತರೆ ಪ್ರಮುಖ ಅಂಶಗಳು**

1. ನಾಗಪುರ ಪೈಪ್‌ಲೈನ್ ಪಾರ್ಕ್‌ನಲ್ಲಿ ಎಲೆ ಸಂಸ್ಕರಣ ಘಟಕವನ್ನು ಅಳವಡಿಸುವುದು
2. ನಾಗಪುರ ದ್ವಿತೀಯ ಹಂತದ ಸಂಗ್ರಹಣೆ ಹಾಗೂ ಸಾಗಾಣಿಕೆ ಕೇಂದ್ರಕ್ಕೆ ಭೇಟಿ ನೀಡಿ, ಅದನ್ನು ಸುಸಜ್ಜಿತವಾಗಿ ಅಭಿವೃದ್ಧಿಪಡಿಸುವಂತೆ ಸೂಚನೆ
3. ಮಹಾಲಕ್ಷ್ಮಿ ಲೇಔಟ್ ಮುಖ್ಯ ರಸ್ತೆಯ ವೈಟ್‌ಟಾಪಿಂಗ್ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಸೂಚನೆ
4. ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಕೂಡಲೆ ಜೆಟ್ ಪ್ಯಾಚರ್ ಯಂತ್ರವನ್ನು ಖರೀದಿಸಲು ಸೂಚನೆ ಈ ಸಂದರ್ಭದಲ್ಲಿ ಪಶ್ಚಿಮ ನಗರ ಪಾಲಿಕೆ ಅಭಿವೃದ್ಧಿ ಹೆಚ್ಚುವರಿ ಆಯುಕ್ತರಾದ ದಿಗ್ವಿಜಯ್ ಬೋಡ್ಕೆ, ಜಂಟಿ ಆಯುಕ್ತರಾದ ಆರತಿ ಆನಂದ್, ಮುಖ್ಯ ಎಂಜಿನಿಯರರಾದ ಸ್ವಯಂಪ್ರಭಾ, ಡಾ. ರಾಘವೇಂದ್ರ ಪ್ರಸಾದ್ ಸೇರಿದಂತೆ ಹಲವು ಅಧಿಕಾರಿಗಳು ಹಾಜರಿದ್ದರು.

# ದಕ್ಷಿಣ ಕನ್ನಡ ವಿಭಾಗಕ್ಕೆ ಆನೆ ಕಾರ್ಯಪಡೆ ಮಂಜೂರು ಮಾಡಿ ರಾಜ್ಯ ಸರ್ಕಾರ ಆದೇಶ

ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಅರಣ್ಯ ವಿಭಾಗದಲ್ಲಿ ಮಾನವ–ಆನೆ ಸಂಘರ್ಷವನ್ನು ತಡೆಗಟ್ಟಲು ರಾಜ್ಯ ಸರ್ಕಾರವು ಪ್ರತ್ಯೇಕ 'ಆನೆ ಕಾರ್ಯಪಡೆ' ರಚನೆಗೆ ಅನುಮೋದನೆ ನೀಡಿದೆ. ಜಿಲ್ಲೆಯ ಸುಳ್ಯ, ಕಡಬ, ಬೆಳ್ತಂಗಡಿ ಮತ್ತು ಪುತ್ತೂರು ಭಾಗಗಳಲ್ಲಿ ಹೆಚ್ಚುತ್ತಿರುವ ಆನೆಗಳ ದಾಳಿಯನ್ನು ತಡೆಗಟ್ಟು ವುದು, ಬೆಳೆ ಹಾನಿ ತಪ್ಪಿಸುವುದು



ಮತ್ತು ಮಾನವ ಜೀವ ಹಾನಿಯನ್ನು ನಿಯಂತ್ರಿಸುವುದು ಇದರ ಪ್ರಮುಖ ಉದ್ದೇಶವಾಗಿದೆ. ಈ ವಿಶೇಷ ತಂಡವು ಒಟ್ಟು 28 ಸಿಬ್ಬಂದಿಗಳನ್ನು ಒಳಗೊಂಡಿ ರುತ್ತದೆ. ಇದರಲ್ಲಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಪಶುವೈದ್ಯಕೀಯ ಅಧಿಕಾರಿ, ವಲಯ ಅರಣ್ಯಾಧಿಕಾರಿ, ಉಪ ವಲಯ ಅರಣ್ಯಾಧಿಕಾರಿಗಳು, ಅರಣ್ಯ ರಕ್ಷಕರು ಸೇರಿದಂತೆ ಹೊರ ಗುತ್ತಿಗೆ ಆಧಾರಿತ ಸಿಬ್ಬಂದಿಗಳು ಇರುತ್ತಾರೆ.

ಈ ಪಡೆಯು ಮಂಗಳೂರು ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಅಡಿಯಲ್ಲಿ ಕಾರ್ಯನಿರ್ವಹಿಸಲಿದ್ದು, ಸುಳ್ಯ ಭಾಗದಲ್ಲಿ ಮುಖ್ಯ ಕಚೇರಿತಲಿದ ಇರಲಿದೆ.

ಆನೆಗಳು ಹೆಚ್ಚಾಗಿ ಬರುವ ಕೃಷಿ ಭೂಮಿ ಮತ್ತು ಜನವಸತಿ ಪ್ರದೇಶಗಳಲ್ಲಿ ನಿರಂತರ ಗಸ್ತು ತಿರುಗಲಾಗುವುದು. ಆನೆಗಳು ಕಾಡಿನಿಂದ ಹೊರಬಂದ ತಕ್ಷಣವೇ ಅವುಗಳನ್ನು ಮರಳಿ ಅರಣ್ಯಕ್ಕೆ ಓಡಿಸುವ ಕೆಲಸ ಮಾಡಬಹುದು ಮಾಡುವುದು ಎಂದು ತಿಳಿಸಿದೆ. ಮುನ್ನೆಚ್ಚರಿಕೆ ಸಂದೇಶ ರವಾನೆ ಆನೆಗಳ ಓಡಾಟದ ಬಗ್ಗೆ ನಿಯಂತ್ರಣ ಕೊಠಡಿಯ ಮೂಲಕ ಸ್ಥಳೀಯ ಗ್ರಾಮಸ್ಥರಿಗೆ ಮುನ್ನೆಚ್ಚರಿಕೆ ಸಂದೇಶಗಳನ್ನು ರವಾನಿಸ ಲಾಗುವುದು. ಆನೆಗಳ ಚಲನವಲನ ಪತ್ತೆಹಚ್ಚಲು ಡ್ರೋನ್ ಮತ್ತು ಆಧುನಿಕ ಉಪಕರಣಗಳ ಬಳಕೆ. ಈ ಮೊದಲು ಮಂಗ 'ಳೂರು ವಿಭಾಗವು ಆನೆಗಳನ್ನು ಓಡಿಸಲು ಮಡಿಕೇರಿ ಅಥವಾ ಹಾಸನ ವಿಭಾಗದ ಕಾರ್ಯಪ 'ಡೆಯ ಮೇಲೆ ಅವಲಂಬಿತವಾಗಿತ್ತು. ಇದೀಗ ಈ ಹೊಸ ಪಡೆಯಿಂದಾಗಿ ಸ್ಥಳೀಯ ವಾಗಿ ವೇಗವಾಗಿ ಸ್ಪಂದಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದೆ.

ಇತ್ತೀಚಿನ ವರ್ಷಗಳಲ್ಲಿ ಉಪ್ಪಿನಂಗಡಿ, ಸುಳ್ಯ, ಬೆಳ್ತಂಗಡಿ, ಪುತ್ತೂರು, ಪಂಜ ಮತ್ತು ಸುಬ್ರಹ್ಮಣ್ಯ ಅರಣ್ಯ ವಲಯಗಳ ವ್ಯಾಪ್ತಿಯ ಪ್ರದೇಶಗಳಲ್ಲಿ ಕಾಡಾನೆಗಳ ಓಡಾಟ ಹೆಚ್ಚಾಗಿರುವುದರಿಂದ ಬೆಳೆ ಹಾನಿ ಹಾಗೂ ಕೆಲವೊಮ್ಮೆ ಮಾನವ ಜೀವ ಹಾನಿಯ ಘಟನೆಗಳು ಹೆಚ್ಚಾಗಿವೆ. ಇದುವರೆಗೆ ಆನೆಗಳನ್ನು ಮತ್ತೆ ಅರಣ್ಯ ಪ್ರದೇಶಗಳಿಗೆ ಓಡಿಸಲು ಮಡಿಕೇರಿ ವಿಭಾಗದಿಂದ ತಂಡಗಳನ್ನು ನಿಯೋಜಿ ಸಲಾಗುತ್ತಿತ್ತು. ಆದರೆ ಈ ತಂಡ ಗಳು ದೂರದಿಂದ ಬರಬೇಕಾಗಿ ರುವುದರಿಂದ ಪ್ರತಿಕ್ರಿಯೆಯಲ್ಲಿ ವಿಳಂಬ ವಾಗುತ್ತಿದೆ.

ಈ ಗಮನದಲ್ಲಿಟ್ಟುಕೊಂಡು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಮಂಗಳೂರು ವಿಭಾಗಕ್ಕಾಗಿ ಪ್ರತ್ಯೇಕ ಕಾರ್ಯಪಡೆ (ಟಾಸ್ಕ್ ಫೋರ್ಸ್) ರಚಿಸಲು ಪ್ರಸ್ತಾವನೆ ಸಲ್ಲಿಸಿದ್ದರು. ಇದೀಗ ಆ ಪ್ರಸ್ತಾವನೆಗೆ ಸರ್ಕಾರ ಅನುಮೋದನೆ ನೀಡಿದೆ. ಟಾಸ್ಕ್ ಫೋರ್ಸ್‌ನ ಮುಖ್ಯ ಕಚೇರಿ ಸುಳ್ಯದಲ್ಲಿ ಇರಲಿದ್ದು, ಇದು ಮಂಗಳೂರು ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ನಿರ್ದೇಶನದಲ್ಲಿ ಕಾರ್ಯನಿರ್ವಹಿಸಲಿದೆ. ಈ ಭಾಗಕ್ಕೆ ವಿಶೇಷ ಟಾಸ್ಕ್ ಫೋರ್ಸ್ ಮಂಜೂರು ಮಾಡುವಂತೆ ಸುಳ್ಯ ಶಾಸಕಿ ಭಾಗೀರಥಿ ಮುರುಳ್ಯ ಅವರು ಈ ಹಿಂದೆ ಮುಖ್ಯಮಂತ್ರಿ ಮತ್ತು ಅರಣ್ಯ ಸಚಿವರಿಗೆ ಮನವಿ ಪತ್ರ ಸಲ್ಲಿಸಿದ್ದರು.

# ಕನ್ನಡದಲ್ಲಿಯೇ ಪೂಜೆ, ಕನ್ನಡದಲ್ಲಿಯೇ ಜಾತ್ರೆ:

## ಇತಿಹಾಸ ಪ್ರಸಿದ್ಧ ಶ್ರೀ ಕೋದಂಡ ರಾಮಚಂದ್ರ ಸ್ವಾಮಿ ಬ್ರಹ್ಮರಥೋತ್ಸವ

ಚಿಕ್ಕಮಗಳೂರು: ಕರ್ನಾಟಕದಲ್ಲಿ ಸಾವಿರಾರು ಸಂಖ್ಯೆಯಲ್ಲಿ ದೇವಸ್ಥಾನಗಳು, ಮಠ, ಮಂದಿರಗಳು, ಆಲಯಗಳು ಇವೆ. ಆದರೆ ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಈ ದೇವಸ್ಥಾನದಲ್ಲಿ ಒಂದು ವಿಶೇಷವಿದೆ. ಪ್ರತಿನಿತ್ಯ ಈ ದೇವಸ್ಥಾನದಲ್ಲಿ ಕನ್ನಡದಲ್ಲಿಯೇ ಮಂತ್ರ, ಕನ್ನಡದಲ್ಲಿಯೇ ಪೂಜೆ, ಕನ್ನಡದಲ್ಲಿಯೇ ಹೋಮ, ಕನ್ನಡದಲ್ಲಿ ಶ್ಲೋಕ ಪಠಣ, ಕನ್ನಡ ದಲ್ಲೇ ಪೂಜೆ, ಇಲ್ಲಿ ಎಲ್ಲವೂ ಕನ್ನಡಮಯ.

ಹೌದು, ಚಿಕ್ಕಮಗಳೂರು ನಗರದ ಹೊರವಲಯದಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಕೋದಂಡ ರಾಮಚಂದ್ರ ಸ್ವಾಮಿ ದೇವಸ್ಥಾನ ದಲ್ಲಿ ಬುಧವಾರ ಅದ್ದೂರಿಯಾಗಿ ಕೋದಂಡ ರಾಮನ ಬ್ರಹ್ಮ ರಥೋತ್ಸವ ಜರುಗಿತು. ಈ ರಥೋತ್ಸವಕ್ಕೆ ಜಿಲ್ಲೆಯ ಮೂಲೆ ಮೂಲೆ ಯಿಂದಲೂ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಈ ರಥೋತ್ಸವದಲ್ಲಿ ಭಾಗಿಯಾಗಿ ದೇವರ ಕೃಪೆಗೆ ಪಾತ್ರರಾದರು. ರಾಮನಿಗೆ ನಮ್ಮ ಇತಿಹಾಸದಲ್ಲಿ ಮಹತ್ವದ ಸ್ಥಾನವಿದೆ.

ನಮ್ಮ ಸನಾತನ ಹಿಂದೂ ಧರ್ಮದ ಪ್ರಕಾರ ಶ್ರೀ ರಾಮನಾಮ ಜಪಿಸಿದರೆ ಯಾವುದೇ ಕಷ್ಟ ಕಾರ್ಪಣ್ಯ ಬರುವುದಿಲ್ಲ ಎಂಬ ನಂಬಿಕೆ ಇದೆ. ಕಾಫಿನಾಡಿನ ಈ ಕೋದಂಡ ರಾಮನ ಅದ್ದೂರಿ ರಥೋತ್ಸವಕ್ಕೂ ಒಂದು ಇತಿಹಾಸವಿದೆ. ಪುರಾಣ ಪ್ರಸಿದ್ದ ಕೋದಂಡ ರಾಮ ಈತ. ಪ್ರತಿನಿತ್ಯ ಪ್ರವಾಸಿಗರನ್ನು ತನ್ನತ್ತ ಸೆಳೆಯುವ ಕಾಫಿನಾಡು ಚಿಕ್ಕಮಗಳೂರು ಕೇವಲ ಪ್ರವಾಸೋದ್ಯಮಕ್ಕೆ ಮಾತ್ರ ಹೆಸರುವಾಸಿಯಲ್ಲ. ತನ್ನಲ್ಲಿ ಅದೆಷ್ಟೋ ಪುರಾಣ, ಇತಿಹಾಸಿಕ ಪ್ರಸಿದ್ಧ ದೇವಸ್ಥಾನ ಗಳನ್ನು ಕೂಡ ಇರಿಸಿಕೊಂಡಿದೆ. ಚಿಕ್ಕ ಮಗಳೂರಿನ ಹೊರ ವಲಯದಲ್ಲಿ ಇರುವ ಹಿರೇಮಗಳೂರಿನ ಕೋದಂಡ ರಾಮ ಚಂದ್ರ ಸ್ವಾಮಿ ದೇವಸ್ಥಾನದ ಅದ್ದೂರಿ ಬ್ರಹ್ಮ ರಥೋತ್ಸವ ನಡೆದಿದೆ.

ಕನ್ನಡದ ಖ್ಯಾತ ಪೂಜಾರಿ ಅಂತ ಕರೆಸಿಕೊಳ್ಳೋ ಹಿರೇ ಮಗಳೂರು ಕಣ್ಣನ್ ಮಾಮ ಅವರ ನೇತೃತ್ವದಲ್ಲಿ ದೇವಸ್ಥಾನದಲ್ಲಿ ಅತ್ಯಂತ ಶ್ರದ್ಧಾ ಭಕ್ತಿಯಿಂದ ಹಲವು ವಿಧಿ ವಿಧಾನಗಳನ್ನು ನೆರವೇರಿ ಸಲಾಯಿತು. ಜಾತ್ರಾ



ಮಹೋತ್ಸವ ಹಿನ್ನೆಲೆ ಒಂದು ವಾರದಿಂದಲೂ ಇಡೀ ಗ್ರಾಮವೇ ಹಬ್ಬದ ಸಂಭ್ರಮದಲ್ಲಿ ಮುಳುಗಿತ್ತು. ದೇವಸ್ಥಾನದಲ್ಲಿ ವಿವಿಧ ರೀತಿಯ ಧಾರ್ಮಿಕ ಆಚರಣೆಗಳು, ಗರುಡೋತ್ಸವ, ಪಲ್ಲಕಿ ಉತ್ಸವ ಸೇರಿದಂತೆ ನಾನಾ ರೀತಿಯ ಸೇವೆಗಳನ್ನು ಶ್ರೀ ರಾಮನಿಗೆ ಅರ್ಪಿ ಸಲಾಯಿತು.

ಚಿಕ್ಕಮಗಳೂರು ಸೇರಿದಂತೆ, ರಾಜ್ಯ ಹಾಗೂ ಹೊರ ರಾಜ್ಯ ಗಳಿಂದ ಭಕ್ತರ ದಂಡು ಪ್ರಭು ಶ್ರೀ ರಾಮನ ಕಾಣಲು ಭಾರ್ಗ ವಪುರಿ ಅಥವಾ ಹಿರೇ ಮಗಳೂರಿಗೆ ಆಗಮಿಸಿತ್ತು. ಇಡೀ ಊರನ್ನೇ ಒಂದು ಸುತ್ತು ಹಾಕುವ ರಥ ಭಕ್ತರಿಗೆ ಅಯೋಧ್ಯೆ ಹೋಗುವ ಬದಲು ಇಲ್ಲಿಯೇ ಶ್ರೀ ರಾಮನನ್ನು ಕಂಡಷ್ಟೇ ಖುಷಿ ಕೊಟ್ಟಿದೆ. ಪರುಶುರಾಮನಿಗೆ ದರ್ಶನ ಕೊಟ್ಟ ಸ್ಥಳ ಈ ಜಾಗ ಎಂಬ ನಂಬಿಕೆ ಈ ಭಾಗದ ಜನರಲ್ಲಿ ಈಗಲೂ ಮನೆ ಮಾಡಿದೆ. ಇತಿಹಾಸ ಹಾಗೂ ಪೌರಾಣಿಕ ಹಿನ್ನೆಲೆ ನೋಡುವುದಾದರೆ ಈ ಜಾಗ ರಾಮಾ ಯಣವನ್ನು ಕೂಡ ಉಲ್ಲೇಖ ಮಾಡುತ್ತೆ.

ಪರುಶು ರಾಮನಿಗೆ ರಾಮ ಸೀತೆಯರ ಮದುವೆ ನೋಡುವ ಭಾಗ್ಯ ಸಿಕ್ಕಿರಲಿಲ್ಲ. ಹಾಗಾಗಿ ಈ ಜಾಗದಲ್ಲಿಯೇ ಶ್ರೀ ರಾಮ ಸೀತೆಯ ಜೊತೆಯಾಗಿ ನಿಂತು ಪರುಶು ರಾಮರಿಗೆ ದರ್ಶನ ಕೊಟ್ಟಿದ್ದರಿಂದ ಈ ಜಾಗವನ್ನು ಕಲ್ಯಾಣ ರಾಮ ಅಂತ ಕೂಡ ಕರೆಯುತ್ತಾರೆ.

ರಥೋತ್ಸವ ವೇಳೆ ಹಿರೇಮಗಳೂರು ಕಣ್ಣನ್ ಮಾಮ ಅವರು ಕನ್ನಡದಲ್ಲಿ ಪೂಜೆ ಮಾಡಿ ಕನ್ನಡದಲ್ಲಿಯೇ ಮಂಗಳಾರತಿ ನೆರವೇರಿಸಿ ಕನ್ನಡದಲ್ಲಿಯೇ ದೇವರ ಇತಿಹಾಸವನ್ನು ತಿಳಿಸಿ ಕನ್ನಡದಲ್ಲಿಯೇ ಪೂಜಾ ಕೈಂಕರ್ಯ ನೆರವೇರಿಸಿದರು. ನಂತರ ಬ್ರಹ್ಮರಥೋತ್ಸವ ಅದ್ದೂರಿಯಾಗಿ ಜರುಗಿತು.

## ಪಡಿತರ ಅಕ್ಕಿ ಅಕ್ರಮ ಸಾಗಾಟ: ಬಳ್ಳಾರಿಯಲ್ಲಿ ಪೊಲೀಸರ ಭರ್ಜರಿ ಕಾರ್ಯಾಚರಣೆ



ಬಳ್ಳಾರಿ: ಸಾರ್ವಜನಿಕ ವಿತರಣೆ ವ್ಯವಸ್ಥೆ ಅಕ್ಕಿಯನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ಪ್ರಕರಣ ಗಳ ವಿರುದ್ಧ ಕಠಿಣ ಕ್ರಮ ಕೈಗೊಂಡಿರುವ ಪೊಲೀಸರು, ಕಳೆದ ಎರಡು ತಿಂಗಳಲ್ಲಿ 50ಕ್ಕೂ ಹೆಚ್ಚು ಮಂದಿಯನ್ನು ಬಂಧನ ಕ್ಕೊಳಪಡಿಸಿದ್ದಾರೆ, ಸರ್ಕಾರದ ಕಲ್ಯಾಣ ಯೋಜನೆಗಳ ಅಡಿಯಲ್ಲಿ ನೀಡಲಾಗುವ ಧಾನ್ಯಗಳನ್ನು ಅಕ್ರಮವಾಗಿ ಬೇರೆಡೆಗೆ ಸಾಗಿಸಲಾಗುತ್ತಿದೆ ಎಂಬ ಮಾಹಿತಿಯ ಮೇರೆಗೆ ಬಳ್ಳಾರಿ ಪೊಲೀಸರು ಈ ಕಾರ್ಯಾಚರಣೆ ನಡೆಸಿದ್ದು, ವಿವಿಧ ದಾಳಿಗಳ ವೇಳೆ ಸುಮಾರು 5 ಟನ್ ಅಕ್ಕಿಯನ್ನು ವಶಪಡಿಸಿ ಕೊಂಡಿದ್ದಾರೆಂದು ಮೂಲಗಳಿಂದ ತಿಳಿದುಬಂದಿದೆ.

ಮುಕ್ತ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆ ಇರುವುದರಿಂದ, ಆರೋಪಿಗಳು ಈ ಅಕ್ಕಿಯನ್ನು ನೆರೆಯ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಿಗೆ ಸಾಗಿಸುತ್ತಿದ್ದರು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಪಡಿತರಅಕ್ಕಿ ಅಕ್ರಮ ಸಾಗಣೆ ಗಂಭೀರ ಅಪರಾಧವಾಗಿದೆ. ಇಂತಹ ಅಕ್ರಮಗಳು ಆರ್ಥಿಕವಾಗಿ ದುರ್ಬಲ ವರ್ಗಗಳ ಮೇಲೆ ನೇರ ಪರಿಣಾಮ ಬೀರುತ್ತದೆ. ಈ ಪ್ರಕರಣದಲ್ಲಿ ಭಾಗಿಯಾಗಿರುವವರ ವಿರುದ್ಧ ಕಠಿಣ ಕ್ರಮ ಮುಂದ ುವರಿಯಲಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಮಂದಿ ಬಂಧನ ಸಾಧ್ಯತೆ ಇದೆ ಎಂದು ಹಿರಿಯ ಪೊಲೀಸ್ ಅಧಿಕಾರಿ ಯೊಬ್ಬರು ತಿಳಿಸಿದ್ದಾರೆ.

ಈ ಅಕ್ರಮದಲ್ಲಿ ಸಂಘಟಿತ ಜಾಲದ ಕೈವಾಡ ಇರುವ ಶಂಕೆ ವ್ಯಕ್ತವಾಗಿದ್ದು, ಆರೋಪಿಗಳ ಹಣಕಾಸು ವ್ಯವಹಾರಗಳು ಮತ್ತು ಸರಬರಾಜು ಸರಪಳಿಯ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿ ದ್ದಾರೆ. ಸಾರ್ವಜನಿಕರು ಇಂತಹ ಘಟನೆಗಳ ಬಗ್ಗೆ ಎಚ್ಚರಿಕೆ ಯಿಂದಿದ್ದು, ಯಾವುದೇ ಮಾಹಿತಿ ಇದ್ದರೆ 112 ಸಹಾಯ ವಾಣಿ ಸಂಖ್ಯೆಗೆ ಕರೆ ಮಾಡಿ ಪೊಲೀ ಸರಿಗೆ ತಿಳಿಸಲು ಅಧಿಕಾರಿ ಗಳು ಮನವಿ ಮಾಡಿದ್ದಾರೆ.

# ರಾಜ್ಯಸಭೆಗೆ ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್:

## ಮಲ್ಲಿಕಾರ್ಜುನ ಖರ್ಗೆ, ಎಚ್‌ಡಿ ದೇವೇಗೌಡ ರಾಜ್ಯಸಭಾ ಅವಧಿ ಶೀಘ್ರ ಮುಕ್ತಾಯ

ಭಾರತದ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆ ಆಗಿದೆ. ಜೆಡಿಯು ನಾಯಕ, ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ರಾಜ್ಯಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸುವುದಕ್ಕೆ ಮುಂದಾಗಿದ್ದಾರೆ. ಕೇಂದ್ರ ಬಿಜೆಪಿ ಸರ್ಕಾರದ ಮೈತ್ರಿ ಪಕ್ಷ (ಎನ್‌ಡಿಎ ಮೈತ್ರಿಕೂಟ) ಜೆಡಿಯು ಪಕ್ಷದ ಈ ನಡೆಯು ಹಲವು ಅಚ್ಚರಿಗಳಿಗೆ ಕಾರಣವಾಗಿದೆ.

ದಾಖಲೆಯ ಹತ್ತನೇ ಬಾರಿಗೆ ಬಿಹಾರ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಾಲ್ಕು ತಿಂಗಳ ನಂತರ, ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಗುರುವಾರ ರಾಜ್ಯಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಲಿದ್ದಾರೆ. ಇದು ದೇಶದಲ್ಲಿ ಪ್ರಮುಖ ರಾಜಕೀಯ ಬದಲಾ ವಣೆಗೆ ಕಾರಣವಾಗುವ ಮತ್ತು ಬಿಹಾರದಲ್ಲಿ ಮೊದಲ ಬಾರಿ ಬಿಜೆಪಿ ನೇತೃತ್ವದ ಸರ್ಕಾರಕ್ಕೆ ಅವಕಾಶ ಮಾಡಿಕೊಡುವ ಉದ್ದೇಶವನ್ನು ಒಳಗೊಂಡಿದೆ ಎಂದು ವಿಶ್ಲೇಷಿಸಲಾಗಿದೆ.

ರಾಜ್ಯಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಲು ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು ಬೆಳಿಗ್ಗೆ 11:30ಕ್ಕೆ ಬಿಹಾರ ರಾಜ್ಯ ವಿಧಾನಸಭೆಗೆ ಆಗಮಿಸ ಲಿದ್ದಾರೆ. ಅವರ ಪಕ್ಷದ ನಾಯಕ ರಾಮನಾಥ್ ಠಾಕೂರ್ ಅವರು ಸಹ ಜನತಾದಳ (ಯುನೈಟೆಡ್) ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಲಿದ್ದಾರೆ. ಮಾರ್ಚ್ 1ರಂದು ನಿತೀಶ್ ಕುಮಾರ್ ಅವರಿಗೆ 75 ವರ್ಷ ವಯಸ್ಸಾಗಿದೆ. ಇದಾದ ನಾಲ್ಕು ದಿನಗಳಲ್ಲಿ ಮಹತ್ವದ ರಾಜಕೀಯ ಬೆಳವಣಿಗೆ ನಡೆದಿದೆ. ಬಿಹಾರದ ವಿಧಾನಸಭೆ ಚುನಾವಣೆ ನಡೆಯುವ ಸಂದರ್ಭದಲ್ಲಿಯೇ ಈ ಬಾರಿ ಬಿಹಾರದ ಮುಖ್ಯ ಮಂತ್ರಿಯಾಗಿ ನಿತೀಶ್ ಕುಮಾರ್ ಅವರು ಆಯ್ಕೆಯಾಗುವ ಸಾಧ್ಯತೆ ವಿರಳ ಎಂದು ಕೆಲವರು ಹೇಳಿ ದ್ದರು. ಆದರೆ ಬಿಜೆಪಿ ಹಾಗೂ ಜೆಡಿಯು ಬಿಹಾರದ ಮುಖ್ಯ ಮಂತ್ರಿಯಾಗಿ ನಿತೀಶ್ ಕುಮಾರ್ ಅವರೇ ಮುಂದುವರಿ ಯಲಿದ್ದಾರೆ ಎಂದು ಹೇಳಿತ್ತು. ಆದರೆ ಇದೀಗ ಚುನಾವಣೆ ನಡೆದ ನಾಲ್ಕೇ ತಿಂಗಳಿನಲ್ಲಿ ಮಹತ್ವದ ಬೆಳವಣಿಗೆ ನಡೆದಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹೊಸ ಸರ್ಕಾರದ ಕುರಿತು ಮಾತನಾಡುವ ಸಾಧ್ಯತೆ ಇದೆ. ಅಮಿತ್ ಶಾ ಅವರು ಗುರುವಾರ



ಪಾಟ್ನಾದಲ್ಲಿ ಪ್ರವಾಸದಲ್ಲಿದ್ದಾರೆ ಮತ್ತು ನಾಮಪತ್ರ ಸಲ್ಲಿಕೆಯ ಸಮಯದಲ್ಲಿ ಹಾಜರಿರಲಿದ್ದಾರೆ ಎಂದು ಹೇಳಲಾಗಿದೆ. ನಾಮನಿರ್ದೇಶನ ಪ್ರಕ್ರಿಯೆಯ ನಂತರ ಶಾ, ಕುಮಾರ್ ಮತ್ತು ಇತರ ಎನ್‌ಡಿಎ ನಾಯಕರ ನಡುವೆ ಸಭೆ ನಡೆಯುವ ನಿರೀಕ್ಷೆ ಇದೆ. ಇನ್ನು ಈ ಮಹತ್ವದ ಸಭೆಯಲ್ಲಿ ಬಿಹಾರದಲ್ಲಿ ಹೊಸ ಸರ್ಕಾರ ರಚಿಸುವುದಕ್ಕೆ ಸಂಬಂಧಿಸಿದಂತೆ ಚರ್ಚೆ ನಡೆಯ ಲಿದೆ ಎಂದು ಹೇಳಲಾಗಿದೆ. ಬಿಹಾರದಲ್ಲಿ ಬಿಜೆಪಿ ಹಾಗೂ ಜೆಡಿಯು ಮೈತ್ರಿಕೂಟವು ಅಧಿಕಾರದಲ್ಲಿದೆ. ಇನ್ನು ಈ ಬಾರಿಯ ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಪಕ್ಷವು 89 ಸ್ಥಾನಗಳಲ್ಲಿ ಗೆಲ್ಲುವ ಮೂಲಕ ಬಿಹಾರದ ಏಕೈಕ ಅತಿದೊಡ್ಡ ಪಕ್ಷವಾಗಿ ಬದಲಾಗಿದೆ. ಹೀಗಾಗಿ ನಿತೀಶ್ ಕುಮಾರ್ ಅವರು ರಾಜ್ಯಸಭೆಗೆ ಆಯ್ಕೆಯಾದರೆ, ಬಿಜೆಪಿ ಬಿಹಾರದಲ್ಲಿ ಮುಖ್ಯಮಂತ್ರಿ ಸ್ಥಾನವನ್ನು ಕೇಳುವ ಸಾಧ್ಯತೆ ಇದೆ. ಬಿಜೆಪಿಗೆ ಮುಖ್ಯಮಂತ್ರಿ ಸ್ಥಾನ, ಜೆಡಿ(ಯು)ಗೆ ಎರಡು ಉಪಮುಖ್ಯ ಮಂತ್ರಿ ಹುದ್ದೆಗಳನ್ನು ನೀಡ ಬಹುದು.

ಇನ್ನು ಬಿಹಾರದ ಮುಖ್ಯ ಮಂತ್ರಿ ನಿತೀಶ್ ಕುಮಾರ್ ಅವರು ರಾಜ್ಯಸಭೆಗೆ ಆಯ್ಕೆಯಾಗುವ ಜೆಡಿ(ಯು) ಪಕ್ಷ ಸಹ ದೃಢಪಡಿಸಿದೆ. ರಾಜ್ಯಸಭೆಗೆ ನಿತೀಶ್ ಕುಮಾರ್ ಅವರ ಆಯ್ಕೆಯ ಬಗ್ಗೆ ಚರ್ಚೆಗಳು ನಡೆಯುತ್ತಿವೆ ಎಂದು ಜೆಡಿ(ಯು) ಹಿರಿಯ ನಾಯಕ ಮತ್ತು ಸಚಿವ ವಿಜಯ್ ಕುಮಾರ್ ಚೌಧರಿ ಹೇಳಿದ್ದಾರೆ. ಈಗ ನಡೆಯುತ್ತಿರುವ ರಾಜಕೀಯ ಬೆಳವಣಿಗೆಯು ನಿತೀಶ್ ಕುಮಾರ್ ಅವರ ಒಪ್ಪಿಗೆಯೊಂದಿಗೆ ನಡೆಯುತ್ತಿದೆ. ನಿತೀಶ್ ಕುಮಾರ್ ಏನು ಬಯಸುತ್ತಾರೋ ಅದೇ ಆಗುತ್ತದೆ. ನಿರ್ಧಾರವನ್ನು ನಿತೀಶ್ ಕುಮಾರ್ ಮಾತ್ರ ತೆಗೆದುಕ'ೊಳ್ಳಬೇಕು ಎಂದು ಚೌಧರಿ ಹೇಳಿದ್ದಾರೆ., ನಿತೀಶ್ ಕುಮಾರ್ ಅವರು ರಾಜ್ಯಸಭೆಗೆ ಆಯ್ಕೆಯಾಗು ತ್ತಿರುವ ಬಗ್ಗೆ ಕೆಲವು ನಾಯಕರು, ಕಾರ್ಯಕರ್ತರು ಮತ್ತು ಬೆಂಬಲಿಗರಲ್ಲಿ ಅಸಮಾಧಾನ ಇರಬಹುದು ಎಂದು ಪಕ್ಷದ ಮೂಲಗಳು ಒಪ್ಪಿಕೊಂಡಿವೆ.

# ಕರ್ನಾಟಕದ ಅಧಿಕೃತ ಭಾಷೆಯಾಗಲಿ ತುಳು:

## ಸರ್ಕಾರಕ್ಕೆ ಆಂಧ್ರ ಮಾದರಿಯ ಅಧ್ಯಯನ ವರದಿ ಸಲ್ಲಿಕೆ

ಬೆಂಗಳೂರು: ತುಳು ಭಾಷೆಯನ್ನು ರಾಜ್ಯದ ಎರಡನೇ ಅಧಿಕೃತ ಭಾಷೆಯಾಗಿ ಘೋಷಿ ಸುವ ಕುರಿತ ಮಹತ್ವದ ಪ್ರಕ್ರಿಯೆಯಲ್ಲಿ ಹೊಸ ಬೆಳವಣಿಗೆ ನಡೆದಿದೆ. ಈ ಸಂಬಂಧ ಹೆಚ್ಚುವರಿ ಅಧಿಕೃತ ಭಾಷೆ ಘೋಷಣೆಗೆ ಸಂಬಂಧಿಸಿದ ಮಾನದಂಡ ಗಳನ್ನು ಅಧ್ಯಯನ ಮಾಡಲು ನೇಮಿಸಲಾದ ಸಮಿತಿಯು ತನ್ನ ಸಮಗ್ರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ. ಆಂಧ್ರಪ್ರದೇಶದಲ್ಲಿ ಉರ್ದು ಭಾಷೆಯನ್ನು ಎರಡನೇ ಅಧಿಕೃತ ಭಾಷೆಯಾಗಿ ಘೋಷಿ ಸುವ ಸಂದರ್ಭದಲ್ಲಿ ಅನುಸರಿಸಿದ ವಿಧಾನ ಗಳು ಹಾಗೂ ಮಾನ ದಂಡಗಳನ್ನು ಅಧ್ಯಯನ ಮಾಡಿದ ಸಮಿತಿಯು ತನ್ನ ಶಿಫಾರಸುಗಳನ್ನು ಒಳಗೊಂಡ ವರದಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಲ್ಲಿಸಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಂದಿನ ನಿರ್ದೇಶಕಿ ಕೆ.ಎಮ್ ಗಾಯತ್ರಿ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ತಾರಾನಾಥ ಗಟ್ಟಿ ಕಾಪಿಕಾಡ್ ಅವರ ಉಪಸ್ಥಿತಿಯಲ್ಲಿ 6 ಮಂದಿ ಸದಸ್ಯರ ಅಧ್ಯಯನ ಸಮಿತಿಯನ್ನು ಸರಕಾರ ನೇಮಿಸಿತ್ತು.

ಈ ಸಮಿತಿಯು ಜನವರಿ 19 ಹಾಗೂ 20ರಂದು ಆಂಧ್ರಪ್ರದೇಶ ರಾಜ್ಯದ ಸಚಿವಾಲಯ, ವಿವಿಧ ಇಲಾಖೆ, ಕಚೇರಿಗಳಿಗೆ ಭೇಟಿ ನೀಡಿ ಆಂಧ್ರಪ್ರದೇಶದಲ್ಲಿ ಉರ್ದು ಭಾಷೆಯನ್ನು ಎರಡನೇ ಅಧಿಕೃತ ಭಾಷೆಯಾಗಿ ಘೋಷಿಸುವ ಸಂದರ್ಭದಲ್ಲಿ ಕೈಗೊಂಡ ಮಾನ ದಂಡಗಳು ಹಾಗೂ ವಿಧಿ ವಿಧಾನಗಳ ಬಗ್ಗೆ ಅಧ್ಯಯನ ನಡೆಸಿ ವರದಿ ಸಿದ್ಧಪಡಿಸಿತ್ತು.



ಸಮಿತಿಯು ವರದಿಯನ್ನು ವಿಕಾಸ ಸೌಧದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಜೆ.ಮಂಜುನಾಥ್ ಅವರಿಗೆ ಅಧ್ಯಯನ ಸಮಿತಿ ಸದಸ್ಯರು ಸಲ್ಲಿಸಿದರು. ತುಳು ಭಾಷೆಯ ಹಿನ್ನೆಲೆ ಹಾಗೂ ಚರಿತ್ರೆಯ ಬಗೆಗಿನ ಪ್ರಸ್ತಾವನೆ ಯನ್ನು ಕೂಡ ವರದಿ ಜೊತೆಗೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಡಾ. ಬಿ.ಎಸ್. ಮಂಜುನಾಥ ಸ್ವಾಮಿ, ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ತಾರಾನಾಥ ಗಟ್ಟಿ ಕಾಪಿಕಾಡ್, ಅಧ್ಯಯನ ಸಮಿತಿ ಸದಸ್ಯರಾದ ಯಕ್ಷಗಾನ ಅಕಾಡೆಮಿಯ ಸದಸ್ಯ ಸುಧಾಕರ ಶೆಟ್ಟಿ , ಕಾನೂನು ಇಲಾಖೆಯ ಉಪಕಾರ್ಯದರ್ಶಿ ವನಿತಾ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಉಪಕಾರ್ಯದರ್ಶಿ ಮೂರ್ತಿ ಕೆ.ಎನ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧೀನ ಕಾರ್ಯ ದರ್ಶಿ ಕೆ.ಎಮ್. ಶುಭಶ್ರೀ, ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಕರಿಯಪ್ಪ ಎನ್. ಉಪಸ್ಥಿತರಿದ್ದರು.

## ದುಬೈನಲ್ಲಿ ಸಿಲುಕಿದ್ದ ಬಳ್ಳಾರಿ, ಚಿತ್ರದುರ್ಗದ 54 ಪ್ರವಾಸಿಗರು ಬೆಂಗಳೂರಿಗೆ ವಾಪಸ್


ಬಳ್ಳಾರಿ/ಬೆಂಗಳೂರು: ಇಸ್ರೇಲ್ ಅಮೆರಿಕ ಮತ್ತು ಇರಾನ್ ನಡುವಿನ ಯುದ್ಧದಿಂದಾಗಿ ಮಧ್ಯಪ್ರಾಚ್ಯ ದೇಶಗಳಲ್ಲಿ ಉದ್ವಿಗ್ನ ಉಂಟಾಗಿದ್ದರಿಂದ ದುಬೈನಲ್ಲಿ ಸಿಲುಕಿದ್ದ ಬಳ್ಳಾರಿ, ಚಿತ್ರದುರ್ಗದ ಪ್ರವಾಸಿಗರು ನಾಲ್ಕು ದಿನದ ಬಳಿಕ ಇಂದು ಬೆಳಗ್ಗೆ ಬೆಂಗಳೂರಿಗೆ ಸುರಕ್ಷಿತವಾಗಿ ವಾಪಸಾಗಿದ್ದಾರೆ. ಏರ್ಪೋರ್ಟ್ ನಲ್ಲಿ ಸ್ವಾಗತಿಸಿದ ಮಾಜಿ ಸಚಿವ ನಾಗೇಂದ್ರ: ವಿಮಾನಯಾನ ಸೇವೆ ರದ್ದಾಗಿದ್ದರಿಂದ ದುಬೈನಲ್ಲಿ ಬಳ್ಳಾರಿ ಮೂಲದ 54 ಜನ ಪ್ರವಾಸಿಗರು ಸಿಲುಕಿದ್ದರು. ಬಳಿಕ ನಿನ್ನೆ ವಿಮಾನದ ಮೂಲಕ ದುಬೈನಿಂದ ಕೊಚ್ಚಿಗೆ ಬಂದ ಪ್ರಯಾಣಿಕರು, ಬಳಿಕ ಅಲ್ಲಿಂದ ಬೆಂಗಳೂರಿಗೆ ಇಂದು ಆಗಮಿಸಿದ್ದಾರೆ. ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಮಾಜಿ ಸಚಿವ ಹಾಗೂ ಬಳ್ಳಾರಿ ಗ್ರಾಮೀಣ ಶಾಸಕ ನಾಗೇಂದ್ರ ಅವರು ಹೂಗುಚ್ಛ ನೀಡಿ ಪ್ರವಾಸಿಗರನ್ನು ಸ್ವಾಗತಿಸಿ, ವಿಚಾರಿಸಿದರು.

**ಪ್ರವಾಸಿಗರ ಸಂತಸ:**

ವಯೋವೃದ್ಧರು ಸೇರಿ ಬಳ್ಳಾರಿ, ಚಿತ್ರದುರ್ಗದ 54 ಜನ ಟ್ರಾವೆಲ್ ಏಜನ್ಸಿ ಮೂಲಕ ಫೆ.23ರಂದು ದುಬೈ ಪ್ರವಾಸ ಕೈಗೊಂಡಿದ್ದರು.

# ಪೆಟ್ರೋಲ್–ಡೀಸೆಲ್ ಖರೀದಿಗೆ ಮುಗಿ ಬಿದ್ದ ಜನ ವಿಡಿಯೋ ವೈರಲ್: ಕೇಂದ್ರ ಸರ್ಕಾರ

ಅಮೆರಿಕ, ಇಸ್ರೇಲ್ ಹಾಗೂ ಇರಾನ್ ದೇಶಗಳ ನಡುವೆ ನಡೆಯುತ್ತಿರುವ ಯುದ್ಧವು ದಿನದಿಂದ ದಿನಕ್ಕೆ ತೀವ್ರ ಸ್ವರೂಪವನ್ನು ಪಡೆದುಕೊಂಡಿದ್ದು. ಇರಾನ್‌ನಲ್ಲಿ ಮಾರಣಹೋಮವೇ ನಡೆದಿದೆ. ಇರಾನ್‌ನಲ್ಲಿ ಮಾತ್ರವಲ್ಲದೇ ಇಸ್ರೇಲ್ ಹಾಗೂ ಗಲ್ಫ್ ರಾಷ್ಟ್ರಗಳಲ್ಲೂ ಸೈನಿಕರು, ಜನ ಸಾವನ್ನಪ್ಪಿದ್ದಾರೆ. ಯುದ್ಧದ ತೀವ್ರತೆಯು ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು, ಈ ನಡುವೆ ಭಾರತದಲ್ಲಿ ಪೆಟ್ರೋಲ್–ಡೀಸೆಲ್ ಸಂಗ್ರಹ ಹಾಗೂ ಮಿತಿಯ ಬಗ್ಗೆ ಭಾರತೀಯರಲ್ಲಿ ಆತಂಕ ಹೆಚ್ಚಾಗುತ್ತಿದೆ.




ಮಧ್ಯಪ್ರಾಚ್ಯದಲ್ಲಿ ಎದುರಾಗಿರುವ ಯುದ್ಧದಿಂದ ಭಾರತಕ್ಕೆ ಕಚ್ಚಾ ತೈಲ ಸರಬರಾಜು ಆಗುವುದು ನಿಂತಿದ್ದು, ಇದರಿಂದ ಭಾರತದಲ್ಲಿ ಮುಂದಿನ ದಿನಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಖಾಲಿ ಆಗುವ ಆತಂಕ ಶುರುವಾಗಿದೆ. ಈಗ ಭಾರತದ ಬಳಿ ಎಷ್ಟು ದಿನಗಳಿಗೆ ಆಗುವ ಕಚ್ಚಾ ತೈಲವಿದೆ.

ಮಧ್ಯಪ್ರಾಚ್ಯದಲ್ಲಿ ಯುದ್ಧ ಸನ್ನಿವೇಶದಿಂದಾಗಿ ಭಾರತದಲ್ಲೂ ಕಚ್ಚಾ ತೈಲ, ಪೆಟ್ರೋಲ್, ಡೀಸೆಲ್ ಖಾಲಿ ಆಗುವ ಆತಂಕ ಶುರುವಾಗಿದೆ. ಆದರೆ ಈ ಬಗ್ಗೆ ಕೇಂದ್ರ ಸರ್ಕಾರವು ಸ್ಪಷ್ಟ ಮಾಹಿತಿಯನ್ನು ಹಂಚಿಕೊಂಡಿದೆ. ಅಲ್ಲದೆ ತುರ್ತು ಸಂದರ್ಭ ಎದುರಾದರೆ ಭಾರತಕ್ಕೆ ಕಚ್ಚಾ ತೈಲವನ್ನು ಸರಬರಾಜು ಮಾಡುವುದಕ್ಕೆ ನಾವು ಸಿದ್ಧರಿದ್ದೇವೆ ಎಂದು ರಷ್ಯಾ ಈಗಾಗಲೇ ಹೇಳಿದೆ.

ಈ ನಡುವೆ ಭಾರತದ ವಿವಿಧ ನಗರಗಳಲ್ಲಿ ಜನ ಪೆಟ್ರೋಲ್ ಬಂಕ್‌ಗಳ ಮುಂದೆ ನಿಲ್ಲುವ ಸಂಖ್ಯೆ ಹೆಚ್ಚಾಗಿದೆ. ಇಂಧನ ಕೊರತೆಯ ಸಾಧ್ಯತೆಯ ಬಗ್ಗೆ ಸೋಷಿಯಲ್ ಮೀಡಿಯಾಗಳಲ್ಲಿ ವದಂತಿಗಳು ಹೆಚ್ಚಾಗಿದ್ದು, ಹೈದರಾಬಾದ್‌ನಾದ್ಯಂತ ಪೆಟ್ರೋಲ್ ಪಂಪ್‌ಗಳಲ್ಲಿ ಗ್ರಾಹಕರ ಸಂಖ್ಯೆಯು ಭಾರೀ ಹೆಚ್ಚಳವಾಗಿದೆ. ಮಧ್ಯಪ್ರಾಚ್ಯ ಉದ್ವಿಗ್ನತೆಯಿಂದಾಗಿ ಪೆಟ್ರೋಲ್ ಸರಬರಾಜು ಕಡಿಮೆಯಾಗುತ್ತಿದೆ. ಮುಂದಿನ ದಿನಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯು ಭಾರೀ ಹೆಚ್ಚಳವಾಗಲಿದೆ ಎನ್ನುವ ಸಂದೇಶಗಳನ್ನು ಕೆಲವರು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಳ್ಳುತ್ತಿದ್ದು, ಜನರ ಆತಂಕಕ್ಕೆ ಕಾರಣವಾಗಿದೆ. ಜನರು ಭೀತಿಯಿಂದ ಪೆಟ್ರೋಲ್ ಮತ್ತು ಡೀಸೆಲ್ ಖರೀದಿ ಮಾಡುತ್ತಿದ್ದಾರೆ. ಕಚ್ಚಾ ತೈಲ ಕೊರತೆಯ ಭಯ ಮತ್ತು ಪೆಟ್ರೋಲ್ ಬಂಕ್‌ಗಳು ಮುಚ್ಚಬಹುದು ಎನ್ನುವ ವದಂತಿಗಳಿಂದಾಗಿ ಭಾರತದ ಹಲವು ನಗರಗಳಲ್ಲಿನ ಪೆಟ್ರೋಲ್ ಬಂಕ್‌ಗಳಲ್ಲಿ ಜನದಟ್ಟಣೆ ಹೆಚ್ಚಳವಾಗಿದೆ.

ಅಲ್ಲದೆ ಜನ ದೀರ್ಘ ಸರತಿ ಸಾಲುಗಳಲ್ಲಿ ನಿಲ್ಲುವುದು ಕಂಡುಬರುತ್ತಿದೆ. ಅಮೆರಿಕ, ಇಸ್ರೇಲ್ ಹಾಗೂ ಇರಾನ್ ದೇಶಗಳ ನಡುವೆ ನಡೆಯುತ್ತಿರುವ ಯುದ್ಧವು ಕನಿಷ್ಠ ನಾಲ್ಕು ವಾರಗಳ ಅವಧಿಗೆ ಮುಂದುವರಿಯುವ ಸಾಧ್ಯತೆ ಇದೆ ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಹೇಳಿರುವುದು ಸಹ ಭಾರತದಲ್ಲಿ ಆತಂಕಕ್ಕೆ ಕಾರಣವಾಗಿದೆ. ಇಂಧನ ಬೆಲೆಗಳು ಲೀಟರ್‌ಗೆ 500 ರೂಪಾಯಿ ಆಗಬಹುದು ಎನ್ನುವ ಸಂದೇಶಗಳನ್ನು ಕೆಲವರು ಹಂಚಿಕೊಳ್ಳುತ್ತಿರುವುದರಿಂದಾಗಿ ಜನ ಪೆಟ್ರೋಲ್ ಬಂಕ್‌ನ ಮುಂದೆ ಸರತಿ ಸಾಲಿನಲ್ಲಿ ನಿಲ್ಲುವುದು ಹೆಚ್ಚಾಗಿದೆ.

**ಹೈದರಾಬಾದ್ ನಗರದಲ್ಲಿ ಸಂಕಷ್ಟ**

ಇನ್ನು ಹೈದರಾಬಾದ್‌ನಲ್ಲಿ ಜನ ಪೆಟ್ರೋಲ್–ಡೀಸೆಲ್ ಬೆಲೆ ಹೆಚ್ಚಾಗಲಿದೆ. ಕಚ್ಚಾ ತೈಲ ಖಾಲಿ ಆಗಲಿದೆ ಎನ್ನುವ ವದಂತಿಗಳನ್ನು ನಂಬಿ ಪೆಟ್ರೋಲ್ ಪಂಪ್‌ಗಳಿಗೆ ಬರುತ್ತಿದ್ದಾರೆ. ಹೈದರಾಬಾದ್ ನಗರದಲ್ಲಿ ಈ ಭೀತಿ ಹೆಚ್ಚಾಗಿದ್ದು, ಪೆಟ್ರೋಲ್ ಪಂಪ್‌ಗಳಲ್ಲಿ ಜನ ದಟ್ಟಣೆ ಹೆಚ್ಚಾಗಿ ಸಮಸ್ಯೆ ಆಗಿರುವ ವಿಡಿಯೋಗಳು ವೈರಲ್ ಆಗಿವೆ. ವಾಹನ ಚಾಲಕರ ಬೃಹತ್ ಸರತಿ ಸಾಲುಗಳು ನಿಲ್ಲುತ್ತಿದ್ದು, ಇನ್ನೂ ಕೆಲವರು ಬಾಟಲಿಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ತುಂಬಿಸಿಕೊಳ್ಳುವುದಕ್ಕೆ ಸರ್ಕಸ್ ಮಾಡುತ್ತಿದ್ದಾರೆ.

**ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಆಗಿಲ್ಲ**

ಇರಾನ್ ಮೇಲೆ ಅಮೆರಿಕ ಮತ್ತು ಇಸ್ರೇಲಿ ದಾಳಿಗಳು ಮತ್ತು ಟೆಹ್ರಾನ್‌ನ ಪ್ರತೀಕಾರದ ಮುಷ್ಕರಗಳ ನಂತರ ಅಂತರರಾಷ್ಟ್ರೀಯ ತೈಲ ಬೆಲೆಗಳು ಸುಮಾರು ಶೇ 9ದಷ್ಟು ಏರಿಕೆಯಾಗಿವೆ. ಆದರೆ ಭಾರತದಲ್ಲಿ ಚಿಲ್ಲರೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು ಶೀಘ್ರದಲ್ಲೇ ಹೆಚ್ಚಾಗುವ ಸಾಧ್ಯತೆಯಿಲ್ಲ ಎಂದು ಹೇಳಲಾಗಿದೆ. ಭಾರತವು ತನ್ನ ಕಚ್ಚಾ ತೈಲದ ಅಗತ್ಯದ 88 ಪ್ರತಿಶತವನ್ನು ಆಮದು ಮಾಡಿಕೊಳ್ಳುತ್ತದೆ. ಇದನ್ನು ಸಂಸ್ಕರಣಾಗಾರಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್‌ನಂತಹ ಇಂಧನಗಳಾಗಿ ಪರಿವರ್ತಿಸಲಾಗುತ್ತದೆ. ಹೆಚ್ಚಿನ ಜಾಗತಿಕ ಬೆಲೆಗಳು ದೊಡ್ಡ ಆಮದು ಬಿಲ್ ಮತ್ತು ಸಂಭಾವ್ಯ ಹಣದುಬ್ಬರ ಒತ್ತಡಗಳಿಗೆ ಕಾರಣವಾಗುತ್ತವೆ. ಆದಾಗ್ಯೂ, ಪೆಟ್ರೋಲ್ ಮತ್ತು ಡೀಸೆಲ್‌ನ ಇಂಧನ ಬೆಲೆಗಳನ್ನು ತಕ್ಷಣವೇ ಹೆಚ್ಚಿಸುವ ನಿರೀಕ್ಷೆಯಿಲ್ಲ, ಏಕೆಂದರೆ ಸರ್ಕಾರವು ಅಂತರರಾಷ್ಟ್ರೀಯ ಬೆಲೆಗಳು ಕಡಿಮೆಯಾದಾಗ ಕಂಪನಿಗಳು ಲಾಭ ಗಳಿಸಲು ಅವಕಾಶ ನೀಡುವ ಮತ್ತು ದರಗಳು ಏರಿಕೆಯಾದಾಗ ಗ್ರಾಹಕರಿಗೆ ತೊಂದರೆ ಆಗದಂತಹ ಸಮತೋಲಿತ ನೀತಿಯನ್ನು ಅನುಸರಿಸುತ್ತಿದೆ ಎಂದು ಹೇಳಲಾಗಿದೆ. ಏಪ್ರಿಲ್ 2022 ರಿಂದ ಚಿಲ್ಲರೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಸ್ಥಗಿತಗೊಳಿಸಲಾಗಿದೆ. ಇಂಡಿಯನ್ ಆಯಿಲ್ ಕಾರ್ಪೋರೇಷನ್ (ಐಒಸಿ), ಭಾರತ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್ (ಬಿಪಿಸಿಎಲ್) ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್ (ಎಚ್‌ಪಿಸಿಎಲ್) ನಂತಹ ಇಂಧನ ಚಿಲ್ಲರೆ ವ್ಯಾಪಾರಿಗಳು ಕಚ್ಚಾ ತೈಲ ಬೆಲೆಗಳು ಹೆಚ್ಚಾದಾಗ ನಷ್ಟವನ್ನು ಭರಿಸುತ್ತಾರೆ ಮತ್ತು ದರಗಳು ಕಡಿಮೆಯಾದಾಗ ಲಾಭ ಗಳಿಸುತ್ತಾರೆ.

ಇನ್ನು ಮಧ್ಯಪ್ರಾಚ್ಯದಲ್ಲಿ ಸಂಘರ್ಷದ ಉಲ್ಬಣಗೊಂಡ ನಂತರ ಪೆಟ್ರೋಲ್ ಕೊರತೆಯ ಭೀತಿ ಹೆಚ್ಚುತ್ತಿರುವ ಕಾರಣ ಯುಕೆಯಾದ್ಯಂತ ಪೆಟ್ರೋಲ್ ಬಂಕ್‌ಗಳಲ್ಲಿ ಸರತಿ ಸಾಲಿನಲ್ಲಿ ನಿಲ್ಲುವ ಕಾರುಗಳ ಸಂಖ್ಯೆ ಹೆಚ್ಚಳವಾಗಿದೆ. ಲಂಡನ್, ಮ್ಯಾಂಚೆಸ್ಟರ್ ಮತ್ತು ಲಿವರ್‌ಪೂಲ್‌ನಂತಹ ಸ್ಥಳಗಳಲ್ಲಿ ವಾಹನ ಸವಾರರು ಪೆಟ್ರೋಲ್–ಡೀಸೆಲ್ ತುಂಬಿಸಿಕೊಳ್ಳಲು ಒಂದು ಗಂಟೆಗೂ ಹೆಚ್ಚು ಕಾಲ ಕಾಯಬೇಕಾಯಿತು ಎಂದು ವರದಿ ಆಗಿದೆ. ಮಧ್ಯಪ್ರಾಚ್ಯಾದಲ್ಲಿ ಯುದ್ಧವು ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದೆ. ಆದರೆ ಸದ್ಯಕ್ಕೆ ಆತಂಕ ಪಡುವ ಅವಶ್ಯಕತೆ ಇಲ್ಲ. ಮುಂದಿನ 25 ದಿನಗಳಿಗೆ ಅವಶ್ಯವಿರುವ ಕಚ್ಚಾ ತೈಲ (ಪೆಟ್ರೋಲ್ – ಡೀಸೆಲ್) ಭಾರತದ ಬಳಿ ಇದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಆದಾಗ್ಯೂ ಸದ್ಯಕ್ಕೆ ಭಾರತದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಿಸುವ ಯಾವುದೇ ಯೋಜನೆ ಇಲ್ಲ ಎಂದು ಹೇಳಲಾಗಿದೆ. ಪೆಟ್ರೋಲಿಯಂ ಸಚಿವಾಲಯವು ನಿರಂತರವಾಗಿ ಬದಲಾಗುತ್ತಿರುವ ಪರಿಸ್ಥಿತಿಯನ್ನು ಗಮನಿಸುತ್ತಿದೆ. ಅಲ್ಲದೆ ದೇಶದಲ್ಲಿ ಪ್ರಮುಖ ಪೆಟ್ರೋಲಿಯಂ ಉತ್ಪನ್ನಗಳ ಲಭ್ಯತೆ ಮತ್ತು ಕೈಗೆಟುಕುವ ದರದಲ್ಲಿ ಗ್ರಾಹಕರಿಗೆ ಸಿಗುವಂತೆ ಮಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯವು ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

# ಬೀಡಿ ಕಾರ್ಮಿಕರ ಸಮಸ್ಯೆ ಹತ್ತಿಕ್ಕಲು ಪಣ:

## ಸಾವಿರಾರು ಕಾರ್ಮಿಕರ ಧ್ವನಿಯಾದ ಜಬೀನ ಖಾನಂ

ದಾವಣಗೆರೆ: ಜಬೀನ ಖಾನಂ ಹಳೇ ದಾವಣಗೆರೆಯ ಮೆಹಬೂಬ್ ನಗರದ ಬಡ ಕುಟುಂಬದ ಸದಸ್ಯೆ. ತಂದೆ ಆಟೋ ಓಡಿಸಿ ಜೀವನ ಸಾಗಿಸಿದರೆ, ಇವರ ಇಡೀ ಕುಟುಂಬ ಬೀಡಿ ಕಟ್ಟುವ ಕಾಯಕದಲ್ಲಿ ತೊಡಗಿಸಿಕೊಂಡಿತ್ತು. ಬೀಡಿ ಕಟ್ಟಿದರೆ ಮಾತ್ರ ಇವರ ಕುಟುಂಬದ ನಿರ್ವಹಣೆ ಆಗ್ತಿತ್ತು. ಬೀಡಿ ಕಾರ್ಮಿಕರಿಗೆ ಕಡಿಮೆ ಕೂಲಿ, ಬೀಡಿ ಕಂಪನಿಗಳ ದೌರ್ಜನ್ಯ, ಗುತ್ತಿಗೆದಾರರ ಮೋಸ ಹೀಗೆ ಈ ಎಲ್ಲವೂ ಅವರ ಕಣ್ಣ ಮುಂದೆಯೇ ನಡೆಯುತ್ತಿದ್ದವು. ತಾನೂ ಬೀಡಿ ಕಾರ್ಮಿಕರಾಗಿದ್ದರಿಂದ ಜಬೀನಾ ಖಾನಂ ಅವರು ಈ ಅನ್ಯಾಯದ ವಿರುದ್ಧ ಧ್ವನಿ ಎತ್ತಿ ನೆರಳು ಬೀಡಿ ಕಾರ್ಮಿಕರ ಯೂನಿಯನ್ ಹುಟ್ಟು ಹಾಕಿ ಹೋರಾಟಕ್ಕಿಳಿದರು. ಬೀಡಿ ಕಾರ್ಮಿಕರ ಮೇಲೆ ನಡೆಯುತ್ತಿದ್ದ ದೌರ್ಜನ್ಯದ ವಿರುದ್ಧ ಧ್ವನಿ ಎತ್ತಿದರು. ಅವರಿಗೆ ಸಿಗುತ್ತಿದ್ದ ಕನಿಷ್ಠ ಕೂಲಿ ಸೌಲಭ್ಯಗಳನ್ನು ಬೀಡಿ ಕಾರ್ಮಿಕರಿಗೆ ಸಿಗುವಂತೆ ಮಾಡಿದ್ರು. ಸಂಘಟನೆ ಹುಟ್ಟು ಹಾಕಿದ ಆರಂಭದಲ್ಲಿ 30 ಜನ ಮಹಿಳೆಯರು ಹೋರಾಟಕ್ಕೆ ಸಾಥ್ ನೀಡಿದ್ರು. ಇದೀಗ ಅವರ ಸಂಘಟನೆಯಲ್ಲಿ ಬರೋಬ್ಬರಿ 2,500 ಜನ ಕಾರ್ಮಿಕರಿದ್ದಾರೆ. ಈ ಭಾಗದಲ್ಲಿ 7 ಸಾವಿರ ಜನ ಕಾರ್ಮಿಕರಿದ್ದು, ಅವರ ಬಳಿ ತಲುಪಲಿದ್ದಾರೆ. 150 ರೂಪಾಯಿ ಇದ್ದ ಕೂಲಿ, 240 ರೂಪಾಯಿ ಸಿಗುವಂತೆ ಮಾಡಿರುವ ಕೀರ್ತಿ ಈ ಹೋರಾಟಗಾರ್ತಿ ಅಧ್ಯಕ್ಷೆ ಜಬೀನ ಖಾನಂ ಅವರಿಗೆ ಸಲ್ಲುತ್ತದೆ. ಇದಕ್ಕೆ ಸಂಘಟನೆಯ ಕಾರ್ಮಿಕರು ಸಾಥ್ ನೀಡಿದ್ದು, ಸ್ವತಃ ಅವರೇ ನೆನಪಿಸಿಕೊಳ್ಳುತ್ತಾರೆ.

**ಜಬೀನಾ ಖಾನಂ ಅವರ ಹೋರಾಟದ ನುಡಿಗಳಿವು :** ಹೋರಾಟಗಾರ್ತಿ ಜಬೀನ ಖಾನಂ ಅವರು ಈಟಿವಿ ಭಾರತ್ ಜೊತೆ ಮಾತನಾಡಿ, 'ನಾನು ಬೀಡಿ ಕಟ್ಟುವ ಕುಟುಂಬದಿಂದ ಬಂದಿದ್ದು, ನಮ್ಮ ತಾಯಿ, ಅಕ್ಕ, ನಾನೂ ಕೂಡ ಬೀಡಿ ಕಟ್ಟುತ್ತಿದ್ದೆ. ನಾನು ವಾರಕ್ಕೆ 10 ಸಾವಿರ ಬೀಡಿ ಕಟ್ಟಬಲ್ಲೆ. ಬೀಡಿ ಕಾರ್ಮಿಕರ ಸಮಸ್ಯೆ ಅರಿತು ಈ ಸಂಘಟನೆ ಹುಟ್ಟು ಹಾಕಿದ್ದೇನೆ. ಅಂದಿನಿಂದ ಈ ಸಂಪರ್ಕ ಸೇತುವೆಯಾಗಿ ಕಾರ್ಮಿಕರೊಂದಿಗೆ ಕೆಲಸ ಮಾಡಿದ್ದೇನೆ. ನನ್ನ ಒಬ್ಬಳಿಂದ ಈ ಬದಲಾವಣೆ ಆಗಿಲ್ಲ. ಎಲ್ಲ ಕಾರ್ಮಿಕರ ಸಹಕಾರದಿಂದ ಆಗಿದೆ. ಬೀಡಿ ಕಾರ್ಮಿಕರು ಬೀಡಿ ಕಟ್ಟಿ ಜೀವನ ಸಾಗಿಸುತ್ತಿದ್ದಾರೆ. ಈ ಬೀಡಿ ಕಟ್ಟುವ ಕೆಲಸ



ಇಲ್ಲ ಎಂದರೆ ಅವರಿಗೆ ತೊಂದರೆ ಆಗಲಿದೆ. ಸರ್ಕಾರ ನಿಗದಿ ಮಾಡಿರುವ ಕೂಲಿಗಿಂತ ಕೆಲವರು ಕಡಿಮೆ ಕೂಲಿ ಕೊಡುತ್ತಿದ್ದರಿಂದ ಹೋರಾಟ ಆರಂಭಿಸಿದ್ದೇವೆ' ಎಂದಿದ್ದಾರೆ. 'ರಾಜ್ಯಮಟ್ಟದಲ್ಲಿ ಬೀಡಿ ಕಾರ್ಮಿಕರಿದ್ದಾರೆ ಎಂದು ಈ ಸಂಘಟನೆ ಮಾಡಿದ್ದೆ. ನಮ್ಮ ವೇತನ ಹೆಚ್ಚಾಗಿರುವುದೇ ನಮಗೆ ದೊಡ್ಡ ಖುಷಿ. ಇದು ನಮ್ಮ ಸಂಘಟನೆಯ ಹೋರಾಟದ ಫಲ. ಬೇರೆ ಬೇರೆ ಸೌಲಭ್ಯಕ್ಕಾಗಿ ಬೀಡಿ ಕಾರ್ಮಿಕರು ಬೀದಿಗಿಳಿದು ತಮ್ಮ ಹಕ್ಕುಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಈ ಸಂಘಟನೆಗೆ ಸೇರಿದ ಮಹಿಳೆಯರು ಶಾಲೆ, ಆಸ್ಪತ್ರೆ, ಸರ್ಕಾರಿ ಇಲಾಖೆ, ಅಂಗನವಾಡಿ ಕೇಂದ್ರಗಳನ್ನ ಪ್ರಶ್ನೆ ಮಾಡುವುದನ್ನು ಕಲಿತಿದ್ದಾರೆ. ಎಲ್ಲಿ ಅನ್ಯಾಯ ನಡೆಯಲಿದೆಯೋ ಅಲ್ಲಿ ಪ್ರಶ್ನೆ ಮಾಡ್ತಿರುವುದು ನಮಗೆ ಖುಷಿ' ಎಂದು ಹೇಳಿದ್ದಾರೆ.

**ಬೀಡಿ ಕಾರ್ಮಿಕರ ಕಲ್ಯಾಣ ಮಂಡಳಿ ಜಾರಿ ಆಗಬೇಕು ಎಂಬುದು ಕನಸು :** 'ರಾಜ್ಯ ಸರ್ಕಾರ ಬೀಡಿ ಕಾರ್ಮಿಕರನ್ನು ಗುರುತಿಸುವ ಕೆಲಸ ಮಾಡ್ಬೇಕಾಗಿದೆ. ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿ ಮಾದರಿಯಲ್ಲಿ ಬೀಡಿ ಕಾರ್ಮಿಕರ ಕಲ್ಯಾಣ ಮಂಡಳಿ ಜಾರಿ ಮಾಡ್ಬೇಕು. ಸರ್ಕಾರ ಮನಸ್ಸಿಗೆ ಬಂದಂತೆ ವೇತನ ನಿಗದಿ ಮಾಡಬಾರದು. 150 ಕೂಲಿಯಲ್ಲಿ ಮನೆ ನಡೆಸಲು ಆಗಲ್ಲ. ಸರ್ಕಾರ ಒಬ್ಬ ಕಾರ್ಮಿಕ ಬದುಕುವ ರೀತಿಯಲ್ಲಿ ಕೂಲಿ ಜಾರಿ ಮಾಡ್ಬೇಕು. ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಸಿಗಬೇಕು. ಗೌರವಯುತ ಪಿಂಚಣಿ ಸಿಗಬೇಕು. ಬೀಡಿ ಕಾರ್ಮಿಕರ ಮಕ್ಕಳಿಗೆ ಸರ್ಕಾರ ಸ್ಕಾಲರ್ ಶಿಪ್ ವ್ಯವಸ್ಥೆ ಮಾಡಬೇಕು. ಸರ್ಕಾರ ತಂಬಾಕು ನಿಷೇಧ ಮಾಡಿದರೆ ಇವರಿಗೆ ಕೆಲಸ ಇಲ್ಲದಂತೆ ಆಗಲಿದೆ. ಆದ್ದರಿಂದ, ಕಾರ್ಮಿಕರಿಗೆ ಪರ್ಯಾಯ ಉದ್ಯೋಗ ಪರಿಹಾರ ನೀಡಬೇಕು' ಎಂದು ಸರ್ಕಾರಕ್ಕೆ ಮನವಿ ಮಾಡಿದರು.

**ಸಂಘಟನೆಗೆ ಸೇರಿದ ಬಳಿಕವೇ ಸಮಾಜದಲ್ಲಿ ಪ್ರಶ್ನೆ ಮಾಡುವ ಧೈರ್ಯ :** 'ನಮಗೆ ಈ ಸಂಘಟನೆಗೆ ಸೇರಿದ ಬಳಿಕವೇ ಸಮಾಜದಲ್ಲಿ ಪ್ರಶ್ನೆ ಮಾಡುವ ಧೈರ್ಯ ಬಂತು. ಎಲ್ಲಿಯಾದರೂ ಅನ್ಯಾಯ ನಡೆದರೆ, ಯಾವ ಸ್ಥಳದಲ್ಲಾದರೂ ಪ್ರಶ್ನೆ ಮಾಡ್ತೇವೆ. ನಾನು 11 ವರ್ಷದವಳಿದ್ದಾಗ 8 ರೂಪಾಯಿ ಕೂಲಿಯಿಂದ ಬೀಡಿ ಕಟ್ಟುವ ಕೆಲಸ ಮಾಡಲು ಆರಂಭಿಸಿದೆ. ಇದೀಗ 240 ರೂಪಾಯಿ ಕೂಲಿ ಪಡೆದು ಜೀವನ ನಡೆಸುತ್ತಿದ್ದೇವೆ. ಸಂಘಟನೆಯಲ್ಲಿ ಸೇರಿ, ಕಾರ್ಮಿಕ ಇಲಾಖೆಗೆ ಮನವಿ ಮಾಡಿ 240 ರೂಪಾಯಿ ಕೂಲಿ ಮಾಡಿಸಿದ್ದೆವು. ನಮಗೆ ಜಬೀನ ಮೇಡಂ ಅವರಿಂದ ನಮಗೆ ಒಳ್ಳೆ ಸೌಲಭ್ಯಗಳು ಸಿಕ್ಕಿವೆ. ಅವರು ಅಂದಿನಿಂದ ಇಂದಿನ ತನಕ ನಮಗೆ ಸಾಥ್ ನೀಡ್ತಾ ಬಂದಿದ್ದಾರೆ. ನಮ್ಮ ಪರವಾಗಿ ಸಾಕಷ್ಟು ಹೋರಾಟಗಳನ್ನು ಮಾಡಿದ್ದಾರೆ. ಮೇಡಂ ಸಭೆ ಮಾಡ್ತಾರೆ. ಏನೆಲ್ಲ ಮಾಡ್ಬೇಕು ಎಂದು ತಿಳಿ ಹೇಳುತ್ತಿದ್ದಾರೆ. ಸರ್ಕಾರಿ ಕಚೇರಿ, ಆಸ್ಪತ್ರೆಗಳಲ್ಲಿ, ಶಾಲೆಗಳಲ್ಲಿ ಲಂಚ ಕೇಳಿದರೆ ನಾವು ಪ್ರಶ್ನೆ ಮಾಡಿದ್ದ ಉದಾಹರಣೆಗಳಿವೆ' ಎನ್ನುತ್ತಾರೆ ಬೀಡಿ ಕಾರ್ಮಿಕರಾದ ಸಬ್ರೀನ್ ತಾಜ್.

**ಜಬೀನ ಮೇಡಂ ನಮಗೆ ಒಳ್ಳೆಯದನ್ನೇ ಮಾಡಿದ್ದಾರೆ :** ಬೀಡಿ ಕಾರ್ಮಿಕರಾದ ಫರ್ಝುನ್ನಿಸಾ ಅವರು ಮಾತನಾಡಿ, 'ಎಲ್ಲಿ ತಪ್ಪಾಗಿದೆ ಅಲ್ಲಿ ನ್ಯಾಯಕ್ಕಾಗಿ ಈ ರೀತಿ ಇದೆ, ಬನ್ನಿ ಎಂದು ಮೇಡಂ ಕರೆದ್ರೆ ತಕ್ಷಣ ಎಲ್ರೂ ಹೋಗುತ್ತೇವೆ. ನಮಗೆ ಜಬೀನ ಮೇಡಂ ಒಳ್ಳೆಯದನ್ನೇ ಮಾಡಿದ್ದಾರೆ. 150 ರಿಂದ 240 ರೂಪಾಯಿ ಕೂಲಿ ಸಿಗುವಂತೆ ಆಗಿದ್ದು, ಜಬೀನ ಮೇಡಂ ಅವರಿಂದ. ನಾವು ಬೀಡಿ ಕಟ್ಟಲು ಆರಂಭಿಸಿದಾಗ 60 ರೂ ಕೂಲಿ ಇತ್ತು. ಇದೀಗ 240 ಕೂಲಿ ಸಿಗ್ತಿದೆ. ಯಾವುದೇ ಹೋರಾಟ ಇದ್ರೂ ತಪ್ಪದೇ ಹೋಗಿ ನ್ಯಾಯಕ್ಕಾಗಿ ಪಟ್ಟು ಹಿಡಿದಿರುವ ಉದಾಹರಣೆಗಳಿವೆ. ಆಸ್ಪತ್ರೆ ಖಾಸಗೀಕರಣ, ರೈತಪರ ಹೋರಾಟ, ಅಂಗನವಾಡಿ ಕೇಂದ್ರದ ಹೋರಾಟ, ನಮ್ಮ ಕೂಲಿ ಹೆಚ್ಚು ಮಾಡಿ ಎಂದು ಕಾರ್ಮಿಕ ಇಲಾಖೆಗೆ ಮನವಿ ಮಾಡಿರುವ ಉದಾಹರಣೆಗಳಿವೆ' ಎಂದಿದ್ದಾರೆ.

# ಮಾದಕ ವಸ್ತುಗಳ ಮಾರಾಟ ಆರೋಪ:

## ಇಬ್ಬರು ನೈಜೀರಿಯಾ ಪ್ರಜೆಗಳ ಬಿಡುಗಡೆಗೆ ಆದೇಶಿಸಿದ ಹೈಕೋರ್ಟ್

ಬೆಂಗಳೂರು: ಮಾದಕವಸ್ತು ಸಂಗ್ರಹ ಹಾಗೂ ಮಾರಾಟ ಪ್ರಕರಣದಲ್ಲಿ ಬಂಧನಕ್ಕೊಳಗಾಗಿದ್ದ ನೈಜೀರಿಯಾ ಮೂಲದ ಇಬ್ಬರು ಆರೋಪಿಗಳ ಬಿಡುಗಡೆಗೆ ಆದೇಶಿಸಿರುವ ಹೈಕೋರ್ಟ್, ಅನಧಿಕೃತವಾಗಿ ಕಳೆದ ಒಂದು ದಶಕದಿಂದ ಭಾರತದಲ್ಲಿ ನೆಲೆಸಿರುವ ಆರೋಪಿಗಳನ್ನು ದೇಶದಿಂದ ಗಡಿಪಾರು ಮಾಡಲು ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿಗೆ 'ಸ್ಥಾಂತರಿಸಲು ನಿರ್ದೇಶನ ನೀಡಿದೆ. ತಮ್ಮನ್ನು ಅಕ್ರಮ ಬಂಧನದಿಂದ ಬಿಡುಗಡೆ ಮಾಡಲು ಪೊಲೀಸರಿಗೆ ನಿರ್ದೇಶಿಸಬೇಕು ಎಂದು ಕೋರಿ ನೈಜೀರಿಯಾ ಪ್ರಜೆಗಳಾದ (ಸದ್ಯ ಕೋಗಿಲು ಲೇ ಔಟ್ ವಿಳಾಸ ಹೊಂದಿರುವ) ಇಮೆಕಾ ಜೇಮ್ಸ್ ಐವೊಬಾ ಹಾಗೂ ವುಡೆರಿಕ್ ಫಿಡೆಲಿಸ್ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ.

ಅಲ್ಲದೆ, ಅರ್ಜಿದಾರರಿಗೆ ನೀಡಲಾದ ಬಂಧನದ ಕಾರಣಗಳು ದೋಷಪೂರಿತ ಆಗಿರುವುದರಿಂದ ಹಾಗೂ ಬಂಧನದ ಕಾರಣಗಳಿಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ಆದೇಶದ ಉಲ್ಲಂಘನೆಯಾಗಿದೆ. ಆದ್ದರಿಂದ ಅರ್ಜಿದಾರರು ಬಿಡುಗಡೆ ಹೊಂದಲು ಅರ್ಹರಾಗಿದ್ದಾರೆ.

ಅರ್ಜಿದಾರರು ಬಿಡುಗಡೆಯಾದ ತಕ್ಷಣ ಅವರ ವಿರುದ್ಧದ ಕಾನೂನು ಪ್ರಕ್ರಿಯೆ




ಹಿಂಪಡೆಯುವುದಕ್ಕೆ ಹಾಗೂ ಗಡಿಪಾರು ಮಾಡುವುದಕ್ಕೆ ಸಂಬಂಧಿಸಿದ ಪ್ರಮಾಣಿತ ಕಾರ್ಯಾಚರಣೆ ವಿಧಾನದ (ಎಸ್‌ಒಪಿ) ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲು ಎಫ್ಆರ್‌ಆರ್‌ಗೆ ಹಸ್ತಾಂತರಿಸಲು ನಿರ್ದೇಶನ ನೀಡಿದೆ.

ಜತೆಗೆ, ಅಕ್ರಮ ವಲಸಿಗರನ್ನು ಗಡಿಪಾರು ಮಾಡುವ ಸಂಬಂಧ ಕೇಂದ್ರ ಸರ್ಕಾರ ಹೊರಡಿಸಿರುವ ಎಸ್‌ಒಪಿಯಲ್ಲಿ ತಿಳಿಸಿರುವಂತೆ ರಾಜ್ಯ ಮಟ್ಟದ ಸ್ಕ್ರೀನಿಂಗ್ ಸಮಿತಿ ಮತ್ತು ಜಿಲ್ಲಾ ಮಟ್ಟದ ಸ್ಕ್ರೀನಿಂಗ್ ಸಮಿತಿಯನ್ನು ರಚಿಸಬೇಕು. ಈ ಸಂಬಂಧ ಮುಂದಿನ ನಾಲ್ಕು ತಿಂಗಳಲ್ಲಿ ಪೀಠಕ್ಕೆ ವರದಿ ಸಲ್ಲಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ. ಅಲ್ಲದೆ, ಭಾರತದ ಸಂವಿಧಾನದ ವಿಧಿ 22(1)ರ ಪ್ರಕಾರ, ಬಂಧಿಸಲ್ಪಟ್ಟ ಪ್ರತಿಯೊಬ್ಬ ವ್ಯಕ್ತಿಗೂ ಆತನ ಬಂಧನಕ್ಕೆ ಕಾರಣಗಳನ್ನು ತಿಳಿಸುವುದು ಕಡ್ಡಾಯವಾಗಿದೆ. ಬಂಧನದ ಕಾರಣಗಳನ್ನು ತಿಳಿಸಬೇಕೆನ್ನುವುದು ಒಂದು ಕಡ್ಡಾಯವಾದ ಸಾಂವಿಧಾನಿಕ ರಕ್ಷಣೆಯಾಗಿದೆಯೇ ಹೊರತು ಅದು ಔಪಚಾರಿಕ ಕಾರ್ಯವಿಧಾನವಷ್ಟೇ ಅಲ್ಲ. 22ನೇ ವಿಧಿಯು ಕೇವಲ ನಾಗರಿಕ ಕೇಂದ್ರಿತವಲ್ಲದೆ, ವ್ಯಕ್ತಿ ಕೇಂದ್ರಿತವಾಗಿದೆ. ಈ ಹಿನ್ನೆಲೆಯಲ್ಲಿ ಅದರ ಅಡಿ ದೊರೆತಿರುವ ಸಾಂವಿಧಾನಿಕ ರಕ್ಷಣೆಯು ಭಾರತದ ಭೂ ಪ್ರದೇಶದಲ್ಲಿರುವ ವಿದೇಶಿಗರಿಗೂ ಸೇರಿದಂತೆ ದೇಶದ ಎಲ್ಲ ಪ್ರಜೆಗಳಿಗೂ ಅನ್ವಯಿಸುತ್ತದೆ ಎಂದು ಪೀಠ ಇದೆ ವೇಳೆ ತಿಳಿಸಿದೆ.

**ಪ್ರಕರಣದ ಹಿನ್ನೆಲೆ:** ಮಾದಕ ವಸ್ತು ಮಾರಾಟ ಮಾಡುತ್ತಿದ್ದ ಆರೋಪದಲ್ಲಿ ಅರ್ಜಿದಾರರನ್ನು 2024ರ ಮೇ 12ರಂದು ನಗರದ ಸಂಪಿಗೆಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದರು. ಈ ವೇಳೆ, ಆರೋಪಿಗಳಿಂದ 400 ಗ್ರಾಂ ಎಂಡಿಎಂಎ ವಶಪಡಿಸಿ ಕೊಳ್ಳಲಾಗಿತ್ತು. ಈ ಸಂಬಂಧ ಅವರ ವಿರುದ್ಧ ಎನ್‌ಡಿಪಿಎಸ್ ಕಾಯ್ದೆ ಹಾಗೂ ವಿದೇಶಿಯರ ಕಾಯ್ದೆ ಅಡಿ ಪ್ರಕರಣ ದಾಖಲಿಸಲಾಗಿತ್ತು. ಪ್ರಕರಣವು ಬೆಂಗಳೂರಿನ ಎನ್‌ಡಿಪಿಎಸ್ ವಿಶೇಷ ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿತ್ತು. ಇದರಿಂದ ಅರ್ಜಿದಾರರು ತಮ್ಮ ಬಂಧನವನ್ನು ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ್ದರು.

# ಶಿಕ್ಷಣ ಸಂಸ್ಥೆ, ಹಾಸ್ಟೆಲ್‌ಗಳಲ್ಲಿ ಡ್ರಗ್ಸ್ ವಿರುದ್ಧ ಪೊಲೀಸರ ದಿಢೀರ್ ತಪಾಸಣೆ:

## 31 ವಿದ್ಯಾರ್ಥಿಗಳಲ್ಲಿ ಸೇವನೆ ದೃಢ



ಬೆಂಗಳೂರು: ಮಾದಕ ಪದಾರ್ಥಗಳ ಸೇವನೆಯ ವಿರುದ್ಧದ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಬೆಂಗಳೂರು ಪಶ್ಚಿಮ ವಿಭಾಗದ 6 ಶಿಕ್ಷಣ ಸಂಸ್ಥೆಗಳು ಹಾಗೂ 2 ಹಾಸ್ಟೆಲ್‌ಗಳಲ್ಲಿ ಇಂದು ಪೊಲೀಸರು ದಿಢೀರ್ ತಪಾಸಣೆ ನಡೆಸಿದರು. ಶಿಕ್ಷಣ ಸಂಸ್ಥೆಗಳು ಹಾಗೂ ಹಾಸ್ಟೆಲ್‌ಗಳ ವ್ಯವಸ್ಥಾಪಕರ ಅನುಮತಿಯೊಂದಿಗೆ ಸುಮಾರು 1,200 ವಿದ್ಯಾರ್ಥಿಗಳಿಂದ ಸ್ಯಾಂಪಲ್ಸ್ ಪಡೆಯಲಾಗಿದ್ದು, 585 ಜನರ ಸ್ಯಾಂಪಲ್ಸ್ ಪರಿಶೀಲನೆ ನಡೆಸಿದಾಗ ಕೆಲವರು ಮಾದಕ ಪದಾರ್ಥ ಸೇವಿಸಿರುವುದು ದೃಢಪಟ್ಟಿದೆ. ಆ ವಿದ್ಯಾರ್ಥಿಗಳನ್ನು ವ್ಯಸನ ಮುಕ್ತಗೊಳಿಸಲು 'ಸನ್ಮಿತ್ರ' ಕಾರ್ಯಕ್ರಮದಡಿ ಪೋಷಕರಿಗೆ ನೆರವು ನೀಡಲಾಗುವುದು ಎಂದು ಪೊಲೀಸರು ಹೇಳಿದ್ದಾರೆ.

1,200 ವಿದ್ಯಾರ್ಥಿಗಳ ಸ್ಯಾಂಪಲ್ಸ್ ಪಡೆದು, 585 ಸ್ಯಾಂಪಲ್ಸ್ ಅನ್ನು ರ‍್ಯಾಂಡಮ್ ಆಗಿ ಮಾದಕ ಸೇವನೆ ಪತ್ತೆ ಪರೀಕ್ಷೆಗೊಳಪಡಿಸಿದಾಗ, 31 ವಿದ್ಯಾರ್ಥಿಗಳು ಮಾದಕ ಪದಾರ್ಥ ಸೇವಿಸಿರುವುದು ದೃಢಪಟ್ಟಿದೆ. ಶಿಕ್ಷಣ ಸಂಸ್ಥೆ, ಹಾಸ್ಟೆಲ್‌ಗಳ ಆಡಳಿತ ಮಂಡಳಿಗಳು ಹಾಗೂ ಪುಣ್ಯ ಆಸ್ಪತ್ರೆ, ಪದ್ಮದೇವಯ್ಯ ಆಸ್ಪತ್ರೆ, ಕಾಡೆ ಆಸ್ಪತ್ರೆ, ಶರಾವತಿ ಆಸ್ಪತ್ರೆ, ಶ್ರೀಲಕ್ಷ್ಮೀ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ಕಾಂಗರೂ ಕೇರ್ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ಸಹಕಾರ ಒದಗಿಸಿದ್ದಾರೆ. ಮಾದಕ ಪದಾರ್ಥಗಳ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಕಾಲೇಜು ಆಡಳಿತ ಮಂಡಳಿಗೆ ಪೊಲೀಸರು ಮನವರಿಕೆ ಮಾಡಿಕೊಟ್ಟಿದ್ದಾರೆ.

ವ್ಯಸನಮುಕ್ತ ಸಮಾಜಕ್ಕಾಗಿ 'ಸನ್ಮಿತ್ರ': ಮಾದಕ ಪದಾರ್ಥಗಳ ಸೇವನೆ ಮಾಡುವವರನ್ನು, ವ್ಯಸನದಿಂದ ಮುಕ್ತಗೊಳಿಸಲು ಪೊಲೀಸ್ ಇಲಾಖೆಯ ವತಿಯಿಂದ 'ಸನ್ಮಿತ್ರ' ಯೋಜನೆಗೆ ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎಸ್ ಸಲೀಂ ಚಾಲನೆ ನೀಡಿದ್ದರು. ಇದರ ಮೂಲಕ ಮಾದಕ ವ್ಯಸನಿ ವಿದ್ಯಾರ್ಥಿಗಳು ಮತ್ತು ಅವರ ಪೋಷಕರಿಗೆ ಪೊಲೀಸರು ನೆರವಾಗಲಿದ್ದಾರೆ. ವ್ಯಸನಿಗಳನ್ನು ಕೌನ್ಸೆಲಿಂಗ್‌ಗೆ ಒಳಪಡಿಸಿ, ಅವರು ಯಾವ ಕಾರಣದಿಂದ ಮಾದಕ ಪದಾರ್ಥಗಳಿಗೆ ದಾಸರಾಗಿದ್ದಾರೆ ಮಾದಕ ಪದಾರ್ಥಗಳು ಸಿಗುತ್ತಿರುವುದು ಹೇಗೆ ಎಂಬುದನ್ನು ತಿಳಿದುಕೊಳ್ಳಲಾಗುತ್ತದೆ. ಇದರೊಂದಿಗೆ ಅಂತಹ ವಿದ್ಯಾರ್ಥಿಗಳೊಂದಿಗೆ ಸಮಾಲೋಚಿಸಿ ಅವರನ್ನು ಮಾದಕ ವ್ಯಸನದಿಂದ ಮುಕ್ತಗೊಳಿಸಲು ಪ್ರಯತ್ನಿಸಲಾಗುತ್ತದೆ. ವಿದ್ಯಾರ್ಥಿಗಳ ಮೇಲೆ ನಿರಂತರವಾಗಿ ಪೊಲೀಸರು ನಿಗಾವಹಿಸಲಿದ್ದಾರೆ ಮತ್ತು ಅವರ ಗೌಪ್ಯತೆಯನ್ನು ಕಾಪಾಡಲಾಗುತ್ತದೆ.

# ಮೌಲ್ವಿ ಮೇಲೆ ಹಿಂದೂ ಯುವಕರ ಹಲ್ಲೆ ಆರೋಪ:

## ಸಾವಿರಾರು ಮುಸ್ಲಿಮರಿಂದ ಬೃಹತ್ ಪ್ರತಿಭಟನೆ, ಕೋಮು ಸಂಘರ್ಷ

ಬೀದರ್: ಬಸವಕಲ್ಯಾಣದಲ್ಲಿ ಕೋಮು ಸಂಘರ್ಷ ಶುರುವಾಗಿದೆ. ಬಸವಕಲ್ಯಾಣದಲ್ಲಿ ಮಾರ್ಚ್ 3ರ ತಡರಾತ್ರಿ ನಡೆದಿರುವ ಬೆಳವಣಿಗೆ ಯೂ ಈ ಭಾಗದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗುವುದಕ್ಕೆ ಕಾರಣವಾಗಿದೆ.



ಮುಸ್ಲಿಂ ಮೌಲ್ವಿಗಳ ಮೇಲೆ ಹಿಂದೂ ಯುವಕರು ಹಲ್ಲೆ ನಡೆಸಿದ್ದಾರೆ ಎನ್ನುವ ಆರೋಪದ ಬೆನ್ನಲ್ಲೇ ಮುಸ್ಲಿಂ ಸಮುದಾಯದ ಸಾವಿರಾರು ಜನ ಒಂದೆಡೆ ಸೇರಿದ್ದಾರೆ. ಈ ಘಟನೆಯ ಹಿನ್ನೆಲೆ ಏನು, ಈಗ ಬೀದರ್‌ನಲ್ಲಿ ಪರಿಸ್ಥಿತಿ ಹೇಗಿದೆ ಎನ್ನುವ ವಿವರ ಇಲ್ಲಿದೆ.

ಮುಸ್ಲಿಂ ಮೌಲ್ವಿಗಳ ಮೇಲೆ ಹಿಂದೂ ಯುವಕರು ಹಲ್ಲೆ ಮಾಡಿದ್ದಾರೆ ಎಂದು ಹೇಳಲಾಗಿದ್ದು, ಈ ವಿಚಾರವು ಹಿಂದೂ – ಮುಸ್ಲಿಮರ ನಡುವೆ ಸಂಘರ್ಷಕ್ಕೆ ಕಾರಣವಾಗಿದೆ. ಈ ವಿಷಯ ವನ್ನು ಕೇಳಿ ಆಕ್ರೋಶ 'ಗೊಂಡಿರುವ ಸಾವಿರಾರು ಮುಸ್ಲಿಂ ಸಮುದಾಯದ ಜನ ಬಸವಕಲ್ಯಾಣ ನಗರ ಪೊಲೀಸ್ ಠಾಣೆ ಮುಂದೆ ಬೃಹತ್ ಪ್ರತಿಭಟನೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಮೌಲ್ವಿಗಳ ಮೇಲೆ ಹಲ್ಲೆ ಮಾಡಿರುವ ಯುವಕರನ್ನು ನಮ್ಮ ವಶಕ್ಕೆ ಕೊಡಿ ಎಂದು ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಲು ಮುಂದಾಗಿದ್ದಾರೆ. ಇನ್ನು ಈ ಸಂಘರ್ಷವು ವಿಕೋಪಕ್ಕೆ ಹೋಗುವುದನ್ನು ತಪ್ಪಿಸುವುದಕ್ಕೆ ಪೊಲೀಸರು ಹರಸಾಹಸ ಪಟ್ಟಿದ್ದಾರೆ.

ಗದ್ದಲ ಗಲಾಟೆ ಮಾಡಬೇಡಿ ಎಂದು ಪೊಲೀಸರು ಮೈಕ್ನಲ್ಲಿ ಮಾಡಿದ್ದಾರೆ. ಆದರೆ ಈ ಸಂದರ್ಭದಲ್ಲಿ ಕೆಲವು ಮುಸ್ಲಿಂ ಯುವಕರು ಪೊಲೀಸರಿಗೆ ಸಹಕಾರ ನೀಡಿಲ್ಲ ಎಂದು ಹೇಳಲಾಗಿದೆ. ಕೆಲವರು ಅಲ್ಲಾಹು ಅಕ್ಬರ್ ಎಂದು ಘೋಷಣೆ ಕೂಗಿ, ಆಕ್ರೋಶ ಹೊರಹಾಕಿದ್ದಾರೆ. ಈ ಘಟನೆಯಿಂದಾಗಿ ಬಸವಕಲ್ಯಾಣ ನಗರದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು. ಘಟನೆಯ ಹಿನ್ನೆಲೆ ಏನು ಇಲ್ಲಿನ ಬಸವ 'ಕಲ್ಯಾಣದಲ್ಲಿ ಭಾಗದಲ್ಲಿ ಕೆಲವು ಹಿಂದೂ ಯುವಕರು ಮುಸ್ಲಿಂ ಮೌಲ್ವಿಗಳ ಮೇಲೆ ಹಲ್ಲೆ ಮಾಡಿದ್ದರಿಂದ ಈ ಘಟನೆ ನಡೆದಿದೆ ಎಂದು ಹೇಳಲಾಗಿದೆ. ಈ ವಿಷಯವು ಕೆಲವೇ ನಿಮಿಷಗಳಲ್ಲಿ ಎಲ್ಲೆಡೆ ಹಬ್ಬಿದ್ದು ಸಮಸ್ಯೆಯಾಗಿ ಪರಿವರ್ತ ನೆಯಾಯಿತು ಎಂದು ಹೇಳ ಲಾಗಿದೆ.

ಈ ವಿಷಯದಿಂದ ಕೋಪ ಗೊಂಡ ಕೆಲವು ಮುಸ್ಲಿಂ ಸಮುದಾಯದ ಸಾವಿರಾರು ಯುವಕರು ಹಾಗೂ ಮುಖಂಡರು ನಗರದ ಗಾಂಧಿ ವೃತ್ತದಲ್ಲಿರುವ ಪೊಲೀಸ್ ಠಾಣೆ ಬಳಿ ಬಂದಿದ್ದಾರೆ. ಮೌಲ್ವಿಗಳ ಮೇಲೆ ಹಲ್ಲೆ ನಡೆಸಿದವರ ವಿರುದ್ಧ ಎಫ್‌ಐಆರ್ ದಾಖಲಿಸಿಕೊಳ್ಳುವಂತೆ ಆಗ್ರಹಿಸಿದ್ದಾರೆ. ಅವರನ್ನು ನಮ್ಮ ವಶಕ್ಕೆ ವಶಕ್ಕೆ ಕೊಡಿ ಎಂದು ಕೇಳಿದ್ದಾರೆ. ಬೀದರ್‌ನ ಬಸವಕಲ್ಯಾಣದಲ್ಲಿ ಪರಿಸ್ಥಿತಿಯು ವಿಕೋಪಕ್ಕೆ ಹೋಗು ತ್ತಿರುವುದನ್ನು ಗಮನಿಸಿರುವ ಪೊಲೀಸರು ಪರಿಸ್ಥಿತಿ ನಿಯಂತ್ರಿಸಿದ್ದಾರೆ. ಪೊಲೀಸರು ಕೂಡಲೇ ಹಿಂದೂ ಯುವಕರ ಮೇಲೆ ಪ್ರಕರಣ ದಾಖಲಿಸಿ ಕೊಂಡಿದ್ದಾರೆ. ಪೊಲೀಸರ ಕ್ರಮದಿಂದಾಗಿ ಮುಸ್ಲಿಮರು ಪ್ರತಿಭಟನೆ ಕೈಬಿಟ್ಟಿದ್ದಾರೆ. ಇನ್ನು ಇದೇ ಸಂದರ್ಭದಲ್ಲಿ ಏಕಾಏಕಿ ಪ್ರತಿಭಟನೆ ಮಾಡಿ, ಗದ್ದಲ ಸೃಷ್ಟಿ ಮಾಡಿದ ಆರೋಪದ ಮೇಲೆ 49 ಜನ ಮುಸ್ಲಿಮರ ವಿರುದ್ಧವೂ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಹೇಳಲಾಗಿದೆ.

# ಪಶ್ಚಿಮ ಏಷ್ಯಾ ಉದ್ವಿಗ್ನತೆ: ಪೆಟ್ರೋಲ್ ಬೆಲೆ ಏರಿಕೆ ಬಗ್ಗೆ ಈಗಲೇ ಹೇಳಲು ಸಾಧ್ಯವಿಲ್ಲ; ಪ್ರಹ್ಲಾದ್ ಜೋಶಿ

ಹುಬ್ಬಳ್ಳಿ: ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯಾಗುತ್ತದೆಯೇ ಎಂಬುದರ ಬಗ್ಗೆ ಈಗಲೇ ಏನನ್ನೂ ಊಹಿಸಲು ಸಾಧ್ಯವಾಗದು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ಬುಧವಾರ ಹೇಳಿದ್ದಾರೆ.



ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಗಲ್ಫ್ ಪ್ರದೇಶದ ಪರಿಸ್ಥಿತಿ ಸಹಜವಾಗಿಯೇ ಭಾರತಕ್ಕೂ ಪರಿಣಾಮ ಬೀರುವ ಸಾಧ್ಯತೆ ಇದೆ. ಆದರೆ, ದೇಶದಲ್ಲಿ ಸುಮಾರು 70 ದಿನಗಳ ಕಾಲ ಬಳಸಲು ಸಾಕಾಗುವಷ್ಟು ಪೆಟ್ರೋಲಿಯಂ ಸಂಗ್ರಹವಿದೆ ಎಂದು ಈಗಾಗಲೇ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿಯವರು ಸ್ಪಷ್ಟಪಡಿಸಿದ್ದಾರೆ ಎಂದು ಹೇಳಿದರು. ರಷ್ಯಾ ಸೇರಿದಂತೆ ಇತರೆ ದೇಶಗಳಿಂದ ಕಚ್ಚಾ ತೈಲವನ್ನು ಆಮದು ಮಾಡುವ ಸಾಧ್ಯತೆಗಳ ಕುರಿತು ವಾಣಿಜ್ಯ, ಪೆಟ್ರೋಲಿಯಂ ಹಾಗೂ ವಿದೇಶಾಂಗ ಇಲಾಖೆ ಅಧಿಕಾರಿಗಳು ಚರ್ಚೆ ನಡೆಸುತ್ತಿದ್ದಾರೆ. ಸರ್ಕಾರ ತೆಗೆದುಕೊಳ್ಳುವ ಯಾವುದೇ ನಿರ್ಧಾರ ದೇಶದ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡೇ ಇರುತ್ತದೆ ಎಂದು ತಿಳಿಸಿದರು.

ಇರಾನ್ ಸುಪ್ರೀಂ ನಾಯಕ ಖಮೇನಿ ಹತ್ಯೆ ಕುರಿತಾಗಿ ಕೇಂದ್ರ ಸರ್ಕಾರ ಸ್ಪಷ್ಟ ಪ್ರತಿಕ್ರಿಯೆ ನೀಡಿಲ್ಲ ಎಂಬ ಕಾಂಗ್ರೆಸ್ ಆರೋಪಕ್ಕೆ ಪ್ರತಿಕ್ರಿಯಿಸಿದ, ಇದು ಸೂಕ್ಷ್ಮ ವಿಷಯವಾಗಿದ್ದು, ರಾಜಕೀಯ ಮಾಡುವ ಸಮಯ ಇದಲ್ಲ ಎಂದರು. ಭಾರತದ ವಿದೇಶಾಂಗ ನೀತಿ ದುರ್ಬಲವಾಗಿದ್ದರೆ 37 ದೇಶಗಳು ಭಾರತದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಮಾಡುತ್ತವೆಯೇ ಎಂದೂ ಇದೇ ವೇಳೆ ಪ್ರಶ್ನಿಸಿದರು.

# 8 ಜಿಲ್ಲೆಗಳಲ್ಲಿ ಬೆಳ್ಳಂಬೆಳಗ್ಗೆ ಲೋಕಾಯುಕ್ತ ದಾಳಿ:

## ಹಾಸನದಲ್ಲಿ ಅಧಿಕಾರಿಯ ಮನೆ ಬಾಗಿಲು ತೆರೆಸಲು ಅಧಿಕಾರಿಗಳ ಹರಸಾಹಸ

ಬೆಂಗಳೂರು: ಆದಾಯಕ್ಕಿಂತ ಅಧಿಕ ಆಸ್ತಿಗಳಿಕೆ, ಭ್ರಷ್ಟಾಚಾರದ ಆರೋಪದ ಹಿನ್ನೆಲೆಯಲ್ಲಿ ರಾಜ್ಯದ ಹಲವು ಸರ್ಕಾರಿ ಅಧಿಕಾರಿಗಳಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಬೆಳ್ಳಂಬೆಳಗ್ಗೆ ದಾಳಿ ನಡೆಸಿದ್ದಾರೆ. ಬೆಂಗಳೂರು, ಮೈಸೂರು, ಮಂಡ್ಯ, ಬಾಗಲಕೋಟೆ, ಧಾರವಾಡ, ಹಾಸನ, ವಿಜಯಪುರ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ವಿವಿಧ ಸರ್ಕಾರಿ ಇಲಾಖೆಗಳ ಅಧಿಕಾರಿ ಗಳ ಮನೆಗಳು ಹಾಗೂ ಕಚೇರಿಗಳ ಮೇಲೆ ಏಕಕಾಲದಲ್ಲಿ ದಾಳಿ ನಡೆಸಲಾಗಿದ್ದು, ಪರಿಶೀಲನೆ ನಡೆಸಲಾಗುತ್ತಿದೆ.

ಎಲ್ಲೆಲ್ಲಿ, ಯಾರ ಮೇಲೆ ದಾಳಿ ಬೆಂಗಳೂರಿನ ಯಲಹಂಕ ಗ್ರಾಮದ ರೈತ ಸೇವಾ ಸಹಕಾರ ಬ್ಯಾಂಕ್‌ನ ಸಿಇಒ ಶಶಿಧರ್ ಆರ್., ಹೆಬ್ಬಾಳದ ಪಶು ವೈದ್ಯಕೀಯ ಕಾಲೇಜಿನ ಅಸಿಸ್ಟೆಂಟ್ ಪ್ರೊಫೆಸರ್ ಹೆಚ್.ಸಿ ಇಂದ್ರೇಶ್, ಕೆಆರ್‌ಐಡಿಎಲ್ ಚೀಫ್ ಇಂಜಿನಿಯರ್ ವಸಂತ್ ವಿ ನಾಯ್ಕ್ ಅವರ ಮನೆ ಮತ್ತು ಕಚೇರಿಗಳಲ್ಲಿ ಲೋಕಾಯುಕ್ತ ಅಧಿಕಾರಿಗಳ ಪರಿಶೀಲನೆ ಮುಂದುವರೆದಿದೆ. ಅಲ್ಲದೆ ಯಾದಗಿರಿಯ ಎಲೆಕ್ಟ್ರಿಕಲ್ ಇಲಾಖೆ ಡೆಪ್ಯುಟಿ ಎಲೆಕ್ಟ್ರಿಕಲ್ ಇನ್ಸ್‌ಪೆಕ್ಟರ್ ವಿರೇಶ್ ಹಿರೇಮಠ, ಮಂಡ್ಯದ ಸಾರ್ವಜನಿಕ ಕಾಮಗಾರಿಗಳ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಎಸ್.ಸತೀಶ್, ಧಾರವಾಡದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಎಂ.ಕೆ. ಸುರಕೋಡ,





ಮೈಸೂರಿನ ಜಲಮಂಡಳಿಯ ಎಇಇ ಹಾಗೂ ಇಇ (ಇನ್‌ಚಾರ್ಜ್) ಆಶಿಫ್ ಇಕ್ಬಾಲ್, ವಿಜಯಪುರದ ಕೃಷ್ಣಭಾಗ್ಯ ಜಲ ನಿಗಮದ ಜೂನಿಯರ್ ಇಂಜಿನಿಯರ್ ಪ್ರಕಾಶ್ ಪಿ.ಜಿ ಅವರಿಗೆ ಸೇರಿದ ಸ್ಥಳಗಳಲ್ಲಿ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ. ಬಾಗಿಲು ತೆಗೆಯದ ಎಇಇ: ಹಾಸನದಲ್ಲಿ ಲೋಕಾಯುಕ್ತ ಅಧಿಕಾರಿಗಳ ದಾಳಿ ವೇಳೆ ಮಹಾನಗರ ಪಾಲಿಕೆಯ ಎಇಇ ಎಂ.ಸಿ. ಸತ್ಯನಾರಾಯಣ ಅವರು ಮನೆ ಬಾಗಿಲು ತೆರೆಯದ ಹಿನ್ನೆಲೆ ಸುಮಾರು 2 ತಾಸಿಗೂ ಹೆಚ್ಚು ಸಮಯ ಅಧಿಕಾರಿಗಳ ತಂಡ ಮನೆ ಮುಂದೆ ಕಾಯಬೇಕಾದ ಪರಿಸ್ಥಿತಿ ಉಂಟಾಗಿತ್ತು. ಬೆಳಗ್ಗೆ 5.15 ಕ್ಕೆ ಲೋಕಾಯುಕ್ತ ಡಿವೈಎಸ್‌ಪಿ ಸುರೇಶ್ ಕುಮಾರ್, ಇನ್ಸ್‌ಪೆಕ್ಟರ್ ಶಿಲ್ಪಾ ನೇತೃತ್ವದಲ್ಲಿ ಅಧಿಕಾರಿಗಳು, ಸತ್ಯನಾರಾಯಣ ಅವರ ವಿದ್ಯಾನಗರದ ಮನೆಯ ಬಳಿ ಬರುತ್ತಿದ್ದಂತೆ ಲೈಟ್ ಆಫ್ ಮಾಡಿ, ಬಾಗಿಲು ತೆರೆದಿರಲಿಲ್ಲ. ಮನೆಯ ಮೇಲೆ ಹತ್ತಿ ಕಿಟಕಿ ಬಡಿದು, ಕೂಗಿದರು ಮನೆಯ ಬಾಗಿಲು ತೆರೆದಿರಲಿಲ್ಲ.

ಸತತ 2 ಗಂಟೆಗಳ ಕಾಲ ಬಾಗಿಲು ತೆರೆಯಿಸಲು ಅಧಿಕಾರಿ ಗಳು ಹರಸಾಹಪಟ್ಟರು. ಬಳಿಕ ಕೆಆರ್ ಪುರಂ ಪೊಲೀಸ್ ಠಾಣಾ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿದರು.


**ಬಾಗಿಲು ತೆರೆದ ಎಇಇ:** ಸಿಸಿಟಿವಿಯ ಮುಂದೆ ನಿಂತು ಬಾಗಿಲು ತೆರೆಯುವಂತೆ ಅಧಿಕಾರಿ ಗಳು ಹೇಳಿದ್ದರು. ಬಳಿಕ ಎಇಇ ಮನೆಯ ಬಾಗಿಲು ತೆರೆದಿದ್ದಾರೆ. ನಂತರ ಲೋಕಾಯುಕ್ತ ಅಧಿಕಾರಿಗಳು, ಮನೆಯೊಳಗೆ ಪ್ರವೇಶಿಸಿ ಪರಿಶೀಲನೆ ನಡೆಸಿದ್ದಾರೆ.

**ಸ್ಥಳಕ್ಕೆ ಲೋಕಾಯುಕ್ತ ಎಸ್ಪಿ ನಂದಿನಿ ಭೇಟಿ:** ಇನ್ನೂ ಸತ್ಯನಾರಾಯಣ ಬಾಗಿಲು ತೆರೆಯದ ಕಾರಣ ಸ್ಥಳಕ್ಕೆ ಲೋಕಾಯುಕ್ತ ಎಸ್ಪಿ ನಂದಿನಿ ಕೂಡ ಭೇಟಿ ನೀಡಿ ಮೇಲ್ವಿಚಾರಣೆ ನಡೆಸಿದ್ದಾರೆ. ಬಳಿಕ ಅಧಿಕಾರಿಗಳಿಂದ ಮಾಹಿತಿ ಪಡೆದು ಅಲ್ಲಿಂದ ತೆರಳಿದ್ದರು.

# ರಾಂಚಿಯಲ್ಲಿ ಅತಿ ವೇಗವಾಗಿ ಕಾರು ಚಾಲನೆ:

## ಟೀಂ ಇಂಡಿಯಾ ಮಾಜಿ ನಾಯಕ ಎಂಎಸ್ ಧೋನಿಗೆ ದಂಡ!

ರಾಂಚಿ: ಕಾರು ಮತ್ತು ಬೈಕ್‌ಗಳ ಬಗ್ಗೆ ವಿಪರೀತ ಕ್ರೇಝ್ ಹೊಂದಿರುವ ಟೀಂ ಇಂಡಿಯಾ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ಅವರಿಗೆ ಸಂಚಾರ ನಿಯಮ ಉಲ್ಲಂಘನೆಗಾಗಿ ದಂಡ ವಿಧಿಸಲಾಗಿದೆ. ವಸತಿ ನಿವೇಶನವನ್ನು ದುರುಪಯೋಗಪಡಿಸಿಕೊಂಡ ಆರೋಪದ ಮೇರೆಗೆ ಜಾರ್ಖಂಡ್ ರಾಜ್ಯ ವಸತಿ ಮಂಡಳಿಯು ರಾಂಚಿಯ ಹರ್ಮು ಪ್ರದೇಶದಲ್ಲಿರುವ ಧೋನಿ ಅವರ ಮನೆಗೆ ನೋಟಿಸ್ ನೀಡಿದ ಕೇವಲ ಒಂದು ವಾರದಲ್ಲೇ ಈ ಘಟನೆ ನಡೆದಿದೆ.



ರಾಂಚಿ ಸಂಚಾರ ಪೊಲೀಸರು ಧೋನಿಗೆ ಇ–ಚಲನ್ ನೀಡಿದ್ದು, ಅದರಲ್ಲಿ ಮಾರ್ಚ್ 1 ರಂದು ಧೋನಿಯ ಕಾರು ಗಂಟೆಗೆ 91 ಕಿ.ಮೀ ವೇಗದಲ್ಲಿ ಚಲಿಸಿದ್ದು, ಇದು ಅನುಮತಿಸಲಾದ 60 ಕಿ.ಮೀ. ವೇಗದ ಮಿತಿಯನ್ನು ಮೀರಿದೆ. ಅತಿ ವೇಗದ ಚಾಲನೆಗಾಗಿ 1,000 ರೂ. ದಂಡ ವಿಧಿಸಲಾಗಿದೆ ಎಂದು ತಿಳಿಸಲಾಗಿದೆ. ಸ್ವಯಂಚಾಲಿತ ಸಂಚಾರ ಮೇಲ್ವಿಚಾರಣಾ ವ್ಯವಸ್ಥೆಯು ಕಾಂಕೆ ರಿಂಗ್ ರಸ್ತೆಯ ಬಿರ್ಸಾ ಕೃಷಿ ವಿಶ್ವವಿದ್ಯಾಲಯದ ಬಳಿ ಧೋನಿ ಅವರ ಐಷಾರಾಮಿ ಕಾರು ವೇಗದ ಮಿತಿಯನ್ನು ಮೀರಿರುವುದು ಕಂಡುಬಂದಿದೆ.

ಕಾನೂನು ಎಲ್ಲರಿಗೂ ಸಮಾನವಾಗಿದೆ, ಅದು ಸಾಮಾನ್ಯ ನಾಗರಿಕನಾಗಿರಲಿ ಅಥವಾ ಉನ್ನತ ವ್ಯಕ್ತಿಯಾಗಿರಲಿ ಎಂದು ಪೊಲೀಸರು ತಿಳಿಸಿದ್ದಾರೆ. ಈಗ, ಈ ವಿಚಾರವಾಗಿ ಧೋನಿ ಅವರು ಸಾರ್ವಜನಿಕವಾಗಿ ಯಾವುದೇ ರೀತಿಯ ಪ್ರತಿಕ್ರಿಯೆ ನೀಡಿಲ್ಲ. ಆದರೆ ಇದು ನಗರದಲ್ಲಿ ತೀವ್ರ ಚರ್ಚೆಯ ವಿಷಯವಾಗಿದೆ. ಕಳೆದ ವಾರ, ಧೋನಿ ಅವರ ಹೆಸರಿನಲ್ಲಿ ಹಂಚಿಕೆ ಮಾಡಲಾದ ವಸತಿ ನಿವೇಶನವನ್ನು ವಾಣಿಜ್ಯಿಕವಾಗಿ ಬಳಸಿಕೊಂಡಿದ್ದಾರೆ ಎಂಬ ಆರೋಪದ ಮೇಲೆ ಜಾರ್ಖಂಡ್ ರಾಜ್ಯ ವಸತಿ ಮಂಡಳಿಯು ಅವರಿಗೆ ನೋಟಿಸ್ ನೀಡಿತ್ತು.

# ಮಾರ್ಗದರ್ಶಿ ಚಿಟ್ ಫಂಡ್:
## ಸಿಂಧನೂರಿನಲ್ಲಿ ರಾಜ್ಯದ 28ನೇ ಶಾಖೆ ಕಾರ್ಯಾರಂಭ

ಸಿಂಧನೂರು (ರಾಯಚೂರು): ಪ್ರತಿಷ್ಠಿತ ರಾಮೋಜಿ ಗ್ರೂಪ್ ಆಫ್ ಕಂಪೆನೀಸ್‌ಗೆ ಸೇರಿದ ಅತ್ಯಂತ ವಿಶ್ವಾಸಾರ್ಹ ಸಂಸ್ಥೆ ಮಾರ್ಗದರ್ಶಿ ಚಿಟ್ ಫಂಡ್, ದೇಶದ 129ನೇ ಹಾಗೂ ಕರ್ನಾಟಕದ 28ನೇ ಶಾಖೆಯನ್ನು



ಇಂದು ರಾಯಚೂರು ಜಿಲ್ಲೆಯ ಸಿಂಧನೂರು ಪಟ್ಟಣದಲ್ಲಿ ಲೋಕಾರ್ಪಣೆಗೊಳಿಸಿತು. ಮಾರ್ಗದರ್ಶಿ ಚಿಟ್ ಪ್ರೈವೇಟ್ ಲಿಮಿಟೆಡ್ ಕಂಪೆನಿ ಆಂಧ್ರ ಪ್ರದೇಶ, ತೆಲಂಗಾಣ, ಕರ್ನಾಟಕ, ತಮಿಳುನಾಡು ಸೇರಿದಂತೆ ದೇಶದೆಲ್ಲೆಡೆ ಮನೆ ಮಾತಾಗಿದೆ. ಕಳೆದ 63 ವರ್ಷಗಳಿಂದ ಗ್ರಾಹಕರ ನಂಬಿಕೆ ಉಳಿಸಿಕೊಂಡಿರುವ ಕಂಪೆನಿ, ಇದೀಗ ಸಿಂಧನೂರಿನಲ್ಲಿ ಶಾಖೆ ತೆರೆದಿದೆ. ಮಾರ್ಗದರ್ಶಿ ಚಿಟ್‌ನ ಕರ್ನಾಟಕ ಪ್ರಾದೇಶಿಕ ವಿಭಾಗದ ಮುಖ್ಯಸ್ಥ ಪಿ.ಲಕ್ಷ್ಮಣ ರಾವ್, ಮಾರ್ಗದರ್ಶಿ ಉಪಾಧ್ಯಕ್ಷ ಜಿ.ಬಲರಾಮ್ ಕೃಷ್ಣ, (ಬಿಸ್ನೆಸ್ ಡೆವಲಪ್‌ಮೆಂಟ್ ಕಾರ್ಪೊರೇಟ್ ಕಚೇರಿ), ಕರ್ನಾಟಕ ವಿಭಾಗದ ಜನರಲ್ ಮ್ಯಾನೇಜರ್ ನಂಜುಂಡಯ್ಯ, ಸಿಂಧನೂರು ಶಾಖೆಯ ಮ್ಯಾನೇಜರ್ ಜಯಧರ್, ಬಳ್ಳಾರಿ ಶಾಖೆಯ ಮ್ಯಾನೇಜರ್ ರಮೇಶ್ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತ ರಿದ್ದರು.

ನೂತನ ಶಾಖೆಗೆ ಶುಭ ಕೋರಿ ಮಾತನಾಡಿದ ಗ್ರಾಹಕ ಡಿ.ಬಿ.ಗೌಡ ಅವರು, "ಕಳೆದ 15 ವರ್ಷಗಳಿಂದ ಮಾರ್ಗದರ್ಶಿ ಚಿಟ್ ಕಂಪೆನಿಗೆ ನಾನು ಗ್ರಾಹಕ. ಈ ಸಂಸ್ಥೆ ಸರ್ಕಾರಿ ಚಿಟ್ ಫಂಡ್ ಮಾರ್ಗದರ್ಶಿ ಎಂದೇ ಖ್ಯಾತಿಯಾಗಿದ್ದು, ಗ್ರಾಹಕರ ನಂಬಿಕೆಗೆ ಯೋಗ್ಯವಾಗಿದೆ. ರಾಜ್ಯದ 28ನೇ ಶಾಖೆಯನ್ನು ಸಿಂಧನೂರಿನಲ್ಲಿ ಆರಂಭಿಸಿರು ವುದು ಹರ್ಷ ತಂದಿದೆ. ಇದರ ಸದುಪ 'ಯೋಗವನ್ನು ಎಲ್ಲರೂ ಪಡೆದು ಕೊಳ್ಳಬೇಕು" ಎಂದು ಮನವಿ ಮಾಡಿದರು. ಮಾರ್ಗದರ್ಶಿ ಚಿಟ್ ಫಂಡ್ಸ್‌ನ ಮತ್ತೋರ್ವ ಗ್ರಾಹಕರಾದ ಸುಜಾತಾ ಅವರು ಮಾತನಾಡಿ, "ನಾನು ಸರ್ಕಾರಿ ಉದ್ಯೋಗಿಯಾಗಿದ್ದು, ಸಿಂಧನೂರಿನಲ್ಲಿ ವಾಸವಾಗಿದ್ದೇನೆ. 15 ವರ್ಷಗಳಿಂದ ಮಾರ್ಗದರ್ಶಿ ಚಿಟ್ ಕಂಪೆನಿಯಲ್ಲಿ ಹಣ ಹೂಡುತ್ತಿದ್ದೇನೆ. ಉಳಿತಾಯದ ಹಣವನ್ನು ಕಟ್ಟಿ ಲಾಭ ಮಾಡಿಕೊಂಡಿದ್ದೇನೆ. ಗ್ರಾಹಕರ ನಂಬಿಕೆ, ವಿಶ್ವಾಸವನ್ನು ಕಂಪೆನಿ ದಿನೇ ದಿನೇ ವೃದ್ಧಿಸಿಕೊಂಡಿದೆ" ಎಂದು ತಿಳಿಸಿದರು. "ಕಳೆದ 22 ವರ್ಷಗಳಿಂದ ಮಾರ್ಗದರ್ಶಿ ಚಿಟ್ ಫಂಡ್‌ಗೆ ಗ್ರಾಹಕನಾಗಿದ್ದೇನೆ. ಇಷ್ಟು ವರ್ಷಗಳ ಕಾಲ ಜಿಲ್ಲಾ ಕೇಂದ್ರ ರಾಯಚೂರಿಗೆ ತೆರಳಿ ಹಣ ಕಟ್ಟಬೇಕಾಗಿತ್ತು. ಇದೀಗ ಸಿಂಧನೂರಿನಲ್ಲಿ ಶಾಖೆ ತೆರೆದಿ ರುವುದು ತುಂಬಾ ಸಂತೋಷ ವಾಗಿದೆ. ಇದರಿಂದ ಗ್ರಾಹಕರೆಲ್ಲರಿಗೂ ಶಾಖೆಗೆ ಬಂದು ಮಾಹಿತಿ ಪಡೆದು ಹಣ ಹೂಡಿಕೆ ಮಾಡಲು ಸುಲಭವಾಗುತ್ತದೆ. ಈ ಹಿಂದೆ ಬೇರೆ ಬೇರೆ ಚಿಟ್ ಫಂಡ್ಸ್‌ನಲ್ಲಿ ವ್ಯವಹಾರ ಮಾಡಿ ಕೈ ಸುಟ್ಟುಕೊಂಡಿದ್ದೇನೆ. ಆದರೆ ಮಾರ್ಗದರ್ಶಿಗೆ ಬಂದಾಗಿನಿಂದ ಒಂದು ದಿನವೂ ತಡವಾಗಿ ನಮ್ಮ ಹಣ ಕೊಟ್ಟಿರುವ ಉದಾಹರಣೆ ಇಲ್ಲ. ಮಾರ್ಗದರ್ಶಿ ಚಿಟ್ ಅಂದರೆ ನಂಬಿಕೆ, ನಂಬಿಕೆ ಎಂದರೆ ಮಾರ್ಗದರ್ಶಿ ಚಿಟ್ ಕಂಪೆನಿ" ಎಂದು ಗ್ರಾಹಕ ಪ್ರಕಾಶ್‌ಗೌಡ ಕೊಂಡಾಡಿದರು. ಸಿಂಧನೂರಿನ ಶುಭಶ್ರೀ ಕಾಟೇಜ್ ಇಂಡಸ್ಟ್ರೀ ಮಾಲೀಕ ಹಾಗೂ ಮಾರ್ಗದರ್ಶಿ ಕಂಪೆನಿಯ ಗ್ರಾಹಕರಾಗಿರುವ ಕೆ.ವೇಣುಬಾಬು ಎಂಬವರು ಮಾತನಾಡಿ, "ದಿವಂಗತ ರಾಮೋಜಿ ರಾವ್ ಅವರ ಒಡೆತನದ ಕಂಪೆನಿಗಳು ನಂಬಿಕೆ ಹಾಗೂ ಹಣಕಾಸಿನ ಶಿಸ್ತಿಗೆ ಹೆಸರುವಾಸಿಯಾಗಿವೆ. ನೌಕರರಿಗೆ ಸಿಗಬೇಕಾದ ವೇತನ, ಭತ್ಯೆ, ಬೋನಸ್ ಸೇರಿದಂತೆ ವಿವಿಧ ಸೌಲಭ್ಯಗಳು ಸಕಾಲಕ್ಕೆ ಸಿಗುತ್ತವೆ. ಇದರಿಂದ ಪ್ರೇರಣೆಗೊಂಡಿರುವ ನಾನು ನನ್ನ ಕಂಪೆನಿ ಯಲ್ಲಿರುವ ಉದ್ಯೋಗಿ ಗಳಿಗೂ ಸಕಾಲಕ್ಕೆ ದೊರೆಯಬೇಕಾದ ಸೌಲಭ್ಯಗಳನ್ನು ಒದಗಿಸುವಂತೆ ಮಾಡಿದ್ದೇನೆ. ಅಲ್ಲದೆ, ಮಾರ್ಗ ದರ್ಶಿ ಚಿಟ್ ಫಂಡ್ಸ್‌ಗೆ ಗ್ರಾಹಕ ನಾಗಿರುವುದು ಹೆಮ್ಮೆ" ಎಂದರು.

# ಸಚಿನ್ ಪುತ್ರ ಅರ್ಜುನ್ ತೆಂಡೂಲ್ಕರ್–ಸಾನಿಯಾ ಚಾಂದೋಕ್ ಅದ್ದೂರಿ ವಿವಾಹ



ಭಾರತೀಯ ಕ್ರಿಕೆಟ್ ದಿಗ್ಗಜ ಸಚಿನ್ ತೆಂಡೂಲ್ಕರ್ ಅವರ ಪುತ್ರ ಅರ್ಜುನ್ ತೆಂಡೂಲ್ಕರ್ ಇಂದು (ಮಾರ್ಚ್ 5) ಮುಂಬೈನಲ್ಲಿ ಸಾನಿಯಾ ಚಾಂದೋಕ್ ಅವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. ಅದ್ಧೂರಿಯಾಗಿ ನಡೆದ ಈ ಮದುವೆ ಸಮಾರಂಭದಲ್ಲಿ ಕುಟುಂಬಸ್ಥರು, ಆಪ್ತ ಸ್ನೇಹಿತರು, ಕ್ರೀಡಾ ಮತ್ತು ರಾಜಕೀಯ ಕ್ಷೇತ್ರದ ಗಣ್ಯರು ಪಾಲ್ಗೊಂಡು ನವದಂಪತಿಗಳಿಗೆ ಶುಭಕೋರಿದರು. ಸಾಮಾಜಿಕ ಮಾಧ್ಯಮದಲ್ಲಿ ಈ ಮದುವೆಯ ಫೋಟೋಗಳು ಭಾರೀ ವೈರಲ್ ಆಗಿವೆ.

ಈ ಶುಭ ಸಮಾರಂಭಕ್ಕೆ ಟೀಮ್ ಇಂಡಿಯಾದ ಮುಖ್ಯ ತರಬೇತುದಾರ ಗೌತಮ್ ಗಂಭೀರ್ ಸೇರಿದಂತೆ ಹಲವು ಕ್ರಿಕೆಟ್ ದಿಗ್ಗಜರು ಸಾಂಪ್ರದಾಯಿಕ ಉಡುಗೆಯಲ್ಲಿ ಆಗಮಿಸಿ ಗಮನ ಸೆಳೆದರು. ಟಿ20 ವಿಶ್ವಕಪ್‌ನ ಸೆಮಿಫೈನಲ್ ಪಂದ್ಯಕ್ಕೂ ಕೆಲವೇ ಗಂಟೆಗಳ ಮೊದಲು ನಡೆದ ಈ ವಿವಾಹ ಮಹೋತ್ಸವವು ಕ್ರಿಕೆಟ್ ಅಭಿಮಾನಿಗಳಲ್ಲಿ ಸಂಭ್ರಮ ಮೂಡಿಸಿದೆ. ಸಚಿನ್ ಅವರ ಪುತ್ರನ ಮದುವೆಯ ಹಿನ್ನೆಲೆ ಇಡೀ ತೆಂಡೂ ಲ್ಕರ್ ಕುಟುಂಬದಲ್ಲಿ ಹಬ್ಬದ ವಾತಾವರಣ ಮನೆಮಾಡಿದ್ದು, ಅಭಿಮಾನಿಗಳು ಸಾಮಾಜಿಕ ಜಾಲತಾಣಗಳಲ್ಲಿ ಶುಭಾಶಯಗಳ ಸುರಿಮಳೆಯನ್ನೇ ಹರಿಸಿದ್ದಾರೆ.

ಅರ್ಜುನ್ ತೆಂಡೂಲ್ಕರ್–ಸಾನಿಯಾ ಚಾಂದೋಕ್ ಮದುವೆಗೆ ಗೌತಮ್ ಗಂಭೀರ್ ಅವರು ಸಾಂಪ್ರದಾಯಿಕ ಉಡುಪಿನಲ್ಲಿ ಆಗಮಿಸಿ ಎಲ್ಲರ ಗಮನ ಸೆಳೆದರು. ಭಾರತ ತಂಡದ ಕೆಲವು ಆಟಗಾರರು ಸಹ ಅರ್ಜುನ್ ತೆಂಡೂಲ್ಕರ್ ಅವರ ವಿವಾಹ ಸಮಾರಂಭದಲ್ಲಿ ಪಾಲ್ಗೊಂಡಿದ್ದರು ಎಂದು ವರದಿಯಾಗಿದೆ. ಇಂಗ್ಲೆಂಡ್ ವಿರುದ್ಧದ ಟಿ20 ವಿಶ್ವಕಪ್ ಸೆಮಿಫೈನಲ್ ಪಂದ್ಯಕ್ಕೂ ಮುನ್ನ ಭಾರತ ತಂಡವು ತಂಗಿದ್ದ ಅದೇ ಹೋಟೆಲ್‌ನಲ್ಲಿ ಮದುವೆ ಸಮಾರಂಭ ಆಯೋಜನೆ ಆಗಿದ್ದರಿಂದ, ಆಟಗಾರರಿಗೆ ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಸಾಧ್ಯವಾಯಿತು ಎನ್ನಲಾಗಿದೆ. ಟೀಂ ಇಂಡಿಯಾ ಸೆಮಿಫೈನಲ್ ಪಂದ್ಯಕ್ಕಾಗಿ ತಂಗಿದ್ದ ಹೋಟೆಲ್ ಮತ್ತು ವಿವಾಹದ ವೇದಿಕೆ ಒಂದೇ ಆಗಿತ್ತು. ಪಂದ್ಯದ ಒತ್ತಡದ ನಡುವೆಯೂ, ತಂಡದ ಸದಸ್ಯರು ತಮ್ಮ ಹೋಟೆಲ್ ಆವರಣ ದಲ್ಲೇ ನಡೆದ ಈ ಸಂಭ್ರಮದಲ್ಲಿ ಭಾಗಿಯಾಗಿ ನವಜೋಡಿಗೆ ಶುಭ ಹಾರೈಸಿದರು.

ಅರ್ಜುನ್ ಮತ್ತು ಸಾನಿಯಾ ಕಳೆದ ವರ್ಷದ ಆಗಸ್ಟ್ ತಿಂಗಳಿನಲ್ಲಿ ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಸಾನಿಯಾ ಚಾಂದೋಕ್ ಅವರು ಅತ್ಯಂತ ಪ್ರಭಾವಿ ಹಾಗೂ ಪ್ರತಿಷ್ಠಿತ ಕುಟುಂಬದಿಂದ ಬಂದವರು. ಇವರು ಗ್ರಾವಿಸ್ ಗ್ರೂಪ್ ಅಧ್ಯಕ್ಷ ರವಿ ಘಾಯ್ ಅವರ ಮೊಮ್ಮಗಳು. ಸಾನಿಯಾ ಅವರು ಕಳೆದ ಹಲವು ವರ್ಷಗಳಿಂದ ತೆಂಡೂಲ್ಕರ್ ಕುಟುಂಬದೊಂದಿಗೆ ನಿಕಟ ಒಡನಾಟ ಹೊಂದಿದ್ದಾರೆ. ವಿಶೇಷವಾಗಿ ಅರ್ಜುನ್ ಅವರ ಸಹೋದರಿ ಸಾರಾ ತೆಂಡೂಲ್ಕರ್ ಅವರೊಂದಿಗೆ ಸಾನಿಯಾ ಉತ್ತಮ ಗೆಳೆತನವನ್ನು ಹೊಂದಿದ್ದಾರೆ.

# ಕಾಲಕಾಲಕ್ಕೆ ಪರೀಕ್ಷೆಗೊಳಪಡಿಸಬಹುದು ಆದರೆ, ಸನಾತನ ಧರ್ಮವನ್ನು ಎಂದಿಗೂ ಅಳಿಸಲು ಸಾಧ್ಯವಿಲ್ಲ : ಸಿಪಿ ರಾಧಾಕೃಷ್ಣನ್

ಬೆಳಗಾವಿ: ಸನಾತನ ಧರ್ಮವನ್ನು ಕಾಲದಿಂದ ಕಾಲಕ್ಕೆ ಪರೀಕ್ಷೆಗೆ ಒಳಪಡಿಸಬಹುದು.



ಆದರೆ, ಅದನ್ನು ಅಳಿಸಲು ಎಂದಿಗೂ ಸಾಧ್ಯವಿಲ್ಲ ಎಂದು ಉಪರಾಷ್ಟ್ರಪತಿ ಸಿಪಿ ರಾಧಾಕೃಷ್ಣನ್ ಗುರುವಾರ ಇಲ್ಲಿ ಹೇಳಿದರು. ಜಿಲ್ಲೆಯ ಯಡೂರಿನ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ರಾಜಗೋಪುರದ ಉದ್ಘಾಟನೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಈ ವಿಷಯ ತಿಳಿಸಿದರು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಈ ಸಂದರ್ಭವನ್ನು ಆಧ್ಯಾತ್ಮಿಕ ಪುನರುಜ್ಜೀವನ ಮತ್ತು ನಾಗರಿಕತೆಯ ಪುನರುತ್ಥಾನದ ಕ್ಷಣ ಎಂದು ಬಣ್ಣಿಸಿದ ಅವರು, ಭಾರತವು ಕೇವಲ ಒಂದು ರಾಷ್ಟ್ರವಲ್ಲ, ಬದಲಾಗಿ ಜೀವಂತ ನಾಗರಿಕತೆಯಾಗಿದೆ. ಸಿಂಧೂ ಕಣಿವೆಯಿಂದ ಕನ್ಯಾಕುಮಾರಿಯವರೆಗೆ ಪ್ರಜ್ಞೆಯ ನಿರಂತರ ಹರಿವು ಇದೆ ಎಂದು ಹೇಳಿದರು.

ವೇದಗಳ ಶಾಶ್ವತ ಜ್ಞಾನವನ್ನು ಮೊದಲು ಕೇಳಿದ ಪವಿತ್ರ ಭೂಮಿ ಇದಾಗಿದ್ದು, ಭಗವದ್ಗೀತೆಯ ಆಳವಾದ ಸಂದೇಶವು ಮಾನವಕುಲಕ್ಕೆ ಧೈರ್ಯದಿಂದ ವರ್ತಿಸಲು, ಸದಾಚಾರದಿಂದ ಬದುಕಲು ಮತ್ತು ನಂಬಿಕೆಯಿಂದ ಶರಣಾಗಲು ಮಾರ್ಗದರ್ಶನ ನೀಡುತ್ತಿದೆ ಎಂದು ಅವರು ಹೇಳಿದರು. ಹಿಂದೂ ಎಂಬ ಪ್ರಜ್ಞೆಯು ಕೇವಲ ಆಚರಣೆಗಳಿಗೆ ಸೀಮಿತವಾಗಿಲ್ಲ, ಬದಲಾಗಿ ಅದೊಂದು ಜೀವನ ವಿಧಾನ. 'ವಸುಧೈವ ಕುಟುಂಬಕಂ' ಎಂಬ ಕಾಲಾತೀತ ತತ್ವಶಾಸ್ತ್ರವನ್ನು ಮತ್ತು ಪ್ರಕೃತಿಯಲ್ಲಿ ಮತ್ತು ಪ್ರತಿಯೊಬ್ಬ ಮನುಷ್ಯನಲ್ಲಿ ದೈವತ್ವವನ್ನು ಕಾಣುವ ಭಾರತದ ಆಧ್ಯಾತ್ಮಿಕ ದೃಷ್ಟಿಕೋನವನ್ನು ಎತ್ತಿ ತೋರಿಸಿದರು.

ವೀರಶೈವ ಲಿಂಗಾಯತ ಸಂಪ್ರದಾಯವನ್ನು ಉಲ್ಲೇಖಿಸಿದ ಉಪಾಧ್ಯಕ್ಷರು, ಕರ್ನಾಟಕ ಮತ್ತು ನೆರೆಯ ಮಹಾರಾಷ್ಟ್ರದಲ್ಲಿ ಆಧ್ಯಾತ್ಮಿಕ, ಶೈಕ್ಷಣಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ಉನ್ನತಿಗೆ ಅದರ ಮಹತ್ವದ ಕೊಡುಗೆಯನ್ನು ಒತ್ತಿ ಹೇಳಿದ ಅವರು, ವೀರಶೈವ ಮಠಗಳು ಮತ್ತು ದೇವಾಲಯಗಳು ನಂಬಿಕೆ, ಸೇವೆ ಮತ್ತು ಸಾಮಾಜಿಕ ಸಾಮರಸ್ಯದ ಮೌಲ್ಯಗಳನ್ನು ಪೋಷಿಸುವಲ್ಲಿ ಪರಿವರ್ತನಾತ್ಮಕ ಪಾತ್ರವನ್ನು ವಹಿಸಿವೆ ಎಂದರು.

ಕರ್ನಾಟಕದ ಪ್ರಮುಖ ಲಿಂಗಾಯತ ಧಾರ್ಮಿಕ ನಾಯಕ ಮತ್ತು ಸಮಾಜ ಸುಧಾರಕ ಶಿವಯೋಗಿ ಶ್ರೀ ಕಾಡಸಿದ್ಧೇಶ್ವರ ಸ್ವಾಮೀಜಿ ಅವರಿಗೆ ರಾಧಾಕೃಷ್ಣನ್ ಗೌರವ ಸಲ್ಲಿಸಿದರು ಎಂದು ಪ್ರಕಟಣೆ ತಿಳಿಸಿದೆ. ಕಾಡಸಿದ್ಧೇಶ್ವರ ಮಠದ ಸತತ ಮಠಾಧೀಶರ ದೈನಂದಿನ ಪೂಜೆ, ಆಚರಣೆಗಳು, ನವೀಕರಣ ಕಾರ್ಯಗಳು ಮತ್ತು ಆಧ್ಯಾತ್ಮಿಕ ಸೇವೆಯನ್ನು ಸಂರಕ್ಷಿಸುವಲ್ಲಿ ಅವಿಶ್ರಾಂತ ಪ್ರಯತ್ನಗಳನ್ನು ಶ್ಲಾಘಿಸಿದರು. ಪ್ರಧಾನಿ ನರೇಂದ್ರ ಮೋದಿಯವರ 'ವಿಕಾಸ್ ಭಿ, ವಿರಾಸತ್ ಭಿ' (ಪರಂಪರೆಯ ಸಂರಕ್ಷಣೆಯೊಂದಿಗೆ ಪ್ರಗತಿ) ಎಂಬ ದೃಷ್ಟಿಕೋನವನ್ನು ಉಲ್ಲೇಖಿಸಿದ ಉಪರಾಷ್ಟ್ರಪತಿ, ಭಾರತದ ಅಭಿವೃದ್ಧಿ ಮತ್ತು ಪರಂಪರೆ ಪರಸ್ಪರ ಪೂರಕವಾಗಿರಬೇಕು. ಭಾರತ ಇಂದು ತಾಂತ್ರಿಕವಾಗಿ ಮುಂದುವರಿದ, ಆರ್ಥಿಕವಾಗಿ ಬಲಿಷ್ಠ ಮತ್ತು ಜಾಗತಿಕವಾಗಿ ಪ್ರಭಾವಶಾಲಿ ರಾಷ್ಟ್ರವಾಗಿ ಪ್ರಗತಿ ಸಾಧಿಸುತ್ತಿದೆ. ಜೊತೆಗೆ ನಾಗರಿಕತೆಯ ನೀತಿಯಲ್ಲಿ ದೃಢವಾಗಿ ಬೇರೂರಿದೆ ಎಂದು ಅವರು ಹೇಳಿದರು. ರಾಜಗೋಪುರದ ಉದ್ಘಾಟನೆಯನ್ನು ನಂಬಿಕೆಯ ಪುನರುಚ್ಚರಣೆ ಮತ್ತು ಸಂಪ್ರದಾಯದ ನಿರಂತರತೆ ಎಂದು ಬಣ್ಣಿಸಿದ ರಾಧಾಕೃಷ್ಣನ್, ಪವಿತ್ರ ಸ್ಥಳಗಳ ಪುನರುಜ್ಜೀವನವು ಕೇವಲ ವಾಸ್ತುಶಿಲ್ಪದ ಬಗ್ಗೆ ಅಲ್ಲ, ಸಾಂಸ್ಕೃತಿಕ ಆತ್ಮವಿಶ್ವಾಸ ಮತ್ತು ಆಧ್ಯಾತ್ಮಿಕ ಅರಿವನ್ನು ಮರುಸ್ಥಾಪಿಸುವುದರ ಬಗ್ಗೆ ಎಂದು ಹೇಳಿದರು.

# ಮಾ.7ರಂದು ಬೆಳಗಾವಿಯಲ್ಲಿ ಜಿಲ್ಲಾ ಮಟ್ಟದ ಉದ್ಯೋಗ ಮೇಳ:
## ಜಿ.ಪಂ. ಸಿಇಒ ರಾಹುಲ್ ಶಿಂಧೆ

ಬೆಳಗಾವಿ: ಶಿವಬಸವ ನಗರದಲ್ಲಿರುವ ಎಸ್.ಜಿ. ಬಾಳೇಕುಂದ್ರಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಮಾ.7 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಜಿಲ್ಲಾಮಟ್ಟದ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಸಿಇಒ ರಾಹುಲ್ ಶಿಂಧೆ ತಿಳಿಸಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಂಜೀವಿನಿ KSLRPS, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ, ಜಿಲ್ಲಾ ಕೌಶಲ್ಯ ಮಿಷನ್, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಶ್ರೀ ಸಿದ್ದರಾಮೇಶ್ವರ ಶಿಕ್ಷಣ ಸಂಸ್ಥೆ ವತಿಯಿಂದ ಉದ್ಯೋಗ ಮೇಳ ಆಯೋಜಿಸಲಾಗಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ಮೂಲಕ ಮಾಹಿತಿ ನೀಡಿರುವ ಅವರು, ಉದ್ಯೋಗ ಮೇಳಕ್ಕೆ ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ಅವರು ಚಾಲನೆ ನೀಡಲಿದ್ದಾರೆ. ಬೆಳಗಾವಿ ಉತ್ತರ ಶಾಸಕ ಆಸೀಫ್ ಸೇಠ್ ಅಧ್ಯಕ್ಷತೆ ವಹಿಸಲಿದ್ದಾರೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಮುಖ್ಯ ಅತಿಥಿಗಳಾಗಿ ಭಾಗವಹಿಸ



ಲಿದ್ದಾರೆ ಎಂದು ತಿಳಿಸಿದರು.

**100ಕ್ಕೂ ಹೆಚ್ಚು ಕಂಪನಿಗಳು:** ಉದ್ಯೋಗ ಮೇಳದಲ್ಲಿ ಬೆಳಗಾವಿ, ಹುಬ್ಬಳ್ಳಿ, ಬೆಂಗಳೂರು ನಗರಗಳಿಂದ 100ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸುತ್ತಿವೆ. ಎಸ್.ಎಸ್.ಎಲ್.ಸಿ., ಪಿಯುಸಿ, ಐಟಿಐ, ಡಿಪ್ಲೊಮಾ, ಯಾವುದೇ ಪದವಿ, ಸ್ನಾತಕೋತ್ತರ ಪದವಿ ಹಾಗೂ ಇನ್ನಿತರ ಶಿಕ್ಷಣ ಪೂರೈಸಿರುವ ಜಿಲ್ಲೆಯ ಯುವಕ–ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಉದ್ಯೋಗಗಳನ್ನು ಪಡೆದುಕೊಳ್ಳಬೇಕು ಹಾಗೂ ಉದ್ಯೋಗ ಮೇಳವನ್ನು ಯಶಸ್ವಿಗೊಳಿಸಬೇಕು ಎಂದು ರಾಹುಲ್ ಶಿಂಧೆ ಕೋರಿದ್ದಾರೆ.

**2025ರ ಅಕ್ಟೋಬರ್‌ನಲ್ಲಿ ಮೈಸೂರಿನಲ್ಲಿ ನಡೆದಿತ್ತು ಉದ್ಯೋಗ ಮೇಳ:** ಮೈಸೂರು ಜಿಲ್ಲೆಯ ಮಹಾರಾಜ ಕಾಲೇಜು ಮೈದಾನದಲ್ಲಿ ಅಕ್ಟೋಬರ್ ತಿಂಗಳಲ್ಲಿ ಮೈಸೂರು ವಿಭಾಗ ಮಟ್ಟದ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿತ್ತು. ಈ ಮೇಳದ ಆರಂಭಕ್ಕೂ ಮುನ್ನವೇ 15,000 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. ಇಲ್ಲಿ 221 ಕಂಪನಿಗಳು ಭಾಗವಹಿಸಿದ್ದವು. ಈ ಬಗ್ಗೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಮಾಹಿತಿ ನೀಡಿದ್ದರು.

**6 ಉದ್ಯೋಗ ಮೇಳದಲ್ಲಿ 12,966 ಅಭ್ಯರ್ಥಿಗಳಿಗೆ ಉದ್ಯೋಗ:** 2025ರ ಅಕ್ಟೋಬರ್‌ಗೂ ಮುಂಚೆ ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ನಡೆಸಿದ 6 ಉದ್ಯೋಗ ಮೇಳದಲ್ಲಿ 12,966 ಅಭ್ಯರ್ಥಿಗಳು ಉದ್ಯೋಗ ಪಡೆದುಕೊಂಡಿದ್ದರು. ಕಾಲೇಜುಗಳ ಸಹಯೋಗದೊಂದಿಗೆ ನಡೆಸಿದ 3 ಉದ್ಯೋಗ ಮೇಳದಲ್ಲಿ 1177 ಅಭ್ಯರ್ಥಿಗಳಿಗೆ ಉದ್ಯೋಗ ದೊರಕಿದೆ. ಉದ್ಯೋಗ ಮೇಳದಲ್ಲಿ ಕನಿಷ್ಠ ಹಾಗೂ ಗರಿಷ್ಠ ವಿದ್ಯಾರ್ಹತೆ ಹೊಂದಿರುವವರಿಗೂ ಉದ್ಯೋಗಾವಕಾಶವಿದೆ ಎಂದು ಆಗ ಸಚಿವ ಶರಣ ಪ್ರಕಾಶ್ ಪಾಟೀಲ್ ಮಾಹಿತಿ ನೀಡಿದ್ದರು.

# ಹೆಣ್ಣು ಮಕ್ಕಳು, ನಟಿಯರ ಗೌರವಕ್ಕೆ ಚ್ಯುತಿ ತರಬೇಡಿ ಎಂದ ಶಿವಣ್ಣ

ಕನ್ನಡ ಚಿತ್ರರಂಗದಲ್ಲಿ (ನಟಿಯರು ವಸ್ತುಗಳಲ್ಲ) ಎನ್ನುವ ಅಭಿಯಾನವು ಮುಂದುವರಿದಿದೆ. ಇದೀಗ ಈ ವಿಚಾರವಾಗಿ ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ನಟ ಶಿವರಾಜ್ ಕುಮಾರ್ ಅವರು ಟ್ವೀಟ್‌ವೊಂದನ್ನು ಮಾಡಿದ್ದು, ಈ ಟ್ವೀಟ್‌ಗೆ ಕನ್ನಡಿಗರಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ನಟ ಶಿವರಾಜ್ ಕುಮಾರ್ ಅವರ ಟ್ವೀಟ್‌ಗೆ ಹಲವರು ಬೆಂಬಲ ಸೂಚಿಸಿದ್ದರೆ, ಈ ಕಾಲದಲ್ಲೂ ಹೆಣ್ಣು ಮಕ್ಕಳನ್ನು ಗೌರವಿಸಿ ಎಂದು ಹೇಳಬೇಕೆಂದರೆ ಅದು ನಮ್ಮ ದೌರ್ಭಾಗ್ಯ. ದಯವಿಟ್ಟು ಆತ್ಮಸಾಕ್ಷಿಯಿಟ್ಟುಕೊಂಡು ಕೆಲಸ ಮಾಡಿ.

ಹೆಣ್ಣು ಮಕ್ಕಳ, ನಟಿಯರ ಗೌರವಕ್ಕೆ ಚ್ಯುತಿ ತರಬೇಡಿ. – ಶಿವರಾಜ್ ಕುಮಾರ್ ಎನ್ನುವ ಪೋಸ್ಟ್ ಅನ್ನು ನಟ ಶಿವಣ್ಣ ಹಂಚಿಕೊಂಡಿದ್ದಾರೆ. ಇದಕ್ಕೆ ಕನ್ನಡಿಗರಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಮಹಿಳೆಯರನ್ನು ಮಾತಿನಲ್ಲಿ ಮಾತ್ರವಲ್ಲ, ಕೃತಿಯಲ್ಲೂ ಗೌರವಿಸಬೇಕು. ಚಲನಚಿತ್ರಗಳಲ್ಲಿ ನಟಿಯರನ್ನು ಲೈಂಗಿಕವಾಗಿ ಚಿತ್ರಿಸುವುದನ್ನು ನಿಲ್ಲಿಸಿ. ಐಟಂ ಹಾಡುಗಳು, ಅಶ್ಲೀಲ ದೃಶ್ಯಗಳು, ಅನಗತ್ಯ ಲಿಪ್–ಲಾಕ್ ದೃಶ್ಯಗಳು ಮತ್ತು ಅಗ್ಗದ ಮನರಂಜನೆಗಾಗಿ



ಬಳಸುವ ನಿಂದನೀಯ ಭಾಷೆಯನ್ನು ನಿಷೇಧಿಸಿ. ಮಹಿಳೆಯರು ಘನತೆಗೆ ಅರ್ಹರು, ವಸ್ತುಗಳಲ್ಲ ಎಂದು ನೆಟ್ಟಿಗರೊಬ್ಬರು ಹೇಳಿದ್ದಾರೆ. ಸಚಿನ್ ಎನ್ನುವವರು ನಟಿಯರನ್ನು ಚಿತ್ರಗಳನ್ನು ನಿರ್ಮಿಸುವವರೇ ಮೊದಲು ವಸ್ತುವಾಗಿ ಪರಿಗಣಿಸುತ್ತಿದ್ದಾರೆ.

ನಟಿಯರನ್ನು ಸರಿಯಾಗಿ / ಸಭ್ಯ ರೀತಿಯಲ್ಲಿ ತೋರಿಸುವಲ್ಲಿ ಚಿತ್ರ ನಿರ್ಮಿಸುವವರ ಜವಾಬ್ದಾರಿಯೂ ಇದೆ ಎಂದು ಹೇಳಿದ್ದಾರೆ. ಪುನೀತ್ ಎನ್ನುವವರು, ನಾವು ಯಾವಾಗಲೂ ನಮ್ಮ ಪ್ರೀತಿಯ ಅಣ್ಣಾವರು ಕುಟುಂಬದ ನೀತಿಯನ್ನು ಅನುಸರಿಸುತ್ತೇವೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

# ಇಂದು ರಾಜ್ಯ ಬಜೆಟ್ ಮಂಡನೆ: ಹಾಸನ ಜಿಲ್ಲೆಯ ಜನರ ಬಹುದಿನಗಳ ಕನಸು ಈ ಬಾರಿಯಾದರೂ ಈಡೇರುತ್ತಾ

ಹಾಸನ: ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ (ಮಾ.6) ದಾಖಲೆಯ 17ನೇ ಬಜೆಟ್ ಮಂಡಿಸಲಿದ್ದು, ರಾಜ್ಯದ ಜನತೆ ಕುತೂಹಲದಿಂದ ಕಾಯುತ್ತಿದ್ದಾರೆ. ಈ ಬಾರಿಯ ಬಜೆಟ್ 4.09ಲಕ್ಷ ಕೋಟಿಗಳಾಗಬಹುದು ಎಂದು ವಿಶ್ಲೇಷಣೆ ಮಾಡಲಾಗುತ್ತಿದೆ. ಕೈಗಾರಿಕೆ ಮತ್ತು ಮಹಿಳಾ ಸಬಲೀಕರಣಕ್ಕೆ ಮತ್ತಷ್ಟು ಉತ್ತೇಜನ ನೀಡುವ ಸಾಧ್ಯತೆಯಿದೆ. ಅದರ ಜೊತೆಗೆ ಕೃಷಿ, ಆರೋಗ್ಯ, ಕೈಗಾರಿಕೆ, ರಸ್ತೆ, ನೀರಾವರಿ ಹೀಗೆ ಹಲವು ಕ್ಷೇತ್ರಗಳಿಗೆ ವಿಶೇಷ ಒತ್ತು ನೀಡುವ ಮೂಲಕ ಉತ್ತಮ ಬಜೆಟ್ ನೀಡಬಹುದು ಎಂದು ನಿರೀಕ್ಷಿಸಲಾಗುತ್ತಿದೆ. ಅದಕ್ಕೆ ಹಾಸನ ಜಿಲ್ಲೆಯೂ ಹೊರತಾಗಿಲ್ಲ. ಈ ಸಾಲಿನ ಬಜೆಟ್‌ನಲ್ಲಿ ವಿವಿಧ ಯೋಜನೆಗಳು ಘೋಷಣೆಯಾಗುವುದನ್ನು ಇಲ್ಲಿನ ಜನ ಎದುರು ನೋಡುತ್ತಿದ್ದಾರೆ. ಕಳೆದ 3–4 ದಶಕಗಳಿಂದಲೂ ಹಾಸನ ಅಭಿವೃದ್ಧಿಗೊಳ್ಳದೇ ಕೆಲವು ಸಮಸ್ಯೆಗಳು ಹಾಗೇಯೇ ಉಳಿದಿದೆ. ಇಲ್ಲಿನ ಕೈಗಾರಿಕಾ ವಲಯ, ಐಟಿ ಪಾರ್ಕ್, ಆನೆ ಕಾರಿಡಾರ್ ನಂತಹ ಹತ್ತಾರು ಸಮಸ್ಯೆಗಳಿಗೆ ಪರಿಹಾರ ದೊರಕದೇ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದು, ಈ ಬಾರಿಯ ಬಜೆಟ್‌ನಲ್ಲಿ ಅವುಗಳಿಗೆ ಜೀವಸಿಗಬಹುದು ಎಂದು ಹಾಸನ ಜಿಲ್ಲೆಯ ಜನರು ಕಾತರದಿಂದ ಎದುರು ನೋಡುತ್ತಿದ್ದಾರೆ. ಆರ್ಥಿಕ ತಜ್ಞರು ಸೇರಿದಂತೆ ಕೆಲವು ಮುಖಂಡರು ಈಟಿವಿ ಭಾರತದೊಂದಿಗೆ ಮಾತನಾಡಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

"ಈಗಾಗಲೇ, ಬೆಂಗಳೂರು, ಮಂಗಳೂರು, ಹುಬ್ಬಳ್ಳಿ, ತುಮಕೂರು, ದಾಬಸ್ ಪೇಟೆ, ಮೈಸೂರು ದಾವಣಗೆರೆ, ನರ್ಸಾಪುರ ಮುಂತಾದ ಜಿಲ್ಲೆಗಳಲ್ಲಿ ಕೈಗಾರಿಕೆಗಳು ತುಂಬಿಹೋಗಿದ್ದು, ಹಾಸನ ಸದ್ಯ ಖಾಲಿ ಇದೆ. ಈ ಭಾಗಕ್ಕೆ ಐಟಿ ಅಥವಾ ಕೈಗಾರಿಕಾ ವಲಯ ಬಂದರೇ, ನಿರುದ್ಯೋಗ ಸಮಸ್ಯೆ ಶೇಕಡಾವಾರು ಕಡಿಮೆಯಾಗುವ ಸಾಧ್ಯತೆಯಿದೆ. ಮುಖ್ಯವಾಗಿ ವಿಮಾನ ನಿಲ್ದಾಣದ ಬಗ್ಗೆ. ಕಾರಣ ಕೇಂದ್ರ ಮತ್ತು ರಾಜ್ಯ ಸರ್ಕಾರ ಸಮನ್ವಯ ಸಾಧಿಸಿದ್ದೇ ಆದರೆ, ಇದಕ್ಕೊಂದು ರೂಪುರೇಷೆ ಕೊಟ್ಟಿದ್ದೆ ಆದಲ್ಲಿ ಹಾಸನದ ವಿಮಾನ ನಿಲ್ದಾಣ ನಿರ್ಮಾಣಕ್ಕೆ ವೇಗ ಸಿಗಬಹುದು ಎಂದು ಆರ್ಥಿಕ ತಜ್ಞರಾದ ಚಂದ್ರಶೇಖರ್ ಎಂಬುವರು ಕೆಲವು ವಿಚಾರಗಳನ್ನು ಇಲ್ಲಿ ವಿಸ್ತೃತವಾಗಿ ವಿವರಿಸಿದರು. "ಮೊನ್ನೆ ಸಿಎಂ ಹಾಸನಕ್ಕೆ ಬಂದಾಗ ಈ ಬಾರಿ ಬಜೆಟ್‌ನಲ್ಲಿ ಮೈಸೂರಿನ ಬೃಂದಾವನ ಮಾದರಿಯಲ್ಲಿಯೇ ಹಾಸನದ ಗೊರೂರಿನ ಹೇಮಾವತಿ ಜಲಾಶಯದ ಬಳಿ ಪಾರ್ಕ್ ನಿರ್ಮಾಣ ಮಾಡುವುದಾಗಿ ಹೇಳಿದ್ದರು. ಈ ಬಾರಿ ಬಜೆಟ್‌ನಲ್ಲಿ ಅದನ್ನು ನಾವು ನಿರೀಕ್ಷೆ ಮಾಡುತ್ತಿದ್ದೇವೆ. ಕಳೆದ ಎರಡೂವರೆ ವರ್ಷಗಳಿಂದ ಅಭಿವೃದ್ಧಿಯಲ್ಲಿ ಹಾಸನ ಹಿಂದುಳಿದಿದ್ದು, ಈ ಬಾರಿ ನಮ್ಮ ನಿರೀಕ್ಷೆಗಳು ಗರಿಗೆದರಿವೆ. ಮುಖ್ಯವಾಗಿ ಜಿಲ್ಲೆಗೆ ಒಂದು



ಆನೆ ಧಾಮ ಮಾಡ್ತೀವಿ ಅಂತ ಹೇಳುತ್ತಿದ್ದಾರೆ. ಇದುವರೆಗೂ ಅದು ಕನಸಾಗಿಯೇ ಉಳಿದಿದೆ. ಇದು ತುಂಬಾ ಗಂಭೀರ ಸಮಸ್ಯೆ. ಬೇಲೂರು, ಸಕಲೇಶಪುರ, ಆಲೂರು ತಾಲೂಕಿನ ಕೆಲವು ಭಾಗಗಳು ತೀರಾ ಸಮಸ್ಯೆ ಎದುರಿಸುತ್ತಿವೆ. ಚಿಕ್ಕಮಗಳೂರು ಜಿಲ್ಲೆಯಲ್ಲಿಯೂ ಆನೆಗಳ ಸಮಸ್ಯೆ ಇದೆ. ಮಾನವ ಮತ್ತು ಕಾಡಾನೆ ಸಂಘರ್ಷ ನಡೆಯುತ್ತಿದೆ. ಅವು ನಾಡಿನಲ್ಲೇ ಹುಟ್ಟಿ ಬೆಳೆದಂತಹ ಆನೆಗಳು. ಅವು ಕಾಡಾನೆ ಅಂತಾನೂ ಹೇಳೋಕೂ ಆಗಲ್ಲ. ಏಕೆಂದರೆ ಅವುಗಳ ಆಹಾರ ಕ್ರಮ ಎಲ್ಲವೂ ಕೂಡ ಬದಲಾವಣೆಯಾಗಿದೆ. ಶ್ರೀಲಂಕಾ ಮಾದರಿಯ ಒಂದು ಧಾಮಗಳನ್ನು ಮಾಡಬೇಕು ಎಂದು ನಾವು ಬಹಳ ಕಾಲದಿಂದ ಹೇಳುತ್ತಿದ್ದೇವೆ. ಸರ್ಕಾರ ಮಾತ್ರ ನಿರ್ಲಕ್ಷ್ಯ ತೋರುತ್ತಿದೆ. ನಮ್ಮ ಚನ್ನಪಟ್ಟಣ ಬಸ್ ಸ್ಟ್ಯಾಂಡ್ ಪಕ್ಕದಲ್ಲಿ ರೈಲ್ವೆ ಮೇಲ್ಸೇತುವೆ ಆಗ್ತಾ ಇದೆ. 2019ರಲ್ಲಿ ಆರಂಭವಾಗಿದ್ದು ಈವರೆಗೂ ಮುಗಿದಿಲ್ಲ. ಒಂದು ಮೇಲ್ಸೇತುವೆ ನಿರ್ಮಾಣಕ್ಕೆ 8–10 ವರ್ಷ ಬೇಕು ಎಂದರೆ ಅದು ಎಲ್ಲರಿಗೂ ಅವಮಾನ. ಇನ್ನೊಂದು ಬಹಳ ಮುಖ್ಯವಾದದ್ದು ಪ್ರಾಥಮಿಕ ಶಾಲೆಗಳ ವಿಚಾರ. ಸರ್ಕಾರಿ ಶಾಲೆಗಳ ವಿಚಾರದಲ್ಲಿ ಸರ್ಕಾರ ತುಂಬಾ ನಿರ್ಲಕ್ಷ ಮಾಡುತ್ತಿದೆ. ಏಕಖ ಮ್ಯಾಗ್ನೆಟಿಕ್ ಅಂತೇಳಿ ಈಗ ಏನೋ ಮಾಡುತ್ತಿದ್ದಾರೆ. ಇದು ಹಳ್ಳಿ ಶಾಲೆಗಳನ್ನು ಮುಚ್ಚುವಂತಹ ಕೆಲಸ. ಬಹು ದೊಡ್ಡ ಪ್ರಮಾದವಿದು. ಇದನ್ನು ಮಾಡಬಾರದು. ಹಾಗೇ, ಆರೋಗ್ಯಕ್ಕೆ ಸಂಬಂಧಪಟ್ಟಂತೆಯೂ ನಿರೀಕ್ಷೆಗಳಿವೆ. ರಾಜ್ಯ ಸರ್ಕಾರ ಇಂಗ್ಲೆಂಡಿಗೆ ನಿಯೋಗ ಕಳಿಸಿದ್ದು, ಅದನ್ನು ಅಧ್ಯಯನ ಮಾಡ್ಕೊಂಡು ಬಂದಿದ್ದಾರೆ. ಅದನ್ನು ಕಾರ್ಯರೂಪಕ್ಕೆ ತರಲಿಕ್ಕೆ ನಮ್ಮ ಬಜೆಟ್‌ನಲ್ಲಿ ಏನಾದರೂ ಗಮನ ಹರಿಸುವಂತಹ ಕೆಲಸ ಆಗಬೇಕು" ಎಂದು ಹಿರಿಯ ಪತ್ರಕರ್ತ ಆರ್.ಪಿ.ವೆಂಕಟೇಶ್ ಮೂರ್ತಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

**ನಮಗೆ ಬಹಳಷ್ಟು ನಿರೀಕ್ಷೆಗಳಿವೆ:** "ಎರಡು ವರ್ಷದಿಂದ ಹಾಸನದ ಜನರಿಗೆ ಬಹಳಷ್ಟು ನಿರೀಕ್ಷೆಗಳಿವೆ. ಸಿದ್ದರಾಮಯ್ಯ ಅವರ 17ನೇ ಬಜೆಟ್ ನಾವೆಲ್ಲ ಅತಿ ಉತ್ಸಾಹದಿಂದ ನಿರೀಕ್ಷೆ ಮಾಡ್ತಾ ಇದ್ದೀವಿ. ರೈತರಿಗೆ ಮತ್ತು ನಮ್ಮ ಈ ಸಾರ್ವಜನಿಕರಿಗೆ ಅನುಕೂಲವಾಗತಕ್ಕಂತ ಬಜೆಟ್ ನೀಡಿದರೆ ಈ ಬಜೆಟ್‌ಗೆ ಅರ್ಥ ಇರುತ್ತೆ. ಸದ್ಯ ನಮ್ಮಲ್ಲಿ ಅನೇಕ ತೊಂದರೆಗಳಿವೆ. ಜಿಲ್ಲೆಯಲ್ಲಿ ಕಾಡಾನೆ ಸಮಸ್ಯೆ, ರಸ್ತೆ ಸಮಸ್ಯೆ, ಕುಡಿಯುವ ನೀರಿನ ಸಮಸ್ಯೆ, ಒಳಚರಂಡಿ, ರೈಲ್ವೆ ಮೇಲ್ಸೇತುವೆ, ನೀರಾವರಿ ಹೀಗೆ ಅನೇಕ ಸಮಸ್ಯೆಗಳಿವೆ. ರೈತಾಪಿ ವರ್ಗ ಸೇರಿದಂತೆ ನಗರ ಪ್ರದೇಶದ ಜನರಿಗೂ ಅನುಕೂಲವಾಗುವ ರೀತಿ ಒಂದು ಉತ್ತಮವಾದ ಕೆಲಸಗಳನ್ನು ಮಾಡೋದಕ್ಕೆ ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ಅನುಕೂಲ ಇದೆ. ಈ ಗ್ಯಾರಂಟಿಗಳ ಬದಲಿಗೆ ರೈತರಿಗೆ ಏನಾದ್ರೂ ಉಪಯೋಗದ ಗೊಬ್ಬರ ಕೊಡೋದಾಗ್ಲಿ ಅಥವಾ ಕೃಷಿ ಉಪಕರಣಗಳಿಗೆ ಸಬ್ಸಿಡಿ ನೀಡುವ ಯೋಜನೆ ರೂಪಿಸಿದರೆ ಒಳ್ಳೆಯದು. ಎಲ್ಲ ರೈತರು ಸ್ವಾವಲಂಬಿಗಳಾಗುತ್ತಾರೆ. ಒಂದು ಕೆಲಸ ಮಾಡೋದಕ್ಕೆ ಹುಮ್ಮಸ್ಸು ಬರ್ತದೆ. ಮತ್ತೆ ಬಸ್ ಪಾಸ್‌ಗಳ ವಿಷಯದಲ್ಲೂ ಕೂಡ ಕೆಲವೊಂದು ನಿಯಂತ್ರಗಳನ್ನ ಹಾಕಿದರೆ ಅದರಲ್ಲೂ ಕೂಡ ಒಂದು ಅನುಕೂಲ ಆಗುತ್ತದೆ. ಇವೆಲ್ಲವನ್ನೂ ಗಮನದಲ್ಲಿಟ್ಟುಕೊಂಡು ಈ ವರ್ಷದ ಬಜೆಟ್ ಜನೋಪಯೋಗಿ ಆಗಬೇಕು ಎಂಬುದು ನಮ್ಮ ಅಭಿಪ್ರಾಯ" ಎಂದು ಸ್ಥಳೀಯರಾದ ಶಿವರಾಮ್ ತಿಳಿಸಿದರು.

**ಪ್ರಾಣಿಗಳು ಮಾನವ ಸಂಘರ್ಷ ಕೊನೆಗೊಳಿಸಲು ಪ್ರಯತ್ನ ಮಾಡಬೇಕು:** "ಚುನಾವಣೆ ಸಂದರ್ಭದಲ್ಲಿ ರಾಜಕೀಯ ಮಾಡಿಕೊಳ್ಳಲಿ. ಆದರೆ, ಸರ್ಕಾರ ಅಂತ ಬಂದಮೇಲೆ ಪಕ್ಷ ಭೇದ ಮರೆತು ಕ್ಷೇತ್ರಗಳಿಗೆ ಅನುದಾನ ನೀಡಬೇಕು. ಆ ಕೆಲಸವನ್ನು ಸಿದ್ದರಾಮಯ್ಯ ಮಾಡ್ತಾ ಇಲ್ಲ. ಕೇವಲ ಅರಸೀಕೆರೆಗೆ ಮಾತ್ರ ಹೆಚ್ಚು ಅನುದಾನ ನೀಡುತ್ತಿರುವುದು ಬೇಸರದ ಸಂಗತಿ. ಬೇರೆ ಪಕ್ಷದ ಶಾಸಕರು ಸರ್ಕಾರದ ಒಂದು ಭಾಗವಾಗಿದ್ದು, ಆ ಕ್ಷೇತ್ರಗಳಿಗೆ ಹಣ ಬಿಡುಗಡೆ ಮಾಡಬೇಕು. 17ನೇ ಬಾರಿ ಬಜೆಟ್ ಮಂಡನೆ ಮಾಡುತ್ತಾ ಇರುವುದು ಅಭಿನಂದನಾ ವಿಷಯ. ಮಾನವ ಮತ್ತು ಪ್ರಾಣಿ ಸಂಘರ್ಷ ಹಾಸನದಲ್ಲಿ ತುಂಬಾ ಹೆಚ್ಚಿದೆ. ಅದನ್ನ ನಿವಾರಣೆ ಮಾಡುವುದಕ್ಕೆ ಇವರು ಬಜೆಟ್‌ನಲ್ಲೇ ಒಂದು ಮುಖ್ಯ ಯೋಜನೆ ರೂಪಿಸಬೇಕು. ಒಂದು ಶ್ವೇತಪತ್ರ ಹೊರಡಿಸಿ ಬಜೆಟ್ ಮಾಡಿದರೆ ಉತ್ತಮ. ಮಾನವ ಪ್ರಾಣಿ ಸಂಘರ್ಷ ಇಂದಿನದ್ದಲ್ಲ. ರಾಷ್ಟ್ರೀಯ ಸಂಪತ್ತು ಪ್ರಾಣಿಗಳಾಗಿರೋದ್ರಿಂದ ಅದನ್ನು ಉಳಿಸಿಕೊಳ್ಳೋದಕ್ಕೆ ಬಜೆಟ್‌ನಲ್ಲೇ ಮಾಡ್ಬೇಕು. ಪ್ರಾಣಿಗಳಿಂದ ಮಾನವರ ಹತ್ಯೆ ತಡೆಯಬೇಕು. ಜನಪ್ರತಿನಿಧಿಗಳ ಇಚ್ಛಾಶಕ್ತಿ ಇದ್ದು ಕೆಲಸ ಮಾಡಿದರೆ, ಪ್ರಾಣಿ–ಮಾನವರ ಹಾಗೂ ಕಾಡುಗಳನ್ನ ಉಳಿಸಬಹುದು. ಇನ್ನು ಹಾಸನದ ಬಹುಪಾಲು ಯುವಕರು, ನಿರುದ್ಯೋಗ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಕೆಲವರು ಬೆಂಗಳೂರು ಕಡೆಗೆ ಮುಖ ಮಾಡಿದ್ದಾರೆ. ಹಾಸನ, ಚಿಕ್ಕಮಗಳೂರು, ಕೊಡಗು ಭಾಗದಲ್ಲಿ ಒಂದು ಐಟಿ ಪಾರ್ಕ್ ಅಂತ ಮಾಡಿದರೆ ಉತ್ತಮ. ಜಿಲ್ಲೆಯಲ್ಲಿಯೇ 7 ತಾಂತ್ರಿಕ ಕಾಲೇಜುಯಿದೆ. ಇಲ್ಲಿ ಶಿಕ್ಷಣ ಮುಗಿಸಿ ಬೆಂಗಳೂರಿಗೆ ಹೋಗಿ ಕೆಲಸ ಹುಡುಕುತ್ತಾರೆ. ಇಲ್ಲೆಯೇ ಪಾರ್ಕ್ ಆದ್ರೆ, ಇಲ್ಲಿಯೇ ಉತ್ಪಾದನೆ ಆಗುತ್ತೆ. ರೈಲ್ವೆ ಮೇಲ್ಸೇತುವೆ ಅತ್ಯವಶ್ಯಕ. ಈ ಬಜೆಟ್‌ನಲ್ಲಿ ಹೆಚ್ಚು ಅನುದಾನ ದೊರಕಿದರೆ ಈ ವರ್ಷವೇ ಪೂರ್ಣಗೊಳ್ಳಬಹುದು ಎಂದು ಬಿಜೆಪಿ ಮುಖಂಡ ವಿಜಯ್ ಕುಮಾರ್ ಹೇಳಿದರು.

Edited, Printed, Published & Owned by : ARUN KUMAR K . Printed at: ARUN PRINTERS & PUBLISHERS ", No. 20, Sri Kempamma Nilaya, Kashi Vishwanatha Road, kote Temple, K.R.Puram, Bangalore 560 036. Published at : No. 20, Sri Kempamma Nilaya, Kashi Vishwanatha Road, kote Temple, K.R.Puram, Bangalore 560 036. Editor: ARUN KUMAR K.